ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 37 ಸಂಚಿಕೆ- 37 | PAGE- 8 ಪುಟ-8 | ಶುಕ್ರವಾರ 14.03.2025 | RS.2/- ಬೆಲೆ 2/-



ಹುಮನಾಬಾದ್. ಶಿವಪುರ ಹನುಮಾನ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಯನ್ನು ಮಾಜಿ ಸಚಿವರ ಪುತ್ರ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷರು ಹಾಗೂ ಯುನಿಯನ್ ಬ್ಯಾಂಕ್ ಜಿಲ್ಲಾ ಅಧ್ಯಕ್ಷರು ಆದ ಅಭಿಷೇಕ ಪಾಟೀಲ ವಿಕ್ಷಿಸಿದರು.

## ಮುಂದಿನ ವರ್ಷ ರಾಜ್ಯದಲ್ಲಿ ಹೆಚ್ಚುವರಿ ಅದಾಯದ ಬಜೆಟ್ ಮಂಡನೆ : ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮಾ.13: ಮುಂದಿನ ವರ್ಷದಿಂದ ರಾಜ್ಯದಲ್ಲಿಹೆಚ್ಚುವರಿಅದಾಯದ ಬಜೆಟ್ ಮಂಡಿಸುವುದಾಗಿ ಮುಖ್ಯಮಂತ್ರಿಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ಬಜೆಟ್ ಮೇಲಿನಚರ್ಚೆಯಲ್ಲಿರಾಜ್ಯದ ಸಾಲದ ಕುರಿತು ಆರೋಪ ಪ್ರತ್ಯಾರೋಪಗಳು ಮಾತಿನ ಚಕಮಕಿ ನಡೆಯಿತು.



ವಿರೋಧಪಕ್ಷದ ನಾಯಕ ಆರ್.ಅಶೋಕ್, 4.09 ಲಕ್ಷ ಕೋಟಿ ಗಾತ್ರದ ಬಜೆಟ್‌ನಲ್ಲಿ 3.11 ಲಕ್ಷ ಕೋಟಿ ರೂ. ರಾಜಸ್ವ ವೆಚ್ಚವನ್ನು ನಿಗದಿ ಮಾಡಲಾಗಿದೆ. ಇದು ಶೇ.76 ರಷ್ಟಿದ್ದರೆ ಬಂಡವಾಳ ವೆಚ್ಚಕ್ಕೆ ಕೇವಲ 17.4 ರಷ್ಟು ಮೀಸಲಿಡಲಾಗಿದೆ. 11.36 ಸಾವಿರ ಕೋಟಿ ಬಂಡವಾಳ ವೆಚ್ಚದಲ್ಲಿ ಯಾವ ಆಸ್ತಿ ಸೃಜನೆ ಮಾಡಲು ಸಾಧ್ಯ, ಸಾಲ ಮರುಪಾವತಿಗಾಗಿ 26,470 ಕೋಟಿ ರೂ. ಮೀಸಲಿಡಲಾಗಿದೆ.

19 ಸಾವಿರ ಕೋಟಿ ರಾಜಸ್ವ ಕೊರತೆಯಿದೆ. ರಾಜ್ಯದ ಒಟ್ಟು ಸಾಲ 7.64 ಲಕ್ಷ ಕೋಟಿ ರೂ.ಗಳಿಗೆ ಏರಿಕೆಯಾಗಿದೆ ಎಂದು ವಿವರಿಸಿದರು. 2021-22ನೇ ಸಾಲಿನಲ್ಲಿ ಕೋವಿಡ್ ನಂತಹ ಸಂಕಷ್ಟ ಸಂದರ್ಭದಲ್ಲೂ ರಾಜ್ಯಸರ್ಕಾರ 80,641 ಕೋಟಿ ರೂ. ಸಾಲ ಮಾಡಿತ್ತು. 2022-23ನೇ ಸಾಲಿನಲ್ಲಿ 44,549 ಕೋಟಿ ರೂ.. 2023-24ನೇ ಸಾಲಿನಲ್ಲಿ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದ ಬಳಿಕ 90,280 ಕೋಟಿ, ಕಳೆದ ಬಜೆಟ್‌ನಲ್ಲಿ 1.07 ಕೋಟಿ ಮುಂದಿನ ವರ್ಷಕ್ಕೆ 1:10 ಲಕ್ಷ ಕೋಟಿ ಸಾಲ ಮಾಡಲಾಗುತ್ತಿದೆ.

ಸಾಲ ಪಡೆದು ಆಸ್ತಿ ಸೃಷ್ಟಿಸಬೇಕೆಂದು 2017 ರಲ್ಲಿ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಭಾಷಣ ಮಾಡಿದ್ದರು. ಆನಂತರ ಸಿದ್ದರಾಮಯ್ಯ ನವರೂ ಡಲ್ ಆಗಿದ್ದಾರೆ. ಅವರ ಬಜೆಟ್ ಕೂಡ ಡಲ್ ಆಗಿದೆ. ಈಗ ಸಾಲ ಮಾಡಿ ಅವರ ರಾಜಕೀಯ ಪ್ರಣಾಳಿಕೆಯ ಈಈಡೇರಿಕೆಗೆ ಖರ್ಚು ಮಾಡುತ್ತಿದ್ದಾರೆ. ಎಲ್ಲಾ ಪೀ ಫ್ರೀ ಕೊಡಲು ಸಾಲದ ಹಣ ದುರ್ಬಳಕೆಯಾಗುತ್ತಿದ್ದು ಇದು ಮೋಸ ಮತ್ತು ಅನ್ಯಾಯ ಎಂದು ಆರೋಪಿಸಿದರು.

(2ನೇ ಪುಟ ನೋಡಿ)

## ಹುಮನಾಬಾದ್: ಸರಕಾರಿ ಜಾಗಗಳ ರಕ್ಷಣೆ ಆಗಲಿ

ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್ ಇಲ್ಲಿನ ಸರಕಾರಿ ಜಾಗಗಳು ಖಾಸಗಿ ವ್ಯಕ್ತಿಗಳು ಕಬ್ಜೆ ಮಾಡಿಕೊಂಡು ಅನಧಿಕೃತವಾಗಿ ದಾಖಲೆಗಳನ್ನು ಸೃಷ್ಟಿಸಿ ತಮ್ಮ ಹೆಸರಿಗೆ ಖಾತೆ ಮಾಡಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಪುರಸಭೆ ಹಾಗೂ ಕಂದಾಯ ಅಧಿಕಾರಿಗಳು ಜಾಗ್ರತರಾಗಿ ಸರಕಾರಿ ಜಾಗಗಳನ್ನು ರಕ್ಷಣೆ ಮಾಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಬಹುಬೆಲೆಬಾಳುವ ಜಾಗಗಳು ಇವು ಆಗಿದ್ದು. ಈ ಜಾಗಗಳು ರಕ್ಷಣೆ ಆಗದೆ ಇದ್ದರೆ ಮುಂದಿನ ದಿನಗಳಲ್ಲಿ ಹುಮನಾಬಾದ್ ನಗರದಲ್ಲಿ ಸರಕಾರಿ ಜಾಗಗಳು ಹುಡಕಿದರು ಸಿಗುವುದಿಲ್ಲ. ಈ ಬಗ್ಗೆ ಪಕ್ಷ ಬೇಧ ಮರೆತು ಎಲ್ಲರು ಒಂದಾಗಿ ಸರಕಾರಿ ಜಾಗಗಳ ರಕ್ಷಣೆಗೆ ಮುಂದಾಗಬೇಕು ಎಂಬ ಒತ್ತಾಯ ಸಾರ್ವಜನಿಕರದಾಗಿದೆ.

## ಕಾಲೇಜು ವಾಹನ ಡಿಕ್ಕಿ; ಬೈಕ್ ಸವಾರ ಸ್ಥಳದಲ್ಲೇ ಸಾವು

ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 13 : ಕಾಲೇಜು ವಾಹನ ಡಿಕ್ಕಿ ಹೊಡೆದು ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಹುಲಸೂರ ತಾಲೂಕಿನ ಮೀರಖಲ್ ಗ್ರಾಮದ ಬಳಿ ಗುರುವಾರ ನಡೆದಿದೆ.




ಮೀರಖಲ್ ತಾಂಡಾದ ನಿವಾಸಿ ದೀಪಕ್ ರಾಠೋಡ (31) ಮೃತಪಟ್ಟ ವ್ಯಕ್ತಿ.

ಹುಲಸೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಠಾಣೆಯ ಪಿಎಸ್‌ಐ ಶಿವಪ್ಪ ಮೇಟಿ ನೇತೃತ್ವದ ಪೊಲೀಸರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಹಿಳೆಗೆ ಲೈಂಗಿಕ ಕಿರುಕುಳ: ಗ್ರಾ.ಪಂ.ಸದಸ್ಯನ ವಿರುದ್ದ ದೂರು

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಮಾ.13: ಸರ್ಕಾರದ ವತಿಯಿಂದ ವಸತಿ ಯೋಜನೆಯಡಿ ನೀಡಲಾಗುವ ಮನೆ ಕೇಳಲು ಬಂದ ಮಹಿಳೆಗೆ ಗ್ರಾಮ ಪಂಚಾಯಿತಿ ಸದಸ್ಯ ಲೈಂಗಿಕ ಕಿರುಕುಳ ನೀಡಿರುವ ಘಟನೆ ಕಮಲಾಪೂರ ತಾಲ್ಲೂಕಿನ ಮರಗುತ್ತಿ ಗ್ರಾಮದಲ್ಲಿ ವರದಿಯಾಗಿದೆ.

ಮನೆ ಕೇಳಲು ಬಂದ ಮಹಿಳೆಗೆ ಮರಗುತ್ತಿ ಗ್ರಾಮ ಪಂಚಾಯತಿ ಸದಸ್ಯ ನೀಲಕಂಠ ರಾಠೋಡ್ ಮಂಚಕ್ಕೆ ಕರೆದಿದ್ದಾನೆ ಎಂಬ ಆರೋಪ ಎದುರಿಸುತ್ತಿದ್ದಾರೆ.

(2ನೇ ಪುಟ ನೋಡಿ)

## ಡಿಗ್ಗಿ ಗ್ರಾಮದಲ್ಲಿ ಹೋಳಿ ದಹನ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಮಾ.13:ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಹೋಳಿ ಹಬ್ಬದ ನಿಮಿತ್ಯ ಹೋಳಿ ದಹನ ಕಾರ್ಯಕ್ರಮಕ್ಕೆ

(2ನೇ ಪುಟ ನೋಡಿ)

## ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಪದ್ಧತಿ ಜಾರಿ ಶೀಘ್ರ ನಿರ್ಧಾರ : ಬೋಸರಾಜು

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.13:ರಾಷ್ಟ್ರೀಯ ಪಿಂಚಣಿ ಯೋಜನೆ ಇರುವ ಸರ್ಕಾರಿ ನೌಕರಿಗೆ ಓಪಿಎಸ್ ಜಾರಿ ಮಾಡುತ್ತೇವೆ. ಯಾವಾಗ ಮಾಡುತ್ತೇವೆ ಎಂದು ಸಮಯ ನೀಡಲು ಸಾಧ್ಯವಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಪರವಾಗಿ ವಿಧಾನ ಪರಿಷತ್‌ನಲ್ಲಿ ಸಭಾ ನಾಯಕ ಬೋಸರಾಜು ಉತ್ತರ ನೀಡಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ರಾಮೋಜಿಗೌಡೆ ಪ್ರಶ್ನೆ ಕೇಳಿದರು. ಸರ್ಕಾರಿ ಎನ್‌ಪಿಎಸ್ ನೌಕರರಿಗೆ ಓಪಿಎಸ್ ಯೋಜನೆ ಜಾರಿ ಮಾಡಬೇಕು. ಓಪಿಎಸ್ ಕೊಡೋದಾಗಿ ಚುನಾವಣೆ ವೇಳೆ ನಮ್ಮ ಪ್ರಣಾಳಿಕೆಯಲ್ಲೂ ಸೇರಿಸಲಾಗಿತ್ತು. ನಮ್ಮ ಸರ್ಕಾರ ಬಂದಾಗ ಓಪಿಎಸ್ ಜಾರಿ ಮಾಡೋದಾಗಿ ಹೇಳಿದ್ದೆವು. ಸರ್ಕಾರ ಬಂದು 1.5 ವರ್ಷ ಆದರೂ ಯಾವುದೇ ನಿರ್ಧಾರ ಆಗಿಲ್ಲ. ಇದು ಸರಿಯಲ್ಲ. ಸರ್ಕಾರ ಸಮಿತಿ ಮಾಡಿದೆ. ಸಮಿತಿಯಿಂದ ನಮಗೇನು ಲಾಭವಿಲ್ಲ. ಓಪಿಎಸ್‌ಗಾಗಿ ಹೋರಾಟ ನಡೆಯುತ್ತಿದೆ. ಕೂಡಲೇ ಓಪಿಎಸ್ ಜಾರಿ ಮಾಡಬೇಕು ಎಂದು ಆಗ್ರಹಿಸಿದರು.

ಸಿಎಂ ಸಿದ್ದರಾಮಯ್ಯ ಪರವಾಗಿ ಸಚಿವ ಬೋಸರಾಜು ಉತ್ತರ ನೀಡಿ, ರಾಜ್ಯದಲ್ಲಿ ರಾಷ್ಟ್ರೀಯ ಪಿಂಚಣಿಯೋಜನೆ(ಎನ್‌ಪಿಎಸ್) ಅಡಿ 2,86,445. ಸರ್ಕಾರಿ ನೌಕರರು ಒಳಪಟ್ಟಿದ್ದಾರೆ. ಓಪಿಎಸ್ ಜಾರಿ ಮಾಡುವ ಸಂಬಂಧ ಸಮಿತಿ ರಚನೆ ಮಾಡಲಾಗಿದೆ. ಈಗಾಗಲೇ ಸಮಿತಿ ಎರಡು ಸಭೆ ಮಾಡಲಾಗಿದೆ. ಸಮಿತಿ ವರದಿ ಕೊಟ್ಟ ಬಳಿಕ ಪರಿಶೀಲನೆ ಮಾಡಿ ಓಪಿಎಸ್ ಜಾರಿ ಮಾಡೋ ಬಗ್ಗೆ ನಿರ್ಧಾರ ಮಾಡುತ್ತೇವೆ. ಓಪಿಎಸ್ ಕಾಲಮಿತಿ ನೀಡಲು ಆಗಲ್ಲ. ಇಷ್ಟೇ ಸಮಯ ಒಳಗೆ ಕೊಡುತ್ತೇವೆ ಎಂದು ಹೇಳಲು ಆಗಲ್ಲ. ಆದಷ್ಟು ಬೇಗ ಈ ಬಗ್ಗೆ ನಿರ್ಧಾರ ಮಾಡುತ್ತೇವೆ ಎಂದರು. ಸಚಿವ ಪರಮೇಶ್ವರ್ ಮಾತಾಡಿ, ಪ್ರಣಾಳಿಕೆ ಬರೆಯೋವಾಗ ಚರ್ಚೆ ಮಾಡಿ ಇದನ್ನ ಸೇರಿಸಿದ್ದೇವೆ. ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ಸೇರಿಸಿಲ್ಲ. ನಾವು ಕಮಿಟ್ ಆಗಿದ್ದೇವೆ. ನಾವು ಕೊಟ್ಟ ಭರವಸೆ ಈಡೇರಿಸುತ್ತೇವೆ. ಇಂದು ಆಗಬಹುದು, ನಾಳೆ ಆಗಬಹುದು. ಇದಕ್ಕೆ ಕೋಟ್ಯಂತರ ರುಪಾಯಿ ಖರ್ಚು ಆಗುತ್ತದೆ. ನಾವು ಕೊಟ್ಟ ಮಾತು ಉಳಿಸಿಕೊಳ್ಳುತ್ತೇವೆ ಎಂದರು.

## ನಿವೇಶನ, ಮನೆ ಹಂಚಿಕೆಯಲ್ಲಿ ಪತ್ರಕರ್ತರಿಗೂ ಮೀಸಲಾತಿ ಕಲ್ಪಿಸಲು ಕ್ರಮ: ಡಿಕೆ ಶಿವಕುಮಾರ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.13:ನಿವೇಶನ ಮತ್ತು ಮನೆಹಂಚಿಕೆ ಸಂದರ್ಭದಲ್ಲಿ ಪತ್ರಕರ್ತರಿಗೆ ಮೀಸಲು ನೀಡುವ ನಿಟ್ಟಿನಲ್ಲಿ ಕೂಡಲೇ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಮಂಡಿಸುವಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆಗಳು, ಬಿಡಿಎ ಸೇರಿದಂತೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿವೇಶನ ಮತ್ತು ಮನೆ ಹಂಚಿಕೆ ಸಂದರ್ಭದಲ್ಲಿ ಪತ್ರಕರ್ತರಿಗೆ ಶೇ.5 ರಷ್ಟು ಮೀಸಲು ನೀಡಬೇಕು ಎಂದು ಕರ್ನಾಟಕ ಕಾರ್ಯ

(2ನೇ ಪುಟ ನೋಡಿ)

## ಅನ್ನಭಾಗ್ಯ ಯೋಜನೆ: ನೇರ ನಗದು ವರ್ಗಾವಣೆ ಬದಲಾಗಿ 05 ಕೆಜಿ ಅಕ್ಕಿಯನ್ನು ವಿತರಿಸಲು ಸರ್ಕಾರ ಆದೇಶ

ಮಲ್ಲಮ್ಮ ನುಡಿ ವಾರ್ತೆ ಬೀದರ:ಮಾ.13: ಸಾರ್ವಜನಿಕ ವಿತರಣಾ ಪದ್ಧತಿಯಡಿ ಆದ್ಯತಾ ಪಡಿತರ ಚೀಟಿಯ (ಅಂತ್ಯೋದಯ+ಬಿಪಿಎಲ್) ಫಲಾನುಭವಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ ಕೇಂದ್ರಸರ್ಕಾರದ 05 ಕೆ.ಜಿ ಅಕ್ಕಿಯೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯ ಬದಲಾಗಿ ಪ್ರತಿ ಕೆ.ಜಿಗೆ ರೂ.34.00 ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ರೂ.170.00 ರಂತೆ ಹಣವನ್ನು ವರ್ಗಾಯಿಸಲಾಗುತ್ತಿರುತ್ತದೆ. ಆದರೆ ಫೆಬ್ರವರಿ-2025 ರ ಮಾಹೆಯಿಂದ ಜಾರಿಗೆ ಬರುವಂತೆ ನೇರ ನಗದು



ವರ್ಗಾವಣೆ ಬದಲಾಗಿ ಅನ್ನಭಾಗ್ಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ 05 ಕೆ.ಜಿ ಅಕ್ಕಿಯನ್ನು ವಿತರಿಸಲು ಸರ್ಕಾರ ಆದೇಶಿಸಿರುತ್ತದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಫೆಬ್ರುವರಿ-2025 ರ ಮಾಹೆಯ ವಿತರಣೆಯು ಪೂರ್ಣಗೊಂಡಿರುವುದರಿಂದ ಫೆಬ್ರವರಿ-2025 ರ ಮಾಹೆಯ ಹೆಚ್ಚುವರಿ ಅಕ್ಕಿಯನ್ನು ಮಾರ್ಚ್-2025 ರ ಮಾಹೆಯ ಹಂಚಿಕೆಯೊಂದಿಗೆ ವಿತರಣೆ ಮಾಡಲಾಗುವುದು. ಆದ್ದರಿಂದ ಮಾರ್ಚ್-2025 ರ ಮಾಹೆಯಲ್ಲಿ ಆದ್ಯತಾ ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗಳಿಗೆ ಒಟ್ಟು 15 ಕೆ.ಜಿ ಅಕ್ಕಿಯನ್ನು ವಿತರಣೆ ಮಾಡಲಾಗುವುದು ಹಾಗೂ 4 ಸದಸ್ಯರಿಗಿಂತ ಕಡಿಮೆ ಇರುವ ಅಂತ್ಯೋದಯ ಪಡಿತರ ಚೀಟಿದಾರರಿಗೆ 35 ಕೆ.ಜಿ ಅಕ್ಕಿಯನ್ನು ವಿತರಣೆ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

4 ಸದಸ್ಯರಿರುವ ಎಎವೈ ಪಡಿತರ ಚೀಟಿದಾರರಿಗೆ 45 ಕೆ.ಜಿ ಅಕ್ಕಿ, 5 ಸದಸ್ಯರಿರುವ ಎಎವೈ ಪಡಿತರ ಚೀಟಿ-ದಾರರಿಗೆ 65 ಕೆ.ಜಿ ಅಕ್ಕಿ, 6 ಸದಸ್ಯರಿರುವ ಎಎವೈ ಪಡಿತರ ಚೀಟಿದಾರರಿಗೆ 85 ಕೆ.ಜಿ ಅಕ್ಕಿಯನ್ನು ವಿತರಣೆ

(2ನೇ ಪುಟ ನೋಡಿ)

## ಬೈಕ್ ಅಡ್ಡಗಟ್ಟಿ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮಾ.13: ಬೈಕ್ ಅಡ್ಡಗಟ್ಟಿ ವ್ಯಕ್ತಿಯೋರ್ವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆಗೈದ ಘಟನೆ ನಗರದ ಖಾದ್ರಿ ಚೌಕ್ ಬಳಿ ನಡೆದಿದೆ. ಖಾದ್ರಿ ಚೌಕ್ ಬಳಿಯ ನಬಿ ಕಾಲೋನಿ ನಿವಾಸಿ ಇಮ್ರಾನ್ ಸೈಯದ್ (28) ಕೊಲೆಯಾದ ವ್ಯಕ್ತಿ ಎಂದು ಗುರುತಿಸಲಾಗಿದೆ.



ಬುಧವಾರ ರಾತ್ರಿ 10 ಗಂಟೆ ಸುಮಾರಿಗೆ ಬೈಕ್ ಮೇಲೆ ತೆರಳುವಾಗ ಅಡ್ಡಗಟ್ಟಿದ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದು ಪರ-ರಿಯಾಗಿದ್ದಾರೆಂದು ತಿಳಿದುಬಂದಿದೆ. ಕೊಲೆಯಾದ ವ್ಯಕ್ತಿ ಮೇಲೆ ನಗರದ ವಿವಿಧ ಠಾಣೆಗಳಲ್ಲಿ ವಿವಿಧ ಪ್ರಕರಣಗಳು ದಾಖಲಾಗಿವೆ ಎನ್ನಲಾಗುತ್ತಿದೆ. ಸುದ್ದಿ ತಿಳಿದು ಘಟನಾ ಸ್ಥಳಕ್ಕೆ ಡಿಸಿಪಿ ಕನಿಕಾ ಸಿಕ್ರಿವಾಲ್ ಸೇರಿದಂತೆ ಇತರ ಪೊಲೀಸ್ ಅಧಿಕಾರಿಗಳು ಭೇಟಿನೀಡಿ ಪರಿಶೀಲನೆ ಮಾಡಿದ್ದು ಹಂತಕರ ಬಂಧನಕ್ಕೆ ಜಾಲ ಬೀಸಿದ್ದಾರೆ. ಈ ಕುರಿತು ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಮಾನ ಮನಸ್ಕ ರಾಜ್ಯಗಳ ಸಭೆಯಲ್ಲಿ ಡಿ.ಕೆ ಶಿವಕುಮಾರ್ ಭಾಗಿ: ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.13:ಲೋಕಸಭೆ ಕ್ಷೇತ್ರ ಮರುವಿಂಗಡನೆ ವಿವಾದದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರು ತಮಿಳುನಾಡು ಸಿಎಂ ಎಂ.ಕೆ. ಸ್ಟಾಲಿನ್‌ಗೆ ಪತ್ರವನ್ನು ಬರೆದಿದ್ದಾರೆ. ಕೆಲ ದಿನಗಳ ಹಿಂದೆಯಷ್ಟೇ ಸ್ಟಾಲಿನ್ ಸೂಚನೆಯಂತೆ ತಮಿಳುನಾಡಿನ ಸಚಿವರು ಹಾಗೂ ಸಂಸದರೊಬ್ಬರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಸಂಸದೀಯ ಕ್ಷೇತ್ರಗಳ



ಪ್ರಸ್ತಾವಿತ ವಿಂಗಡಣೆಯ ಪರಿಣಾಮಗಳನ್ನು ಚರ್ಚಿಸಲು ಮಾರ್ಚ್ 22 ರಂದು ಚೆನ್ನೈನಲ್ಲಿ ನಡೆಯಲಿರುವ ಸಮಾನ ಮನಸ್ಕ ರಾಜ್ಯಗಳ ಮೊದಲ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಭಾಗವಹಿಸಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕ್ಷೇತ್ರ ಮರುವಿಂಗಡನೆ ಕುರಿತಾಗಿ ನೀವು ಬರೆದ ಪತ್ರ ಮತ್ತು ಆಹ್ವಾನವನ್ನು ಸ್ವೀಕರಿಸಿದ್ದೇನೆ. ಲೋಕಸಭಾ ಕ್ಷೇತ್ರಗಳ ಡಿಲಿಮಿಟೇಷನ್

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಡಿ.ಕೆ ಶಿವಕುಮಾರ್ ಭಾಗಿ: ಸಿಎಂ ಸಿದ್ದರಾಮಯ್ಯ

ಕುರಿತು ದಕ್ಷಿಣ ರಾಜ್ಯಗಳ ಕಾಳಜಿ ಅರಿವಿದೆ. ಲೋಕಸಭಾ ಕ್ಷೇತ್ರಗಳ ಮರುವಿಂಗಡಣೆ ಹಾಗೂ ಸಾಧಕ ಬಾದಕಗಳ ಬಗ್ಗೆ ಅರಿವಿದೆ. ಈ ವಿಚಾರವಾಗಿ ಸುಧೀರ್ಘವಾಗಿ ಚರ್ಚಿಸುವ ಅಗತ್ಯವಿದೆ ಎಂದಿದ್ದಾರೆ.ಸಮಾನ ಮನಸ್ಕ, ಸಂತ್ರಸ್ಥರಾಗುವ ರಾಜ್ಯಗಳ ಚರ್ಚಿಸಬೇಕು.ಈ ಸಭೆಯಲ್ಲಿ ನಾನು ಭಾಗವಹಿಸಬೇಕೆಂಬ ಆಸೆ ಇದೆ ಆದರೆ ಕೆಲವು ಕಾರಣಗಳಿಂದಾಗಿ ಸಭೆಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಪತ್ರದಲ್ಲಿ ವಿವರ ನೀಡಿದ್ದಾರೆ. ಮಾರ್ಚ್ 22 ರಂದು ಕರೆದ ಸಭೆಯಲ್ಲಿ ನನ್ನ ಬದಲಾಗಿ ಡಿ.ಕೆ.ಶಿವಕುಮಾರ್ ಭಾಗವಹಿಸುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.ಲೋಕಸಭೆ ಮತ್ತು ವಿಧಾನಸಭೆ ಕ್ಷೇತ್ರ ಮರುವಿಂಗಡನೆ ಸಂಬಂಧಿಸಿದಂತೆ ಮಾರ್ಚ್ 22 ರಂದು ದಕ್ಷಿಣದ ರಾಜ್ಯಗಳ ಸಭೆ ನಡೆಯಲಿದೆ. ಚೆನ್ನೈನಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಆಹ್ವಾನ ನೀಡಲು ತಮಿಳುನಾಡಿನ ಸಚಿವ ಮತ್ತು ಸಂಸದರು ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿದ್ದರು.

ಕ್ಷೇತ್ರ ಪುನರ್ ವಿಂಗಡನೆಗೆ ದಕ್ಷಿಣ ಭಾರತದ ರಾಜ್ಯಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಕರ್ನಾಟಕ, ತಮಿಳುನಾಡು, ಕೇರಳ, ತೆಲಂಗಾಣದಿಂದ ಇದಕ್ಕೆ ವಿರೋಧ ವ್ಯಕ್ತಪಡಿಸಿವೆ.

### ಬದಲಾಗಿ 05 ಕೆಜಿ ಅಕ್ಕಿಯನ್ನು ವಿತರಿಸಲು ಸರ್ಕಾರ ಆದೇಶ

ಮಾಡಲಾಗುವುದು. ಮುಂದುವರೆದು ವಿತರಣೆ ಮಾಡಿದ ಪಡಿತರ ಅಕ್ಕಿಯನ್ನು ಪಡಿತರ ಚೀಟಿದಾರರು ಯಾವುದೇ ಕಾರಣಕಕ್ಕೂ ಮಾರಾಟ ಮಾಡುವಂತಿಲ್ಲ ಒಂದು ವೇಳೆ ಪಡಿತರ ಅಕ್ಕಿಯನ್ನು ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತಹ ಪಡಿತರ ಚೀಟಿದಾರರ ಪಡಿತರ ಚೀಟಿಯನ್ನು ಅಮಾನತ್ತುಗೊಳಿಸಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕ ವಿತರಣಾ ಪದ್ಧತಿಯಡಿಯಲ್ಲಿ ಯಾವುದೇ ದೂರುಗಳು ಇದ್ದಲ್ಲಿ ಆಹಾರ ಇಲಾಖೆಯ ಸಿಬ್ಬಂದಿಯನ್ನು ಸಂಪರ್ಕಿಸಬಹುದಾದ ವಿವರ: ಬೀದರ ಗ್ರಾಮಾಂತರ ಆಹಾರ ಶಿರಸ್ತೆದಾರ ಅನಿಲ್‌ಕುಮಾರ ವ್ಯಾಸ್ (6360177221), ಬೀದರ ಗ್ರಾಮಾಂತರ ಆಹಾರ ನಿರೀಕ್ಷಕರು ಅರುಣ್‌ಕುಮಾರ (7892199014), ಬೀದರ ಪಟ್ಟಣ ಆಹಾರ ನಿರೀಕ್ಷಕರು ರಾಮರತನ ದೆಗಲಿ (9844302280), ಬೀದರ ಪಟ್ಟಣ ಆಹಾರ ನಿರೀಕ್ಷಕರು ಶೋಭಾ (9740226135), ತಾಲ್ಲೂಕು ಕಛೇರಿ ಭಾಲ್ಕಿ: ಆಹಾರ ಶಿರಸ್ತೆದಾರರು ವೆಂಕಟರಾವ (9110413724), ಆಹಾರ ನಿರೀಕ್ಷಕರು ರಾಜೇಂದ್ರಕುಮಾರ (9972460457) ತಾಲ್ಲೂಕು ಕಛೇರಿ ಹುಮನಾಬಾದ: ಆಹಾರ ಶಿರಸ್ತೆದಾರರು ಪರಮೇಶ್ವರ (9448349496), ಆಹಾರ ನಿರೀಕ್ಷಕರು ಶ್ರೀಮತಿ.ಬಿಂದುಕುಮಾರಿ (9449382228), ತಾಲ್ಲೂಕು ಕಛೇರಿ ಚಿಟಗುಪ್ಪಾ: ಆಹಾರ ನಿರೀಕ್ಷಕರು ಶೇಖರ್ (9964874917), ತಾಲ್ಲೂಕು ಕಛೇರಿ ಬಸವಕಲ್ಯಾಣ: ಆಹಾರ ಶಿರಸ್ತೆದಾರರು ನಿಂಗಯ್ಯಾ (9916241166), ಆಹಾರ ನಿರೀಕ್ಷಕರು ನಾಗರಾಜ (8951753186), ದ್ವಿ.ದ.ಸ ಶ್ರೀಮತಿ. ರಾಜೇಶ್ವರಿ (9986775659), ತಾಲ್ಲೂಕು ಕಛೇರಿ ಹುಲಸೂರು: ಆಹಾರ ನಿರೀಕ್ಷಕರು ಪ್ರದೀಪ್ (8095453026), ತಾಲ್ಲೂಕು ಕಛೇರಿ ಔರಾದ (ಬಿ):ಆಹಾರ ಶಿರಸ್ತೆದಾರರು ಪರಮೇಶ್ವರ (9448349496), ಆಹಾರ ನಿರೀಕ್ಷಕರು ಶ್ರೀಮತಿ.ಮಲತಾ (9901741151), ತಾಲ್ಲೂಕು ಕಛೇರಿ ಕಮಲನಗರ: ಆಹಾರ ನಿರೀಕ್ಷಕರು ಶಿವಾನಂದ ಪಾಟೀಲ್ (9741614855).

### ಬಜೆಟ್ ಮಂಡನೆ : ಸಿಎಂ ಸಿದ್ದರಾಮಯ್ಯ

ಅಭಿವೃದ್ಧಿ ಎಂಬುದು ಶೂನ್ಯವಾಗಿದೆ ಎಂದು ಆರ್.ಅಶೋಕ್ ಹೇಳುತ್ತಿದ್ದಂತೆ, ಸಚಿವ ಚಲುವರಾಯಸ್ವಾಮಿ ಪ್ರತಿ ಕ್ಷೇತ್ರಕ್ಕೆ 100 ಕೋಟಿ ರೂ. ಅನುದಾನ ದೊರೆ–ಯುತ್ತಿದೆ. ಇದು ಅಭಿವೃದ್ಧಿಯಲ್ಲವೇ? ಎಂದು ಪ್ರಶ್ನಿಸಿದರು.ಸಾಲದ ಮೊತ್ತವನ್ನೂ ಕಳೆದ ವರ್ಷ 1.81 ಲಕ್ಷ ಕೋಟಿ ರೂ. ಆದಾಯ ನಿರೀಕ್ಷೆ ಮಾಡಲಾಗಿತ್ತು. ಆದರೆ ಅಷ್ಟು ಸಂಗ್ರಹವಾಗಿಲ್ಲ, ಮುಂದಿನ ವರ್ಷದಲ್ಲಿ 2.8 ಲಕ್ಷ ಕೋಟಿ ರೂ. ಆದಾಯದ ಗುರಿ ನಿಗದಿಪಡಿಸಲಾಗಿದೆ. ಅಭಿವೃದ್ಧಿ ಗುರಿಗಿಂತ ಅಬಕಾರಿ ಗುರಿ ಹೆಚ್ಚಾಗಿದೆ. ಜನರನ್ನು ಮದ್ಯಪಾನ ಪ್ರಿಯರನ್ನಾಗಿ ಮಾಡಲಾಗುತ್ತಿದೆ. 16 ನೇ ಬಜೆಟ್ ಮಂಡಿಸಿದ ಸಿದ್ದರಾಮಯ್ಯ, ತುಂಬಾ ದುರ್ಬಲರಾಗಿದ್ದಾರೆ. ಮರ ಮುಪ್ಪಾದರೂ ಹುಳಿ ಮುಪ್ಪೇ? ಎಂಬ ಗಾದೆ ಮಾತು ಸಿದ್ದರಾಮಯ್ಯ ನವರಿಗೆ ಅನ್ವಯವಾಗುವುದಿಲ್ಲ ಎಂದು ಲೇವಡಿ ಮಾಡಿದರು. ಮಧ್ಯ ಪ್ರವೇಶಿಸಿದ ಸಿದ್ದರಾಮಯ್ಯನವರು ಕೇಂದ್ರ ಸರ್ಕಾರ ಎಷ್ಟು ಸಾಲ ಮಾಡಿದೆ ಎಂಬುದನ್ನೂ ಹೇಳಬೇಕು. ಸಾಲದ ಹಣವನ್ನು ಆಸ್ತಿ ಸೃಜನೆಗೆ ಖರ್ಚು ಮಾಡಬೇಕು ಎಂಬ ಹೇಳಿಕೆಗೆ ಈಗಲೂ ಬದ್ರನಿದ್ದೇನೆ. ನಮ್ಮ ಸರ್ಕಾರ ವಿತ್ತೀಯ ಹೊಣೆಗಾರಿಕೆ ನಿಯಮಾವಳಿ ಅನುಸಾರವೇ ನಡೆದುಕೊಳ್ಳುತ್ತಿದೆ. ರೆವಿನ್ಯೂ ಸರ್‌ಪ್ಲಸ್ ಒಂದನ್ನು ಹೊರತುಪಡಿಸಿ ಉಳಿದಂತೆ ವಿತ್ತೀಯ ಕೊರತೆ ಮತ್ತು ಸಾಲದ ಪ್ರಮಾಣ ಎರಡೂ ನಿಯಮಾವಳಿಗಳ ಅನುಸಾರದಲ್ಲಿಯೇ ಇವೆ ಎಂದರುಕಳೆದ ವರ್ಷ 27 ಸಾವಿರ ಕೋಟಿ ವಿತ್ತೀಯ ಕೊರತೆ ಇತ್ತು. ಈ ವರ್ಷ 19,262 ಕೋಟಿ ರೂ.ಗೆ ಇಳಿಸಲಾಗಿದೆ. ಮುಂದಿನ ವರ್ಷ ಹೆಚ್ಚುವರಿ ಆದಾಯದ ಬಜೆಟ್ ಮಂಡನೆ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಕೇಂದ್ರದಲ್ಲಿ 2014–15ರವರೆಗೂ 53:11 ಲಕ್ಷ ಕೋಟಿ ಮಾತ್ರ ಸಾಲವಿತ್ತು. ಮೋದಿಯವರು ಪ್ರಧಾನಿಯಾದ ಬಳಿಕ ಅದು ಶೇ.56 ರಷ್ಟು ಹೆಚ್ಚಾಗಿದೆ. 2.1 ಲಕ್ಷ ಕೋಟಿಯನ್ನು 2025–26ನೇ ಸಾಲಿನಲ್ಲಿ ಸಾಲ ಪಡೆಯಲಾಗುತ್ತಿದೆ. ದೇಶದ ಒಟ್ಟು ಸಾಲ 201 ಲಕ್ಷ ಕೋಟಿ ರೂ.ಗಳು ಎಂದು ವಿವರಿಸಿದರು.

ಈ ವೇಳೆ ಬಿಜೆಪಿಯ ಅರಗ ಜ್ಞಾನೇಂದ್ರ ಕೇಂದ್ರದ ಬಂಡವಾಳ ವೆಚ್ಚ ಎಷ್ಟು ಎಂಬುದನ್ನು ಹೇಳಿ ಎಂದಾಗ ಸುನೀಲ್ ಕುಮಾರ್ ಮತ್ತು ಭರತರೆಟ್ಟಿ ಬೆಂಬಲ ವ್ಯಕ್ತಪಡಿಸಿದರು. ಇದು ರಾಜ್ಯದ ಬಜೆಟ್, ಕೇಂದ್ರದ ವಿಚಾರಗಳು ಇಲ್ಲಿ ಚರ್ಚೆಯಾಗುವುದು ಬೇಡ, ಸಂಸತ್ ಅಧಿವೇಶನ ನಡೆಯುತ್ತಿದೆ. ಅಲ್ಲಿ ಪ್ರಸ್ತಾಪವಾಗಲಿ ಎಂದು ಬಿ.ವೈ.ವಿಜಯೇಂದ್ರ, ಅಶ್ವತ್ಥನಾರಾಯ ಮತ್ತಿತರರು ತಿರುಗೇಟು ನೀಡಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ, ಸತ್ಯ ಕಹಿಯಾಗಿರುತ್ತದೆ. ಅಶ್ವತ್ಥನಾರಾಯಣ ಹಾಗೂ ಮತ್ತಿತರರು ಕೈ ಬಾಯಿ ತಿರುಗಿಸಿ ಬಂದ ಧ್ವನಿಯಲ್ಲಿ ಮಾತನಾಡಿದರೆ ನಾವು ಬಗ್ಗುವುದಿಲ್ಲ. ನಿಮ್ಮ ಭಂಡತನ ನಮ್ಮ ಮುಂದೆ ನಡೆಯುವುದಿಲ್ಲ ಎಂದು ಪ್ರತಿ ಸವಾಲು ಹಾಕಿದರು.

ನಮ್ಮ ಸರ್ಕಾರ ಬಂಡವಾಳ ವೆಚ್ಚವನ್ನು 83 ಸಾವಿರ ಕೋಟಿ ರೂ.ಗೆ ಹೆಚ್ಚಿಸಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರದ ವಿಚಾರಗಳನ್ನು ಚರ್ಚೆ ಮಾಡಬೇಕಾಗುತ್ತದೆ ಎಂದು ಸಮರ್ಥಿಸಿಕೊಂಡರು.

### ಮೀಸಲಾತಿ ಕಲ್ಪಿಸಲು ಕ್ರಮ: ಡಿಕೆ ಶಿವಕುಮಾರ್

ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ)ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸಲ್ಲಿಸಿದ ಮನವಿ ಹಿನ್ನೆಲೆಯಲ್ಲಿ ಈ ಸೂಚನೆ ನೀಡಿದರು. ವಿಧಾನಸೌಧದಲ್ಲಿ ಅಧಿಕಾರಿಗಳ ಜೊತೆಗೆ ಈ ಬಗ್ಗೆ ಸಮಾಲೋಚನೆ ನಡೆಸಿದ ಡಿಸಿಎಂ, ಕಾನೂನು ತೊಡಕುಗಳು ಏನೇನು ಇದೆ? ಯಾವ ರೀತಿಯಲ್ಲಿ ಪತ್ರಕರ್ತರಿಗೆ ಸಹಾಯ ಮಾಡಬಹುದು ಎಂದು ಚರ್ಚೆ ನಡೆಸಿದರು. ಶೇ.5 ರಿಯಾಯಿತಿ ಕೊಡುವುದು ಕಷ್ಟವಾಗಬಹುದು. ಆದರೆ, ಕನಿಷ್ಠ ಶೇ.1 ರಿಂದ ಶೇ.2ರಷ್ಟು ರಿಯಾಯಿತಿ ನೀಡಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಈ ಬಗ್ಗೆ ಶೀಘ್ರವೇ ಆದೇಶವನ್ನು ಹೊರಡಿಸಲು ಅಗತ್ಯವಿರುವ ಕ್ರಮಕ್ಕೆ ಮುಂದಾಗಬೇಕು ಎಂದು ಸೂಚಿಸಿದರು.

ಅಪರ ಮುಖ್ಯಕಾರ್ಯದರ್ಶಿ ಮತ್ತು ಬಿಬಿಎಂಪಿ ಆಡಳಿತಾಧಿಕಾರಿ ಎಸ್.ಆರ್.ಉಮಾಶಂಕರ್, ಬಿಬಿಎಂಪಿ ಆಯುಕ್ತ ತುಷಾರ ಗಿರಿನಾಥ್, ಡಿಸಿಎಂ ವಿಶೇಷಾಧಿಕಾರಿ ರಾಜೇಂದ್ರಪ್ರಸಾದ್ ಮತ್ತಿತರರು ಇದ್ದರು.

### ಹೋಳಿ ದಹನ

ಸಂತೋಷ ಚಾಂಡೇಶ್ವರೆ ಚಾಲನೆ ನೀಡಿದರು.

ಹಿಂದೂ ಧರ್ಮದ ಕೊನೆ ಹಬ್ಬವಾಗಿರುವ ಹೋಳಿ ಹಬ್ಬದಲ್ಲಿ ಹೋಳಿ ದಹನ ಮಾಡಿ ವರ್ಷದ ಎಲ್ಲಾ ಕಹಿ ಹಾಗೂ ಕಷ್ಟಗಳನ್ನು ಸುಟ್ಟಿ ಹೊಸ ವರ್ಷಕ್ಕೆ ಸ್ವಾಗತ ಮಾಡುವ ಹಬ್ಬವಾಗಿದೆ.

ಈ ಸಂದರ್ಭದಲ್ಲಿ ನಾಗೇಶ್ ಹರಪ್ಪಳೆ, ಸೋಮನಾಥ ಶ್ರೀಗಿರೆ, ಚನ್ನಬಸವ ಕುಂಬಾರಗಿರೆ, ನಿಖಿಲ ಶ್ರೀಗಿರೆ, ವಿಜಯಕುಮಾರ ಪಂಚಾಳ, ಮಲ್ಲಿಕಾರ್ಜುನ ಮೆಹತ್ರೆ ಇದ್ದರು. ಯುವಕರಾದ ಸುಪ್ರೀತ ಶ್ರೀಗಿರೆ, ಬಸವ ಬರ್ಗೆ, ಗಣೇಶ ಪಾಟಿಲ, ಸಂಕೇತ ಶ್ರೀಗಿರೆ, ಗಗನ ಶ್ರೀಗಿರೆ, ಪ್ರಜ್ವಲ ಬನವಾಸೆ, ಹೋಳಿ ದಹನ ಕಾರ್ಯಕ್ರಮಕ್ಕೆ ಕುಳ್ಳಿ ಕಟ್ಟಿಗೆ ಶೇಖರಣೆ ಮಾಡಿದರು.

### ಗ್ರಾ.ಪಂ.ಸದಸ್ಯನ ವಿರುದ್ದ ದೂರು

ಪಂಚಾಯಿತಿ ಮನೆ ಮಾಡಿಸಿಕೊಡುತ್ತೇನೆ ನನ್ನ ಜೊತೆ ಮಲಕೋ. ನೀನು ಬರಲಿಲ್ಲ ಅಂದ್ರೆ ನಿನ್ನ ಮಗಳನ್ನಾದರೂ ಕಳಿಸು ಎಂದಿದ್ದಾನೆ. ಈ ಸಂಬಂಧ ಮಹಿಳೆ, ನೀಲಕಂಠ್ ರಾಠೋಡ್ ವಿರುದ್ಧ ಕಮಲಾಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾಳೆ.

ಈ ದೂರಿನ ಮೇರೆಗ ಪೊಲೀಸರು ಬಿಎನ್‌ಎಸ್ ಕಾಯ್ದೆ 75, 78,79 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

### ರಾಷ್ಟ್ರ ಮಟ್ಟದ ಸಾಹಿತ್ಯ ಸೌರಭ ಪ್ರಶಸ್ತಿಗೆ ಸಿದ್ಧಾರ್ಥ ಟಿ ಮಿತ್ರಾ ಆಯ್ಕೆ



ಹುಮನಾಬಾದ:ಮಾ.13: ಹೂವಿನಹಡಗಲಿಯ ಕರ್ನಾಟಕ ರಾಜ್ಯ ಬರಹಗಾರರ ಸಂಘ ಕೊಡಮಾಡುವ ರಾಷ್ಟ್ರಮಟ್ಟದ ಸಾಹಿತ್ಯ ಸೌರಭ ಪ್ರಶಸ್ತಿಗೆ ಯುವ ಲೇಖಕ ಸಾಮಾಜೀಕ ಚಿಂತಕ ಶ್ರೀಯುತ ಸಿದ್ಧಾರ್ಥ ಟಿ ಮಿತ್ರಾ ಆಯ್ಕೆಯಾಗಿದ್ದಾರೆ. ಇವರ ಸಾಹಿತ್ಯ ಸೇವೆಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ಬರಹಗಾರರ ಸಂಘ ಹೂವಿನಹಡಗಲಿಯವರು ಪ್ರತಿ ವರ್ಷದಂತೆ ನಿಡುವ ರಾಷ್ಟ್ರ ಮಟ್ಟದ ಸಾಹಿತ್ಯ ಸೌರಭ ಪ್ರತಿಷ್ಠಿತ ಪ್ರಶಸ್ತಿಗೆ ಶ್ರೀ ಸಿದ್ಧಾರ್ಥ ಟಿ ಮಿತ್ರಾ ಆಯ್ಕೆಯಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ಬರಹಗಾರರ ಸಂಘದ ರಾಜ್ಯಾಧ್ಯಕ್ಷ ಶ್ರೀ ಮಧುನಾಯಕ್ ಲಂಬಾಣಿ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಸಿದ್ಧಾರ್ಥ್ ಮಿತ್ರಾ ಅವರು ಸೃಜನಶೀಲ,ಸಂವೇದನಾಶೀಲಯುವ ಬರಹಗಾರರಾಗಿ, ಕವಿಯಾಗಿ, ವಿಮರ್ಶಕರಾಗಿ ಹಲವು ಸಾಹಿತ್ಯ ಸಮ್ಮೇಳನಗಳ ಕವಿಗೋಷ್ಠಿಯಲ್ಲಿ ಭಾಗವಹಿಸಿದ್ದಾರೆ.ಬುದ್ಧ ಬಸವ ಅಂಬೇಡ್ಕರ್, ಸಾವಿತ್ರಿಬಾಯಿ ಫುಲೆ, ಜ್ಯೋತಿಬಾ ಫುಲೆ ರಮಾಬಾಯಿ ಅಂಬೇಡ್ಕರ್, ಕನಕದಾಸರ ಕುರಿತು ತಮ್ಮ ಬರಹದ ಮೂಲಕ ಸಮಾಜದ ಅಂಕು ಡೊಂಕು ತಿದ್ದುವ ವೈಚಾರಿಕ ಪ್ರಜ್ಞೆಯ ಕುರಿತು ಕವಿ, ಸಾಹಿತಿಯಾಗಿ ಅನೇಕ ಲೇಖನಗಳನ್ನು ಪ್ರಕಟಿಸಿರುತ್ತಾರೆ. ಹಲವು ಗೌರವ ಸನ್ಮಾನಗಳಿಗೆ ಪಾತ್ರರಾಗಿದ್ದಾರೆ. ಕರ್ನಾಟಕ ರಾಜ್ಯ ಬರಹಗಾರರ ಸಂಘದ ಐದನೆಯ ವರ್ಷಾಚರಣೆಯ ಅಂಗವಾಗಿ ರಾಷ್ಟ್ರ ಮಟ್ಟದ ಸಾಹಿತ್ಯ ಸೌರಭ ಪ್ರಶಸ್ತಿಯನ್ನು ಶಿವಮೊಗ್ಗ ಜಿಲ್ಲೆಯ ಕರ್ನಾಟಕ ಸಂಘದ ಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾನುವಾರ ದಿ16–03–2025ರಂದು ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ರಾಜ್ಯಾಧ್ಯಕ್ಷರು ತಿಳಿಸಿದರು.

### ಹುರಳಿ ಅಂಬಲಿ, ಕಡಕ್ ರೊಟ್ಟಿ-ಉಚಿತ ಆರೋಗ್ಯ ಸೇವೆ: ಶಿರೂರಿನಲ್ಲಿ ಶ್ರೀಶೈಲ ಯಾತ್ರಿಗಳಿಗೆ ಇಂದಿನಿಂದ ಅನ್ನ ಸಂತರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.13– ತಾಲೂಕಿನ ಶಿರೂರಪಟ್ಟಣದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ಶ್ರೀಶೈಲ ಪಾದಯಾತ್ರಿಗಳಿಗೆ ಉಪಹಾರ, ಊಟದ ವ್ಯವಸ್ಥೆಯ ಜೊತೆ ಉಚಿತ ಆರೋಗ್ಯ ಸೇವೆ ಒದಗಿಸಲಾಗುತ್ತಿದೆ.

ಸ್ಥಳೀಯ ಶ್ರೀಶೈಲ ಮಲ್ಲಿಕಾರ್ಜುನ ಪಾದಯಾತ್ರಾ ಸೇವಾಸಮಿತಿಯ ಆಶ್ರಯದಲ್ಲಿ ಸೇವಾ ಕೈಂಕರ್ಯ ನಡೆ–ಯುತ್ತಿದ್ದರೂ ಇದರಲ್ಲಿ ಎಲ್ಲರೂ ಪಾಲ್ಗೊಂಡು ಯಾತ್ರಿಗಳ ಸೇವೆ ಮಾಡುವುದು ವಿಶೇಷವಾಗಿದೆ.ಶಿವುಕುಮಾರ ನಡುವಿನಮನಿ, ಸಂಗಪ್ಪ ಚಿತ್ತರಗಿ, ಹನಮಂತ ಕಟಗಾವಲಿ,ಶಿವು ಕಾಮರಡ್ಡಿ, ರವಿಶಂಕರ ಪ್ಯಾಟಿಶೆಟ್ಟರ, ಸಿಂಧೂರಪ್ಪ ಹುಲ್ಲಳ್ಳಿ ಸೇರಿ ಸಮೀತಿಯ ಎಲ್ಲ ಸದ್ಭಕ್ತರು ಕಳೆದೊಂದು ವಾರದಿಂದ ಎಲ್ಲ ತಯಾರಿ ನಡೆಸಿದ್ದು, ಮಹಿಳೆಯರು 20 ಸಾವಿರಕ್ಕೂ ಹೆಚ್ಚು ರೊಟ್ಟಿ ಮಾಡಿ ಕೊಟ್ಟಿದ್ದಾರೆ.

ಪುರುಷರು,ಮಹಿಳೆಯರು ಬೆಳಿಗ್ಗೆಯಿಂದ ಸಂಜೆತನಕ ಸೇವಾ ಕಾರ್ಯದಲ್ಲಿ ತೆ–ಊಡಗುತ್ತಿದ್ದು,ಯಾತ್ರಿಗಳಿಗೆ ಯಾವುದೇ ತೊಂದರೆ–ಯಾಗದಂತೆ ನೋಡಿಕೊಳ್ಳುತ್ತಾರೆ. ದಣಿದು ಬರುವ ವಯೋವೃದ್ಧರಿಗಂತೂ ಇಲ್ಲಿ ವಿಶೇಷ ಆದರಾತಿಥ್ಯ, ಎಲ್ಲರಿಗೂ ಸ್ನಾನಕ್ಕೆ ಬಿಸಿ ನೀರಿನ ವ್ಯವಸ್ಥೆ ಕಲ್ಪಿಸಲಾಗಿದ್ದು, ಬೆಳಿಗ್ಗೆ ಉಪ್ಪಿಟ್ಟು, ಚುರುಮರಿ ಸೂಸಲಾ, ಬಾಳೆಹಣ್ಣು ಉಪಹಾರದ ವ್ಯವಸ್ಥೆ ಮಾಡಲಾಗುತ್ತಿದ್ದು, ಮಧ್ಯಾಹ್ನ ಹುರಳಿ ಸಂಗಟಿ, ಬಿಳಿ ಜೋಳದ ಕಟಕ್ ರೊಟ್ಟಿ, ಸೌತೆಕಾಯಿ, ಬದನೆಕಾಯಿ, ಗಜ್ಜರಿ ಪಲ್ಯಾ. ಮೊಸರು, ಮಜ್ಜಿಗೆ, ಅನ್ನ, ಸಾಂಬಾರು ಹೀಗೆ ಎಲ್ಲವೂ ದೊರೆಯಲಿದೆ.

ಬೆಳಗಾವಿ, ಚಿಕ್ಕೋಡಿ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಿಂದ ಬೆಳಗಾವಿ–ರಾಯಚೂರ ರಸ್ತೆಮಾರ್ಗವಾಗಿ ತೆರಳುವ ಪಾದಯಾತ್ರಿಗಳಿಗೆ ಸ್ಥಳಿಯ ಸಿದ್ದೇಶ್ವರ ಪ್ರೌಢಶಾಲೆಯ ವಿಶಾಲ ಮೈದಾನದಲ್ಲಿ ಸಕಲ ವ್ಯವಸ್ಥೆ ಮಾಡಲಾಗಿದೆ. ದೊಡ್ಡದಾದ ಪೆಂಡಾಲ ಹಾಕಲಾಗಿದ್ದು,ಮಲಗಿ ವಿಶ್ರಾಂತಿ ಪಡೆಯಲು ಅನುಕೂಲತೆ ಕಲ್ಪಿಸಲಾಗಿದೆ. ಜೊತೆಗೆ ಶುದ್ಧ ಕುಡಿಯುವ ನೀರು ಸಹ ಒದಗಿಸಲಾಗುತ್ತಿದೆ.

ಬೆಲ್ಲ, ಅಕ್ಕಿ, ದವಸಧಾನ್ಯ ಸಂಗ್ರಹವಾಗಿದ್ದು, ದಕ್ಷಿಣ ಆಫ್ರಿಕಾದಲ್ಲಿರುವ ಶಿರೂರ ನಿವಾಸಿ ಪ್ರವೀಣ ಹಡಪದ ಪ್ರತಿ ವರ್ಷವೂ 1.25 ಲಕ್ಷ ರೂ.ಗಳನ್ನು ಯಾತ್ರಿಗಳ ಸೇವಾ ಕಾರ್ಯಕ್ಕೆ ನೀಡುತ್ತಾರೆ. ಜೊತೆಗೆ ಸ್ಥಳಿಯ ಅನೇಕ ಜನ ಭಕ್ತರು ಹಣ್ಣು, ಹಂಪಲ, ತಂಪು ಪಾನೀಯಗಳ ಸೇವೆಗೈಯುತ್ತಾರೆ. ವಯೋವೃದ್ಧರಾದಿಯಾಗಿ ಯುವಕರು,ಮಹಿಳೆಯರು ಶ್ರೀಶೈಲ ಪಾದಯಾತ್ರಿಗಳ ಸೇವೆ ಮಾಡುವ ಮೂಲಕ ತಮ್ಮ ಹರಕೆ ತೀರಿಸುತ್ತಾರೆ.

### ಬೇಡಜಂಗಮ ಸಹಕಾರಿ ಸಂಘದಿಂದ ಶ್ರೀ, ರೇಣುಕಾಚಾರ್ಯ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ರಬಕವಿ–ಬನಹಟ್ಟಿ:ಮಾ.13: ತಾಲೂಕಿನ ಬನಹಟ್ಟಿ ನಗರದ "ಬೇಡಜಂಗಮ" ಪತ್ತಿನ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ನಿನ್ನೆ ಜಗದ್ಗುರುಶ್ರೀ,ರೇಣುಕಾಚಾರ್ಯರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸುವಲ್ಲಿ ಜಯಂತಿಯನ್ನು ಆಚರಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಕಾರ್ಯದರ್ಶಿ ಸಂಗಯ್ಯ ಮಠಪತಿ.ಶ್ರೀ,ರೇಣುಕಾಚಾರ್ಯರು ವೀರಶೈವ ಧರ್ಮಕ್ಕೆ ನೀಡಿದ ಭೊದನಾ ಸಂಕೇತಗಳು ಬಹೂ ಮಹತ್ವವಾಗಿವೆ. ಅವುಗಳನ್ನು ನಮ್ಮಲ್ಲಿ ಅಳವಡಿಕೊಂಡು ಧರ್ಮದ ತತ್ವ ಸಿದ್ದಾಂತಗಳ ಮಾರ್ಗವಾಗಿಸಿ ಪ್ರಾಮಾಣಿಕ ಪ್ರಯತ್ನದಲ್ಲಿ ಸಾಗಬೇಕಿದೆ ಎಂದು ಹೇಳಿದರು.

ಸಂಘದ ಕಾರ್ಯಾಲಯದಲ್ಲಿ ಶ್ರೀಮತಿ ದಾನಮ್ಮ

ಕಾಡದೇವರ, ಕುಮಾರಿ,ಶ್ರುತಿ ಮುತ್ತಿನಕಂತಿಮಠ,ಮಾಹಾಂತೇಶ ಬಂಗಿ, ಮುತ್ತು ಅಮ್ಮಣಗಿಮಠ. ಸೇರಿದಂತೆ ಅನೇಕರು ಹಾಜರಿದ್ದರು.

### ಭಾಗಿರಥಿ ಶಾಲೆಯಲ್ಲಿ ರೇಣುಕಾಚಾರ್ಯ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.13:ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ರೇಣುಕಾಚಾರ್ಯರ ಜಯಂತಿ ಜರುಗಿತು.

ಮುಖ್ಯಶಿಕ್ಷಕ ಮನೋಜಕುಮಾರ ಹಿರೇಮಠ ಪುಷ್ಪನಮನ ಸಲ್ಲಿಸಿ ಮಾತನಾಡಿದರು,ರೇಣುಕಾಚಾರ್ಯರ ತತ್ವಸಿದ್ಧಾಂತಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ತಿಳಿಸಿದರು.ಮಾನವ ಧರ್ಮಕ್ಕೆ ಜಯವಾಗಲಿ,ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶವನ್ನು ರೇಣುಕಾಚಾರ್ಯರು ಸಾರಿದ್ದಾ–ರೆ. ಎಲ್ಲ ಧರ್ಮದವರು ಸಾಮರಸ್ಯದಿಂದ ಬದುಕಬೇಕು ಎಂದು ಹೇಳಿದರು.

ಶಿಕ್ಷಕಿ ಶ್ರೀದೇವಿ ಸೋನಕಾಂಬಳೆ, ದೀಪಮಾಲಾ ಸೂರ್ಯವಂಶಿ, ರಾಜಶ್ರೀ ಸಿರಗಿರೆ, ಶೀತಲ ಹಂಗರಗೆ,ಅಶ್ವಿನಿ,ಪಂಚಪುಲಾ, ದೀಕ್ಷಾ, ಕೋಮಲ, ಶ್ರೇಯಾ, ಸುಷ್ಮಾ, ಸ್ವಾತಿ, ಅಪರ್ಣಾ, ರೋಶನಿ, ಶ್ಲೋಕ್, ವೇದಾಂತ, ಅಶ್ವಿನ ಸೇರಿದಂತೆ ಶಾಲೆ ಮುದ್ದು ಮಕ್ಕಳು ಪಾಲ್ಗೊಂಡಿದ್ದರು.

### ಪಿ.ಎಮ್.ಎಸ್.ಬಿ.ವೈ. ಯೋಜನೆಯಡಿ 5300 ಹಾಗೂ ಪಿ.ಎಮ್.ಜೆ.ಜೆ.ಬಿ.ವೈ. ಯೋಜನೆಯಡಿ 3600 ಅರ್ಜಿದಾರರ ನೋಂದಣಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.13:ಸ್ಟೇಟ್ ಬ್ಯಾಂಕ್ ಆಫ್ ಇಂಡಿಂ–ಯಾ ಹಾಗೂ ಕಲಬುರಗಿ ಜಿಲ್ಲಾಡಳಿತದ ನೆರವಿನೊಂದಿಗೆ ಕಲಬುರಗಿ ಜಿಲ್ಲೆಯ ಎಲ್ಲಾ ತಾಲೂಕುಗಳ 50 ಗ್ರಾಮ ಪಂಚಾಯಿತಿಗಳಲ್ಲಿ ಸಾಮಾಜಿಕ ಭದ್ರತಾ ಯೋಜನೆ (ಪ್ರಧಾನ್ ಮಂತ್ರಿಸುರಕ್ಷಾಬಿಮಾಯೋಜನೆ (ಪಿಎಂಎಸ್‌ಬಿವೈ) ಹಾಗೂ ಪ್ರಧಾನ್‌ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ (ಪಿಎಂಜೆಜೆಬಿವೈ)ನೋಂದಣಿಗಾಗಿ ಮಹಾ ಲಾಗಿನ್ ದಿನವನ್ನು ಬುಧವಾರ (ಮಾರ್ಚ್ 12 ರಂದು) ಆಚರಿಸಲಾಯಿತು.

ವಿವಿಧ ತಾಲೂಕಿನ ಗ್ರಾಮ ಪಂಚಾಯಿತಿಗಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಲೂಕು ಪಂಚಾಯತ್‌ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಬ್ಯಾಂಕ್ ಗ್ರಾಹಕ ಸೇವಾ ಪೂರೈಕೆದಾರರ (ಬಿ.ಸಿ.ಗಳ) ಸಹಕಾರದೊಂದಿಗೆ ಈ ಸಂದರ್ಭದಲ್ಲಿ ಸಾಮಾಜಿಕ ಭದ್ರತಾಯೋಜನೆಯಡಿ ಬ್ಯಾಂಕ್ ಸಿಬ್ಬಂದಿಗಳು ಪಿ.ಎಮ್.ಎಸ್.ಬಿ.ವೈ. ಯೋಜನೆಯಡಿ ಸುಮಾರು 5300 ಹಾಗೂ ಪಿ.ಎಮ್. ಜೆ.ಜೆ.ಬಿ.ವೈ. ಯೋಜನೆಯಡಿ 3600 ಜನ ಸಾರ್ವಜನಿಕರಿಂದ ಅರ್ಜಿಯನ್ನು ನೋಂದಣಿ ಮಾಡಿಸಲಾಯಿತು.

ಇದೇ ಸಂದರ್ಭದಲ್ಲಿ ಬ್ಯಾಂಕ್ ಸಿಬ್ಬಂದಿಗಳು ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ (ಪಿ.ಎಮ್. ಎಸ್.ಬಿ.ವೈ. ಹಾಗೂ ಪಿ.ಎಮ್. ಜೆ.ಜೆ.ಬಿ.ವೈ.) ಪ್ರಯೋಜನ ಪಡೆಯಬೇಕು ಎಂದು ಅರಿವು ಮೂಡಿಸಿದರು.

ಅದೇ ರೀತಿ ಕಾಳಗಿ ತಾಲೂಕಿನ ಗೋಟೂರ ಗ್ರಾಮ ಪಂಚಾಯಿತಿಯಲ್ಲಿ ಹಮ್ಮಿಕೊಂಡ ಮಹಾ ಮೇಗಾ ಲಾಗಿನ್ ಕಾರ್ಯಕ್ರಮದಲ್ಲಿ ಕಲಬುರಗಿ ಎಸ್.ಬಿ.ಐ.ಪ್ರಾದೇಶಿಕ ವ್ಯವಸ್ಥಾಪಕ ದೇವಕಿ ನಂದನ್ ಖಂಡೇಲ್‌ವಾಲ್, ಕಲಬುರಗಿ ಎಸ್.ಬಿ.ಐ. ಕಾಳಗಿ ಶಾಖೆ–ಯ ಮುಖ್ಯ ವ್ಯವಸ್ಥಾಪಕ ಸದಾಶಿವ ವೀರಸಂಗಪ್ಪ ರಾತ್ರಿಕರ್, ಎಸ್.ಬಿ.ಐ. ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷಕುಮಾರ ಪಾಟೀಲ ಹಾಗೂ ಕಾಳಗಿ ತಾಲೂಕು ಪಂಚಾಯತ್‌ಕಾರ್ಯನಿರ್ವಾಹಕ ಅಧಿಕಾರಿಗಳು ಸಾಮಾಜಿಕ ಭದ್ರತಾ ಯೋಜನೆಗಳ ಕುರಿತು ಮಾತನಾಡಿದರು.

ಜಿಲ್ಲೆಯಲ್ಲಿ ಮೇಗಾ ಲಾಗಿನ ಕಾರ್ಯಕ್ರಮದಲ್ಲಿ ಸಾಮಾಜಿಕ ಭದ್ರತಾ ಯೋಜನೆಯಡಿ (ಪಿ.ಎಮ್.ಎಸ್.ಬಿ.ವೈ.ಹಾಗೂ ಪಿ.ಎಮ್.ಜೆ.ಜೆ.ಬಿ.ವೈ.) ಯಡಿ ವಿಮೆಯ ಮೊತ್ತವನ್ನು 10 ಫಲಾನುಭವಿಗಳಿಗೆ ತಲಾ 2 ಲಕ್ಷ ರೂ. ರಂತೆ ಒಟ್ಟು 20 ಲಕ್ಷ ರೂ.ಗಳ ಚೆಕ್‌ನ್ನು ವಿತರಿಸಲಾಯಿತು.

# ಪಿ ಜಿ ಹಿರೇ. ಹಿರೇಮಠ ಹಾಗೂ ರೇವಣಸಿದ್ಧಯ್ಯ ಮಠಪತಿ ಉಭಯರಿಗೆ ಅಭಿನವ ರೇಣುಕ ಶ್ರೀ ಪ್ರಶಸ್ತಿ ಪ್ರದಾನ







ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 13 ಇಂದು ಸಂಪತ್ತಿನ ಶ್ರೀಮಂತಿಕೆ ಸಾಕಷ್ಟು ಇದ್ದರೂ ಜ್ಞಾನದ ಬಡತನ ಸಾಕಷ್ಟು ಇರುವುದು ಕಳವಳ ಕಾರಿ ಸಂಗತಿ ಎಂದು ಇಲ್ಲಿನ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಜಗದ ಆದಿ ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಅಂಗವಾಗಿ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಆಯೋಜಿಸಿದ್ದ " ಅಭಿನವ ರೇಣುಕ ಶ್ರೀ "ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಗೋರ್ಟಾದ ಗುರುಪಾದ ಶಿವಾಚಾರ್ಯ ಪ್ರೌಢಶಾಲೆಯ ನಿವೃತ್ತ ಮುಖೋಪಾಧ್ಯಾಯ ಪಿ ಜಿ ಹಿರೇಮಠ ಹಾಗೂ ಬೇಲೂರಿನ ಸರ್ಕಾರಿ ಶಾಲೆಯ ನಿವೃತ್ತ ಪ್ರಥಮ ದರ್ಜೆ ಸಹಾಯಕ ರೇವಣಸಿದ್ಧಯ್ಯ ಮಠಪತಿ ಅವರಿಗೆ "ಅಭಿನವ ರೇಣುಕ ಶ್ರೀ "ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿ ಆಶೀರ್ವದಿಸಿ ಆಶೀರ್ವಚನ ದಯಪಾಲಿಸುತ್ತ ಮನುಷ್ಯನಿಗೆ ಅನ್ನ, ನೀರು ಎಷ್ಟು ಮುಖ್ಯವೋ ಜ್ಞಾನವೂ ಅಷ್ಟೇ ಮುಖ್ಯ. ಆ ಜ್ಞಾನ ದಿಂದ ಮಾತ್ರ ಸತ್ಯ ಯಾವುದು, ಅಸತ್ಯ ಯಾವುದು ಎಂದು ತಿಳಿಯಲು ಸಾಧ್ಯ. ಹಾಗೆಯೇ ಪ್ರಶಸ್ತಿಗೆ ಭಾಜನರಾದ ಪಿ ಜಿ ಹಿರೇಮಠ ಹಾಗೂ ರೇವಣಸಿದ್ಧಯ್ಯ ಮಠಪತಿ ಅವರು ತಮ್ಮ ವೃತ್ತಿಯ ಜೊತೆಗೆ ಸದಾ ವೀರಶೈವ ಧರ್ಮ ಮಾರ್ಗದಲ್ಲಿ ನಡೆದು ಧರ್ಮಕ್ಕೆ ಸಾರ್ಥಕ ಸೇವೆ ಸಲ್ಲಿಸಿದ ಸಾಧನೆಗಾಗಿ ಉಭಯರಿಗೂ 2025 ರ " ಅಭಿನವ ರೇಣುಕ ಶ್ರೀ " ಪ್ರದಾನ ಮಾಡಿ ಗೌರವಿಸಲಾಗಿದೆ ಎಂದು ನುಡಿದರು.

ನೇತೃತ್ವ ವಹಿಸಿದ್ದ ಮಂಠಾಳ ಚೌಕಿ ಮಠದ ಪೂಜ್ಯಶ್ರೀ ಮ. ನಿ. ಪ್ರ. ಅಭಿನವ ಚನ್ನಬಸವ ಮಹಾಸ್ವಾಮಿಜಿ ಮಾತನಾಡಿ ಈ ಭಾಗದಲ್ಲಿ ಬಸವಕಲ್ಯಾಣ ಗವಿಮಠದ ಪೂಜ್ಯಶ್ರೀ ಡಾ. ಅಭಿನವ ಗುರುಗಳ ಧಾರ್ಮಿಕ, ಸಾಮಾಜಿಕ ಕಾರ್ಯಗಳು ಮಹತ್ವದ್ದಾಗಿವೆ. ಹಾನಗಲ್ಲ ಶ್ರೀ ಗುರು ಕುಮಾರ ಶಿವಯೋಗಿಗಳ ವಾಣಿಯಂತೆ ಡಾ. ಅಭಿವನ ಘನಲಿಂಗ ಗುರುಗಳು ಗವಿಮಠವನ್ನು ಘಟದಿಂದ ಮಠ ಮಾಡಿದ ಸ್ವಾಮಿಜೀಯವರು ಎಂದು ಸಂತಸ ವ್ಯಕ್ತಪಡಿಸಿದರು.

ಬೀದರನ ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ಆಯುಕ್ತ ಮಹೇಶ ಪಾಟೀಲ ಮಾತನಾಡಿ ಗವಿಮಠದ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ಗುರುಗಳು ಕ್ರೀಯಾಶೀಲರಾಗಿದ್ದು ನಿರಂತರವಾಗಿ ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತ ಭಕ್ತರಿಗೆ ಸದಾ ಧರ್ಮ ಸಂಸ್ಕಾರ ಕೊಡುತ್ತ ಧರ್ಮ ಜಾಗೃತಿ ಕೈಗೊಂಡು ಸಮಾಜ ಸುಧಾರಿಸುವ ಮಹಾ ಮಾಡುತ್ತಿರುವುದು ನಮ್ಮೆಲ್ಲರ ಭಾಗ್ಯ. ಹಾಗೆಯೇ ಇಂದು ನಮ್ಮೆಲ್ಲರಲ್ಲಿ ಧರ್ಮ ಜಾಗೃತಿ ಅವಶ್ಯವಾಗಿದ್ದು, ಸ್ವ ಧರ್ಮದ ಅಭಿಮಾನ ಹೊಂದಿ ನಾವೆಲ್ಲರೂ ಒಂದು ಎಂಬ ಭಾವನೆ ತಾಳಿ ಧರ್ಮ ರಕ್ಷಣೆ ಮುಂದಾದಾಗ ಮಾತ್ರ ನಮ್ಮ ಅಸ್ತಿತ್ವ ಉಳಿಯಲು ಸಾಧ್ಯ ಎಂದು ಹೇಳಿದರು.

ಪ್ರಶಸ್ತಿ ಸ್ವೀಕರಿಸಿ ಪಿ ಜಿ ಹಿರೇಮಠ ಮಾತನಾಡಿ ಪ್ರಶಸ್ತಿ ಪಡೆಯುದರಿಂದ ಜವಾಬ್ದಾರಿ ಹೆಚ್ಚುತ್ತದೆ. ಶ್ರದ್ಧೆಯಿಂದ ವೃತ್ತಿ ಮಾಡಿ ಅಂದಿನ ರಾಷ್ಟ್ರಪತಿ ಡಾ. ಶಂಕರ ದಯಾಳ ಶರ್ಮಾ ಅವರಿಂದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದಿರುವೆ. ಅದೇರೀತಿ ಗವಿಮಠದ ಪೂಜ್ಯಶ್ರೀ ಡಾ. ಅಭಿನವ ಗುರುಗಳು ನನಗೆ ಅಭಿನವ ರೇಣುಕ ಶ್ರೀ ಪ್ರಶಸ್ತಿ ನೀಡಿ ಗೌರವಿಸಿ ಆಶೀರ್ವದಿಸಿದ್ದು ನನ್ನ ಸುದೈವ ಎಂದು ಕೃತಜ್ಞತೆ ಸಲ್ಲಿಸಿದರು. ರೇವಣಸಿದ್ಧಯ್ಯ ಮಠಪತಿ, ಬಿಡಿಪಿಸಿ ನಿರ್ದೇಶಕರಾದ ಮಲ್ಲಯ್ಯ ಹಿರೇಮಠ, ಶ್ರೀಮದ್ವೀರಶೈವ ಸದ್ಬೋಧನ ಸಂಸ್ಥೆ ಡಾ. ಬಸವರಾಜ ಸ್ವಾಮಿ.

ಅಭಿನವ ರೇಣುಕ ಶ್ರೀ ಪ್ರಶಸ್ತಿ ಪ್ರದಾನ: ಗೋರ್ಟಾದ ಗುರುಪಾದ ಶಿವಾಚಾರ್ಯ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಪಿ. ಜಿ. ಹಿರೇಮಠ ಹಾಗೂ ಬೇಲೂರಿನ ಸರ್ಕಾರಿ ಶಾಲೆಯ ನಿವೃತ್ತ ಪ್ರಥಮ ದರ್ಜೆ ಸಹಾಯಕ ರೇವಣಸಿದ್ಧಯ್ಯ ಮಠಪತಿ ಇರ್ವರಿಗೆ 2025 ರ " ಅಭಿನವ ರೇಣುಕ ಶ್ರೀ " ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶರಣಬಸಪ್ಪ ಅಲಗುಡೆ ಬಸವಂತಪ್ಪ ಲವಾರೆ, ಮಲ್ಲಿಕಾರ್ಜುನ ನಂದಿ, ವಿಶ್ವನಾಥಪ್ಪ ಬಿರಾದಾರ, ಗುರುನಾಥ ಕೋಶೆಟ್ಟಿ, ಬಾಬುರಾವ ಉಳ್ಳೆ, ಡಾ. ವಿ. ಬಿ. ಮಂಡಿ, ಬಸತೀರ್ಥಯ್ಯ ಕಾಡಾದಿ, ಶ್ರೀಶೈಲ ವಾತಡೆ, ಬಾಬುಸ್ವಾಮಿ ಚನ್ನಳ್ಳಿ, ರಾಕೇಶ ಪುರವಂತ, ಶಾಂತವೀರ ಸ್ವಾಮಿ ಪೂಜಾರಿ, ಸದಾನಂದ ಕಣಜೆ, ಲೋಕೇಶ ಮಠಪತಿ, ಮಲ್ಲಿಕಾರ್ಜುನ ಅಲಗುಡೆ, ಸಂಜಯ ಜಾಧವ, ಬಸವರಾಜ ಬಂದಗೆ, ಕಸಾಪ ಅಧ್ಯಕ್ಷ ಶಾಂತಲಿಂಗ ಮಠಪತಿ, ಪ್ರೊ. ಬಸವರಾಜ ಸಿರಿ, ಪ್ರಾಚಾರ್ಯರಾದ ಶರಣು ದಂಡೆ, ಶಾಂತಯ್ಯ ಮಠಪತಿ, ಶಶಿಧರ ಪಾಟೀಲ, ಸಾಹಿತಿ ವೀರಶೆಟ್ಟಿ ಪಾಟೀಲ, ಶರಣಯ್ಯ ಮಠಪತಿ, ಗೋವಿಂದರೆಡ್ಡಿ ಕೋತಾಪಲ್ಲೇ, ವಿಮಲಾಬಾಯಿ ಬಿರಾದಾರ, ಸವಿತಾ ಸ್ವಾಮಿ, ಸುಮಂಗಲಾ ನಂದಿ, ಸರಸ್ವತಿ ಬೆಂಬಳಿ, ಸರೋಜನಿ ಹಿರೇಮಠ, ರೇಣುಕಾ ಮಠಪತಿ, ಶೀಲಾದೇವಿ ಲವಾರೆ, ಸತ್ಯವತಿ ಸ್ವಾಮಿ, ರೇಖಾ ಚಿಟ್ಟೆ, ಮಹಾನಂದಾ ಪುರವಂತ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಲಿಕಾ ಹಬ್ಬ ವಿಶಿಷ್ಟವಾಗಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಮಾ 13 ತಾಲೂಕಿನ ಸಮೂಹ ಸಂಪನ್ಮೂಲ ಕೇಂದ್ರ ಭೊಸಗಾ ಕ್ಲಸ್ಟರ್ನ ನಲಿನ ಸ ಹಿ ಪ್ರಾ ಶಾಲೆ ಚಿಟ್ಟಾ ಕ ಶಾಲೆಯಲ್ಲಿ 24–25 ನೇ ಸಾಲಿನ ಈಐಓ ಆಧಾರಿತ 1–5 ನೇ ತರಗತಿಯ ಮಕ್ಕಳ ಕಲಿಕಾ ಹಬ್ಬ ವಿಜ್ರಂಭಣೆಯಿಂದ ಊರಿನಲ್ಲಿ ಎತ್ತಿನಗಾಡಿಯೊಂದಿಗೆ ಮಕ್ಕಳ ಕುಣಿತ ಹಾಡು ಭಜನೆಯೊಂದಿಗೆ ಕ್ಲಸ್ಟರ್ನ ಎಲ್ಲಾ ಶಿಕ್ಷಕರು ಮೆರವಣಿಗೆ ಮಾಡಿದರು. ಮತ್ತು ವಿವಿಧ ಶಾಲೆಯ ಮಕ್ಕಳು ಕಲಿಕೊಪಕರಣ ತಯಾರಿಸಿ ಪ್ರದರ್ಶನ ಮಾಡಿದರು. ಮತ್ತು ಆಲಗೂಡ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಸಂಗಿತಾ ಮೆಡಮರವರು ಮಾತನಾಡಿ ಈ ರೀತಿ ಹಬ್ಬ ಆಚರಿಸದರೆ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಸಹಾಯ ಆಗುತ್ತದೆ ಎಂದರು. ಮತ್ತು ಭೊಸಗಾ ಕ್ಲಸ್ಟರ್ನ ಸಂಪನ್ಮೂಲ ವ್ಯಕ್ತಿ ಅಣ್ಣೆಪ್ಪಾ ಚಿಟಂಪಲೆ ರವರು ಮಾತನಾಡಿ ಸರ್ಕಾರದ ನೀಯಮದಂತೆ ಇಂತಹ ಕಾರ್ಯಕ್ರಮಗಳು ಆಗಾಗ ನಡೆಯುತ್ತಾ ಇದ್ದರೆ ಮಕಳಿಗೆ ಕಲಿಕೆಯಲ್ಲಿ ಸಹಾಯ ಆಗುತ್ತದೆ. ಕಿಶನ್ ಬಾವ ಮುಖ್ಯ ಶಿಕ್ಷಕರು ಚಿಟಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಗೊವಿಂದ ಚಿಟಂಪಲೆ ಸಿ ಆರ್ ಪಿ ಉಜಳಂಬ, ಗೊವಿಂದ ಪಾಟಿಲ್ ಮುಖ್ಯ ಶಿಕ್ಷಕರು ಚಿಟಾ ಮಾತನಾಡಿದರು ಈ ಸಂದರ್ಭದಲ್ಲಿ . ಸುಭಾಷ ಚಾಟಲೆ, ಜೀತು ಪಾಟಿಲ್, ಕ್ಲಸ್ಟರ್ನ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು ಸೇರಿದಂತೆ ಅನೇಕರು ಹಾಜರಿದ್ದರು, ಸಂಚಾಲನೆ ಅಂಬಾರಾಯ ಊಗಾಜಿ. ಅಣೆಪ್ಪಾ ಚಿಟ್ಟಂಪಲ್ಲೆ ಸ್ವಾಗತ ವೇದಪ್ರಕಾಶ ಜಗತಾಪ ವಂದಿಸಿದರು.



ಬಸವಕಲ್ಯಾಣ :– ನಗರದ ಕಲ್ಯಾಣ ಕರ್ನಾಟಕ ಶಿಕ್ಷಣ ಸಂಸ್ಥೆ ವಿದ್ಯಾ ಚೇತನ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 14ನೇ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶಾಲೆಯ ಮಕ್ಕಳಿಗೆ ನೋಟ್ ಬುಕ್ ಪೆನ್ ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆ ಅಧ್ಯಕ್ಷರಾದ ಬಸವಲಿಂಗ ಸುಬೇದಾರ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮುಲಗೆ ಸದಸ್ಯರಾದ ಶ್ರೀನಿವಾಸ ಕಠಾರೆ ಮುಖ್ಯ ಗುರುಗಳು ಶಿಲ್ಪಾ ಬಸವರಾಜ ತೊಗಲೆ ಹಾಗೂ ಶಿಕ್ಷಕರು ಮಕ್ಕಳೊಂದಿಗೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ವೈಭವದಿಂದ ಜರುಗಿದ ಬೆಳಕೇರಾ ಬೆಟ್ಟದ ರೇವಣ್ಣಸಿದ್ದೇಶ್ವರರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಬೆಳಕೇರಾ ಬೆಟ್ಟದ ಶ್ರೀ ರೇವಣ್ಣಸಿದ್ದೇಶ್ವರರ 16ನೇ ಜಾತ್ರಾ ಮಹೋತ್ಸವದ ನಿಮಿತ್ಯ ಪ್ರತಿವರ್ಷದಂತೆ ಈ ವರ್ಷವೂ ಕೂಡ ವೈಭವಯೊಂದಿಗೆ ಅದ್ದೂರಿಯಾಗಿ ರಥೋತ್ಸವ ಜರುಗಿತ್ತು . ಲಾಡಗೇರಿಯ ಮಠದ ಗಂಗಾಧರ ಶಿವಾಚಾರ್ಯರು ಹಾಗೂ ಬೆಮಳಖೇಡಾ ಹಿರೇಮಠದ ರಾಜಶೇಖರ ಶಿವಾಚಾರ್ಯರು. ಹುಬ್ಬಳ್ಳಿಯ ಡಾ. ರಾಜಶೇಖರ ಶಿವಾಚಾರ್ಯರು, ಚಿಟಗುಪ್ಪ ಚಾಂಗಲೇರಾ ಅಯ್ಯಪ್ಪ ಸ್ವಾಮಿ ಹಿರೇಮಠದ ಪೂಜ್ಯ ಷ. ಬ್ರ. ಮರುಳಾರಾಧ್ಯ ಶಿವಾಚಾರ್ಯರು, ಸೊಂತ ಮುಲ್ಲಾಮಾರಿ ತೀರ ಕ್ಷೇತ್ರದ ಬಾಲಯೋಗಿ ಅಭಿನವನ ಶರಣ ಶಂಕರಲಿಂಗ ಮಹಾರಾಜರ ದಿವ್ಯ ಸಾನಿಧ್ಯದಲ್ಲಿ ಧರ್ಮ ಸಭೆ ಜರುಗಿತ್ತು. ಜಾತ್ರಾ ಮಹೋತ್ಸವದ ಅಂಗವಾಗಿ ವಿಶೇಷ ಅನ್ನದಾಸೋಹ ಜರುಗಿತ್ತು. ಈ ಸಂದರ್ಭದಲ್ಲಿ ಪಂಚ ಕಮಿಟಿಯ ಅಧ್ಯಕ್ಷ ಅನೀಲಕುಮಾರ ಪೊಲೀಸ್ ಪಾಟೀಲ್, ಉಪಾಧ್ಯಕ್ಷ ರಾಜಶೇಖರ ಮೂಲಗಿ, ಕಾರ್ಯದರ್ಶಿ ರಾಜು ಹುಡಗಿ, ಕೋಶಾಧ್ಯಕ್ಷ ಚಂದ್ರಶೇಖರ್ ನಾರಾಯಣಪೇಟ್, ಶಿವಕುಮಾರ ಪಾಟೀಲ್ ಸೇರಿದಂತೆ ಸದಸ್ಯರ ಹಾಗೂ ಸಾವಿರಾರು ಭಕ್ತರ ಸಮುಖದಲ್ಲಿ ರಥೋತ್ಸವ ಅದ್ದೂ–ರಿಯಾಗಿ ಜರುಗಿತ್ತು.

# ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ಸಂಸ್ಕಾರಯುತ ಶಿಕ್ಷಣ ನೀಡಿ:– ಶ್ರೀನಿವಾಸ್ ಮಹಾಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ :– ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಜೊತೆಗೆ ನೀಡಬೇಕೆಂದು ಸಂಸ್ಕಾಯುತ ಶಿಕ್ಷಣ ನೀಡಬೇಕೆಂದು ಯಾದಗಿರಿ ಹುಮನಾಬಾದ್ ಏಕದಂಡಗಿ ಮಠದ ಶ್ರೀನಿವಾಸ್ ಮಹಾಸ್ವಾಮಿಗಳು , ತಾಲೂಕಿನ ಹಳ್ಳಿಖೇಡ ಬಿ ಗ್ರಾಮದ ವಿಶ್ವಕರ್ಮ ಗಾಯತ್ರಿ ಮಹಿಳಾ ಟ್ರಸ್ಟ್ ಶ್ರೀ ಗುರು ವಿಶ್ವಕರ್ಮ ಪೂರ್ವ ಹಿರಿಯ ಪ್ರಾಥಮಿಕ ಶಾಲೆಯ 26ನೇ ವಾರ್ಷಿಕೋತ್ಸವ ಹಾಗೂ ಮಕ್ಕಳ ಸಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ ಸಲಹೆ ನೀಡಿದರು. ಹಳ್ಳಿಖೇಡ (ಬಿ) ಪಟ್ಟಣದಲ್ಲಿ ಕಳೆದ 26 ವರ್ಷಗಳಿಂದ ಈ ಭಾಗದಲ್ಲಿ ಈ ಸಂಸ್ಥೆ ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಕೆಲಸ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು. ಸುಲೇಪೇಟ್ ಏಕದಂಡಗಿ ಮಠದ ದೊಡ್ಡೇಂದ್ರ ಮಹಾಸ್ವಾಮಿಗಳು ಮಾತನಾಡಿ, ಶಾಮಲಾ ಜೀ ಪಂಚಾಳ ಇವರು ಮಹಿಳಾ ಶಿಕ್ಷಣ ಸಂಸ್ಥೆ ಆರಂಭಿಸಿ ಕಳೆದ 26 ವರ್ಷಗಳಿಂದ ಈ ಭಾಗದಲ್ಲಿ ಒಳ್ಳೆಯ ಶಿಕ್ಷಣ ನೀಡುತ್ತಿರುವ ಕಾರ್ಯ ಮೆಚ್ಚುವಂತದ್ದಾಗಿದೆ ಎಂದರು. ಸಂಸ್ಥೆಯ ಅಧ್ಯ–ಕ್ಷೆ ಶಾಮಲಾ ಜಿ. ಪಂಚಾಳ ಅಧ್ಯಕ್ಷತೆವಹಿಸಿ ಮಾತನಾಡಿದರು. ಚಳಕಾಪುರ ಸಿದ್ದರೊಡ ಮಠದ ಶಂಕರಾನಂದ ಮಹಾಸ್ವಾಮಿಗಳು, ರಾಜಯೋಗ ಕೇಂದ್ರದ ಸುಮನ್ ಬೇಹಂಜೀ, ಜಿಲ್ಲಾ ಜ್ಞಾನ ವಿಜ್ಞಾನ ಕೇಂದ್ರದ ಡಾ. ರಾಜಶೇಖರ ಮಠಪತಿ, ಪುರಸಭೆ ಸದಸ್ಯ ಮಲ್ಲಿಕಾರ್ಜುನ ಪ್ರಭಾ, ಬಿಜೆಪಿ ಮುಖಂಡ ಅರುಣಕುಮಾರ್ ಪಿ. ಬಾವಾಗಿ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ರವಿ ಪಂಚಾಳ, ಸುಭಾಷ ಕೆನಾಡೇ, ಡಾ. ಹಸನ್, ಪರಿಸರವಾದಿ ಶೈಲೇಂದ್ರ ಕಾವಡಿ, ವೀರೇಶರೆಡ್ಡಿ, ರವಿ ಪಂಚಾಳ, ಸೋಮನಾಥ ಪಂಚಾಳ, ದತ್ತಾತ್ರೇಯ ಪಂಚಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಂಸ್ಥೆಯ ಮಾರ್ಗದರ್ಶಕ ಗಣಪತರಾವ ಪಂಚಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ನಂತರ ಶಾಲಾ ಮಕ್ಕಳಿಂದ ಸಂಸ್ಕೃತಿಕ ಕಾರ್ಯಕ್ರಮಗಳು.

# ಸಮಾಜ ಕಲ್ಯಾಣ ಇಲಾಖೆ ಪ್ರವೇಶಾತಿಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.13–ಜಿಲ್ಲೆಯಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು, ಅನೈರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಮಕ್ಕಳು 2025–26ನೇ ಸಾಲಿಗೆ ಮಾನಸ ಗಂಗೋತ್ರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆ, ವಿಜಯಪುರ ಜಿಲ್ಲೆ ಮತ್ತು ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಯಾದವಗಿರಿ ಮೈಸೂರು ಇಲ್ಲಿಗೆ ಪ್ರವೇಶ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಮಾನಸ ಗಂಗೋತ್ರಿ ಆಂಗ್ಲ ಮತ್ತು ಕನ್ನಡ ಮಾಧ್ಯಮ ಶಾಲೆ, ವಿಜಯಪುರ ಇಲ್ಲಿ 5ನೇ ತರಗತಿ ಮತ್ತು ಪ್ರಥಮ ಪಿಯುಸಿ ಗೆ ಪ್ರವೇಶ ಪರೀಕ್ಷೆಯನ್ನು ಮೇ 18 ರಂದ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 01 ಗಂಟೆಗೆ ನಡೆಸಲು ನಿಗದಿಪಡಿಸಿದೆ. ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಯಾದವಗಿರಿ ಮೈಸೂರು ಇಲ್ಲಿಗೆ 8ನೇ ತರಗತಿಗೆ ಪ್ರವೇಶ ಪರೀಕ್ಷೆಯನ್ನು ಏ.12 ರಂದು ಬೆಳಿಗ್ಗೆ 10 ಗಂಟೆಗೆ ನಡೆಸಲಿದ್ದಾರೆ. ಪ್ರವೇಶ ಪರೀಕ್ಷೆ ಬರೆಯಲು ಇಚ್ಛಿಸುವ ಮಕ್ಕಳು ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಮಾ.26 ರೊಳಗೆ ಸಹಾಯಕ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬಳ್ಳಾರಿ, ಸಿರುಗುಪ್ಪ, ಸಂಡೂರು ಹಾಗೂ ಉಪನಿರ್ದೇಶಕರ ಕಛೇರಿ, ಕೋಟೆ, ಬಳ್ಳಾರಿ ಇಲ್ಲಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೊ.9480843023 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಿವಂಗತ ಮಹೇಂದ್ರಕುಮಾರ್ ಪಾಟೀಲ್ ಅವರ ಶ್ರದ್ಧಾಂಜಲಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಇತ್ತೀಚಿಗೆ ರಸ್ತೆ ಅಪಘಾತದಲ್ಲಿ ನಿಧನ ಹೊಂದಿದ ಕಾರಪಾಕಪಳ್ಳಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಮಹೇಂದ್ರಕುಮಾರ್ ಪಾಟೀಲ್ ರವರ ಶ್ರದ್ಧಾಂಜಲಿ ಸಭೆ ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ಅಧ್ಯಕ್ಷತೆಯಲ್ಲಿ ಜರಗಿ–ತು. ಈ ಸಂದರ್ಭದಲ್ಲಿ ಡಾ. ದಯಾನಂದ ಕಾರಬಾರಿ, ರಾಮಕೃಷ್ಣ ನಿರ್ಣಾಕ್ಕರ್, ಚಂದ್ರಶೆಟ್ಟಿ ಪವಾರ್, ಡಾ. ಶಾಂತಕುಮಾರ್ ಗೋಪಾ, ವೆಂಕಟಪ್ಪ, ಮಹೇಶ್, ಸಂಜೀವನ ಭೋಸ್ಲೆ, ಬಸವರಾಜ ಮೇತ್ರೆ, ನಟವರ ಪವಾರ ಉಪಸ್ಥಿತರಿದ್ದರು.

## ಬೊಮ್ಮಗೊಂಡೇಶ್ವರ ಉತ್ಸವ: ಭಿತ್ತಿಪತ್ರ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 13 : ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದಿಂದ ಮಾರ್ಚ್ 23 ರಂದು ಹಮ್ಮಿಕೊಂಡಿರುವ ಮಹಾತ್ಮ ಬೊಮ್ಮಗೊಂಡೇಶ್ವರ ಉತ್ಸವದ ಭಿತ್ತಿಪತ್ರ ಹಾಗೂ ಕರಪತ್ರ ನಗರದಲ್ಲಿ ಗುರುವಾರ ಬಿಡುಗಡೆ ಮಾಡಲಾಯಿತು.

ನಾಡಿಗೆ ಬೊಮ್ಮಗೊಂಡೇಶ್ವರ ಕೊಡುಗೆ ಅನನ್ಯ. ಅವರ ಜೀವನ ಮತ್ತು ಸಾಧನೆಯನ್ನು ಜನರಿಗೆ ತಿಳಿಸಲು ನಗರದಲ್ಲಿ ಬೊಮ್ಮಗೊಂಡೇಶ್ವರ ಉತ್ಸವ ಆಯೋಜಿಸಿರುವುದು ಪ್ರಸಂಸನೀಯ ಎಂದು ಭಿತ್ತಿಪತ್ರ ಬಿಡುಗಡೆ ಮಾಡಿದ ಗೊಂಡ ಸಮಾಜದ ಹಿರಿಯ ಮುಖಂಡ ಭೀಮಸಿಂಗ್ ಮಲ್ಕಾಪುರ ಹೇಳಿದರು.

ಬೊಮ್ಮಗೊಂಡೇಶ್ವರ ಉತ್ಸವದ ಯಶಸ್ವಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರಪತ್ರ ಬಿಡುಗಡೆಗೊಳಿಸಿದ ಗಾಂಧಿಗಂಜನ ಕನಕ ಭವನದ ಅಧ್ಯಕ್ಷ ನಾಗರಾಜ ನಂದಗಾಂವ್ ತಿಳಿಸಿದರು.

ಬೊಮ್ಮಗೊಂಡೇಶ್ವರ ಉತ್ಸವದ ಪ್ರಚಾರಕ್ಕೆ ಚಾಲನೆ ಕೊಡಲಾಗಿದೆ. ಜಿಲ್ಲೆಯ ತಾಲ್ಲೂಕು ಕೇಂದ್ರಗಳು, ಗ್ರಾಮೀಣ ಪ್ರದೇಶಗಳಲ್ಲಿ ಭಿತ್ತಿಪತ್ರ, ಬ್ಯಾನರ್ ಅಳವಡಿಕೆ, ಕರಪತ್ರ ವಿತರಣೆ, ಸಭೆ, ಸಮಾರಂಭಗಳ ಮೂಲಕ ಉತ್ಸವದ ಪ್ರಚಾರ ಮಾಡಲಾಗುವುದು. ಅರ್ಥಪೂರ್ಣ ಉತ್ಸವದ ಸಂಘಟನೆಗೆ ಸಿದ್ಧತೆ ನಡೆಸಲಾಗುತ್ತಿದೆ ಎಂದು ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಅಧ್ಯಕ್ಷ ಸಂತೋಷಕುಮಾರ ಜೋಳದಾಪಕೆ ಹೇಳಿದರು.

ಮೈಲಾರ ಮಲ್ಲಣ್ಣ ದೇವಸ್ಥಾನ ಸಮಿತಿಯ ಮಾಜಿ ಅಧ್ಯಕ್ಷ ಕೆ.ಡಿ. ಗಣೇಶ, ಬೊಮ್ಮಗೊಂಡೇಶ್ವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮೊಗಲಪ್ಪ ಚಿಲ್ಲರ್ಗಿ, ಡಾ. ಉದಯಸಿಂಗ್, ಪ್ರಮುಖರಾದ ದೇವಪ್ಪ ಚಾಂಬೋಳೆ, ಎಂ.ಪಿ. ವೈಜಿನಾಥ, ವಿಜಯಕುಮಾರ ಬ್ಯಾಲಹಳ್ಳಿ, ಬಸವರಾಜ ಬಾವಗಿ, ರಮೇಶ ಮರ್ಜಾಪುರ, ಬಸವರಾಜ ನಂದಗಾಂವ್, ರಾಮಣ್ಣ ಗಾದಗಿ, ಸಂಜುಕುಮಾರ ತಳಘಟ, ಬಾಬು ಅಲ್ಲೂರೆ, ಬಕ್ಕಪ್ಪ ನಾಗೂರೆ, ಸುನೀಲ್ ಚಿಲ್ಲರ್ಗಿ, ಗೋವಿಂದ ದುರ್ಗೆ, ಪ್ರಕಾಶ್ ಚಿಲ್ಲರ್ಗಿ, ಕಲ್ಲಪ್ಪ ಶಹಾಪುರ, ಅಶೋಕ ನ್ಯಾಮತಾಬಾದ್, ಪ್ರಲ್ಹಾದ್ ಚಿಟ್ಟಾವಾಡಿ, ಪಂಢರಿ ಜಮಾದಾರ್, ನರಸಪ್ಪ ಸೋಲಪುರ, ಆನಂದ ಸೋಲಪುರ, ಸಿದ್ದು ಬಾವಗಿ, ಸುಧಾಕರ ಮಲ್ಕಾಪುರ, ಅನಿಲ್ ಚಿಲ್ಲರ್ಗಿ, ವಿಜಯಕುಮಾರ ಮಲ್ಕಾಪುರೆ ಮತ್ತಿತರರು ಇದ್ದರು.

# ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿಗಳ ಪ್ರಗತಿ ಪರಿಶೀಲನೆ ಸಭೆ



ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.13: ಬೀದರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಅವರು ದಿನಾಂಕ:12-03-2025 ರಂದು ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿಗಳ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಿದರು.

ಗೃಹಲಕ್ಷ್ಮಿ ??ಯೋಜನೆಯಡಿ ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳು 335429 ಇದ್ದು ರೂ.929.00. ಕೋಟಿ ಹಣ ಸಂಬಂಧಿಸಿದ ಫಲಾನುಭವಿಗಳ ಖಾತೆಗೆ ಜಮಾಯಾಗಿರುತ್ತದೆ. ಅದಲ್ಲದೆ ಐಟಿ ಮತ್ತು ಜಿಎಸ್‌ಟಿ ಸಮಸ್ಯೆ ಇರುವ 2699 ಫಲಾನುಭವಿಗಳಿಗೆ ಹಣ ಬಂದಿರುದಿಲ್ಲಾವೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದರು. ಅದಕ್ಕೆ ಅಧ್ಯಕ್ಷರು ಸದರಿ ಫಲಾನುಭವಿಗಳ ಪಟ್ಟಿ ನೀಡಬೇಕೆಂದು ಕೇಳಿದಾಗ ಸದರಿ ಪಟ್ಟಿ ರಾಜ್ಯ ಮಟ್ಟದಲ್ಲಿರುವುದರಿಂದ ನಮಗೆ ಮಾಹಿತಿ ನೀಡಲು ಅವಕಾಶ ಇರುವದಿಲ್ಲವೆಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ತಿಳಿಸಿದರು.

ಉಪನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿ ಅವರಿಗೆ ಪ್ರತಿ ತಿಂಗಳು ತಾಲ್ಲೂಕಿಗಳಿಗೆ ಭೇಟಿ ನೀಡಿ ನ್ಯಾಯ ಬೆಲೆ ಅಂಗಡಿಗಳನ್ನು ಪರಿಶೀಲಿಸಬೇಕೆಂದು ಸೂಚಿಸಿದರು. ಅದಲ್ಲದೇ ಕಾಳಸಂತೆಯಲ್ಲಿ ಪಡಿತರ ಆಹಾರ ಧಾನ್ಯವನ್ನು ಮಾರಟ ಆಗದಂತೆ ನೋಡಿಕೊಳ್ಳಲು ಉಪನಿರ್ದೇಶಕರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿ ಅವರಿಗೆ ಸೂಚಿಸಿದರು.

ಗೃಹ ಜ್ಯೋತಿ ಪ್ರಗತಿಯನ್ನು ಪರಿಶೀಲಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಕೇಳಿದಾಗ ಎರಡು ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು, ಜೆಸ್ಕಾಂ ಬೀದರ ಮತ್ತು ಹುಮನಾಬಾದ ಅಧಿಕಾರಿಗಳು ಸಭೆಗೆ ಗೈರು ಹಾಜರಾಗಿರುವದರಿಂದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳು ಬೇಜಾರು ವ್ಯಕ್ತಪಡಿಸಿ ಅವರ ವಿರುದ್ಧ ಕ್ರಮ ಕೈಕೊಳ್ಳಬೇಕೆಂದು ತಿಳಿಸಿದರು.

ಗ್ರಾಮೀಣ ಭಾಗದ ಎಲ್ಲಾ ತಾಂಡಗಳಿಗೆ ಬಸ್ಸಿನ ಸೌಲಭ್ಯ ಒದಗಿಸಬೇಕು. ಬೀದರ ಜಿಲ್ಲೆಯ ಕೆಲವೊಂದು ಬಸ್ಸು ತಂಗುದಾಣ ಕೆಟ್ಟಿಹೊಗಿರುತ್ತವೆ ಅದನ್ನು ಸರಿಪಡಿಸಬೇಕೆಂದು ವಿಭಾಗೀಯ ನಿಯಂತ್ರಣಾಧಿಕಾರಿಗಳು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ ವಿಭಾಗ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿದರು.

ಯುವನಿಧಿ ಬಗ್ಗೆ ಪ್ರಗತಿ ಪರಿಶೀಲಿಸಿ ಯುವನಿಧಿಯ ಪ್ರಗತಿ ತೃಪ್ತಿಕರವಾಗಿಲ್ಲವೆಂದು ಅಧ್ಯಕ್ಷರು ತಿಳಿಸಿದರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅವರು ಮಾತನಾಡಿ ಸದರಿ ವಿಷಯ ಕುರಿತು ಡಿಡಿಪಿಐ ಮತ್ತು ಡಿಡಿಪಿಯು ರವರೊಂದಿಗೆ ಸಮನ್ವಯ ಸಾಧಿಸಿ ಹೆಚ್ಚಿನ ಪ್ರಗತಿ ಸಾಧಿಸಲು ನಿರ್ದೇಶಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಬೀದರನಿಂದ ಜ್ಯಾಂತಿಗೆ ಬಸ್ ಓಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 13 : ಬೀದರನಿಂದ ಭಾಲ್ಕಿ ತಾಲ್ಲೂಕಿನ ಜ್ಯಾಂತಿ ಗ್ರಾಮಕ್ಕೆ ಕಣಜಿ ಮಾರ್ಗವಾಗಿ ನಿತ್ಯ ಮಧ್ಯಾಹ್ನ ಬಸ್ ಓಡಿಸಬೇಕು ಎಂದು ನಮ್ಮ ಕರ್ನಾಟಕ ಸೇನೆ ಒತ್ತಾಯಿಸಿದೆ.

ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಜಿ. ಪಾಟೀಲ ಅವರು ಈ ಕುರಿತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಬೆಳಿಗ್ಗೆ 6ಕ್ಕೆ ಕಣಜಿಯಿಂದ ಹುಣಜಿ, ಜ್ಯಾಂತಿ, ನೇಳಗಿ, ಸಿದ್ಧೇಶ್ವರ ವಾಡಿ, ತರನಳ್ಳಿ, ಹಲಬರ್ಗಾ ಮಾರ್ಗವಾಗಿ ಬೀದರಗೆ ಬಸ್ ಇದೆ. ಆದರೆ, ಬೀದರನಿಂದ ಮರಳಲು ಸಂಜೆ 4 ಗಂಟೆಗೆ ಬಸ್ ಇದೆ. ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ. ಕಾರಣ, ಮಧ್ಯಾಹ್ನ 1 ರಿಂದ 2 ರ ಮಧ್ಯೆ ಬೀದರನಿಂದ ಜ್ಯಾಂತಿಗೆ ಬಸ್ ಓಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಬೀದರ್– ರುದನೂರ ಬಸ್‌ನ್ನು ಜ್ಯಾಂತಿವರೆಗೆ ವಿಸ್ತರಿಸಬೇಕು ಎಂದೂ ಬೇಡಿಕೆ ಮಂಡಿಸಿದ್ದಾರೆ.

# ಪ್ಲಾಸ್ಟಿಕ್ ಮುಕ್ತ ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಿ: ಡಾ. ಸ್ವಪ್ನಾ ಅನಿಗೋಳ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮಾ.13:ಪ್ಲಾಸ್ಟಿಕ್ ಮುಕ್ತ ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಿದಾಗ ಮಾತ್ರ ನಮ್ಮ ಭೂಮಾತೆಯನ್ನು ಸಂರಕ್ಷಿಸಲು ಸಾಧ್ಯ ಎಂದು ರಾಷ್ಟ್ರೀಯ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತೆ ಬಾಗಲಕೋಟೆಯ ಡಾ. ಸ್ವಪ್ನಾ ಅನಿಗೋಳ ಅಭಿಪ್ರಾಯಪಟ್ಟರು.

ಪಟ್ಟಣದ ವಿವೇಕ ವಾಹಿನಿ ಶಿಕ್ಷಣ ಸಂಸ್ಥೆಯ ಸಂಸ್ಕಾರ ಪಬ್ಲಿಕ್ ಶಾಲೆಯಲ್ಲಿ, ಸಂಸ್ಕಾರ ಪಬ್ಲಿಕ್ ಶಾಲೆಯ 2ನೇ ವಾರ್ಷಿಕೋತ್ಸವ ಸಮಾರಂಭದ ನಿಮಿತ್ಯ ಆಯೋಜಿಸಿದ್ದ ಪ್ಲಾಸ್ಟಿಕ್ ಮುಕ್ತ ಅಭಿಯಾನದಲ್ಲಿ ಅವರು ಮಾತನಾಡಿದರು. ಭೂಮಾತೆಗೆ ತಾಯಿಯಂದು ಹೆಸರು ಬರಲು ತಾಯಿಯಲ್ಲಿರುವ ತಾಳ್ಮೆ ಗುಣವೇ ಕಾರಣ. ಮಕ್ಕಳು ನಾವು ಮಾಡುವ ಅನುಕರಣೆ ಚನ್ನಾಗಿ ಕಲಿತು ಕೊಳ್ಳುವರು. ಅದಕ್ಕಾಗಿ ನಾವು ಉತ್ತಮ ಸಂಸ್ಕಾರಯುತ ಅನುಕರಣೆ ಮಕ್ಕಳ ಜೊತೆ ಮಾಡಬೇಕು. ನಾವು ಟಿ.ವಿ ನೋಡುತ್ತಿದ್ದರೆ ಅವರೂ ಟಿ.ವಿ ನೋಡುವರು ಅದಕ್ಕಾಗಿ ನಾವು ಮಕ್ಕಳ ಜೊತೆಯಲ್ಲಿ ಭಗವದ್ಗೀತೆ, ವಚನ ಸಂಪುಟಗಳಂತಹ ಪುಸ್ತಕಗಳನ್ನು ಓದಬೇಕು. ಅಂದಾಗ ಮಾತ್ರ ಅವರು ಕೂಡ ಓದಲು ಕಲಿಯುವರು ಎಂದು ಪ್ರಾಯೋಗಿಕವಾಗಿ ಪ್ರಾತ್ಯಕ್ಷಿಕತೆಗಳನ್ನೊತೋರಿಸುತ್ತಾ ಸಭಿಕರ ಮನಮುಟ್ಟುಂತೆ ತಿಳಿಸಿದರು. ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜಯರಾಜ ದಾಬಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಈಶ್ವರ ರುಮ್ಮಾ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವುದೇ ವಿವೇಕವಾಹಿನಿ ಶಿಕ್ಷಣ ಸಂಸ್ಥೆಯ ಮೂಲ ಉದ್ದೇಶವಾಗಿದೆ. ಪ್ರತಿ ತಿಂಗಳು ಉತ್ತಮ ವಕ್ತಾರರನ್ನು ಸಂಸ್ಕಾರ ಪಬ್ಲಿಕ್ ಶಾಲೆಗೆ ಕರೆಸಿ ಮಕ್ಕಳಲ್ಲಿ ರಾಷ್ಟ್ರಪ್ರೇಮ ತುಂಬುವ ಕಾರ್ಯ ಮಾಡಲಾಗುತ್ತಿದೆ ಎಂದು ಹೇಳಿದರು. ಇದೇವೇಳೆ ಪ್ರಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ ಮಾಡುವ ಉದ್ದೇಶದಿಂದ ವೇದಿಕೆಯ ಮೇಲಿದ್ದ ಎಲ್ಲಾ ಅತಿಥಿ ಗಣ್ಯರಿಗೆ ಕಾಟನ್ ಬಟ್ಟೆಯ ಕೈಚೀಲ ನೀಡಲಾಯಿತು. ಕಾರ್ಯಕ್ರಮದಲ್ಲಿ ನಿರ್ಮಲಾ ಹಲಮಂಡಗೆ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅಮರ ಹಲಮಂಡಗೆ, ಬಾಗಲಕೋಟೆಯ ಶ್ರೀನಿವಾಸ ಪಾಟೀಲ, ಶಿವಲಿಂಗ ಅನಿಗೊಳ, ಶಿವಕುಮಾರ ಕೇರೂರ, ವಿಷ್ಣುಕೋಟೆ ಉಪಸ್ಥಿತರಿದ್ದರು. ನಂತರ ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

## ಏಡ್ಸ್ ನಿಯಂತ್ರಣಕ್ಕೆ ಮುಂಜಾಗ್ರತೆ ವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 13 : ಮಾರಕ ಏಡ್ಸ್ ನಿಯಂತ್ರಣಕ್ಕೆ ಎಲ್ಲರೂ ಮುಂಜಾಗ್ರತೆ ವಹಿಸಬೇಕು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಜಿಲ್ಲಾ ಮೇಲ್ವಿಚಾರಕ ಸೂರ್ಯಕಾಂತ ಹೇಳಿದರು.

ನಗರದ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನಲ್ಲಿ ಗುರುವಾರ ನಡೆದ ರೆಡ್ ರಿಬ್ಬನ್ ಕ್ಲಬ್ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಏಡ್ಸ್‌ಗೆ ಔಷಧಿ ಇಲ್ಲ. ಹೀಗಾಗಿ ರೋಗ ಬರದಂತೆ ಸುರಕ್ಷತಾ ಕ್ರಮಗಳನ್ನು ಅನುಸರಿಸುವುದು ಅವಶ್ಯಕವಾಗಿದೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮಾತನಾಡಿ, ಏಡ್ಸ್ ಮನುಷ್ಯನ ರೋಗ ನಿರೋಧಕ ಶಕ್ತಿಯನ್ನು ಕಡಿಮೆಗೊಳಿಸುತ್ತದೆ ಎಂದು ಹೇಳಿದರು. ಚಿದಂಬರ ಶಿಕ್ಷಣ ಸಂಸ್ಥೆಯ ಜಂಟಿ ಕಾರ್ಯದರ್ಶಿ ಮಡಿವಾಳಪ್ಪ ಗಂಗಶೆಟ್ಟಿ ಉದ್ಘಾಟಿಸಿದರು. ಏಡ್ಸ್ ಮುಕ್ತಿಯ ಕ್ರಮಗಳು ಕುರಿತ ಭಾಷಣ ಸ್ಪರ್ಧೆಯಲ್ಲಿ ಗೀತಾ ವಿಠ್ಠಲ ಪ್ರಥಮ, ವೈಷ್ಣವಿ ಮಿಟ್ಟುರಾಮ ದ್ವಿತೀಯ ಹಾಗೂ ದೀಪಿಕಾ ಅಶೋಕ್ ತೃತೀಯ ಬಹುಮಾನ ಗಳಿಸಿದರು. ಚಂದ್ರಪ್ಪ ಗೌರಶೆಟ್ಟಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಸೂರ್ಯಕಾಂತ ಐನಾಪುರೆ, ಶ್ರೀಮತಿ ಇಂದಿರಾಬಾಯಿ ಗುರುತಪ್ಪ ಶೆಟಕಾರ್ ಪ್ರೌಢಶಾಲೆಯ ಮುಖ್ಯಶಿಕ್ಷಕ ಲಕ್ಷ್ಮಣ ಪೂಜಾರಿ, ಬ್ರಿಮ್ಸ್ ರಕ್ತನಿಧಿ ಕೇಂದ್ರದ ಶಿವನಾಥ ಸ್ವಾಮಿ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕದ ಕಾರ್ಯಕ್ರಮ ಸಹಾಯಕ ಸಂಜಯಕುಮಾರ, ಉಪನ್ಯಾಸಕರಾದ ಪಂಡಿತ, ನೆಹರೂ ಪವಾರ್, ಮಂಗಲಾ, ರಾಜಮ್ಮ, ಅಂಬಿಕಾ, ಶ್ವೇತಾ, ಸಪ್ನಾ, ಅರ್ಚನಾ, ಕಾಲೇಜು ಸಿಬ್ಬಂದಿ ಆಕಾಶ್ ಇದ್ದರು.

ಕಾಲೇಜು ಪ್ರಾಚಾರ್ಯ ನಾಗಪ್ಪ ಜಾನಕನೋರ ಸ್ವಾಗತಿಸಿದರು. ಉಪನ್ಯಾಸಕ ಈಶ್ವರರೆಡ್ಡಿ ನಿರೂಪಿಸಿದರು. ರಾಖಿ ಕಾಡ್ಗೆ ವಂದಿಸಿದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೋಸೈಟಿ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಹಾಗೂ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜು ಸಹಯೋಗದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

## ವೈಭವದಿಂದ ರೇಣುಕಾಚಾರ್ಯ ಭಾವಚಿತ್ರದ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.13:ತಾಲೂಕಿನ ಖಟಕ್ ಚಿಂಚೋಳಿ ಗ್ರಾಮದಲ್ಲಿ ಜಗದ್ಗುರು ರೇಣುಕಾಚಾರ್ಯ ಅವರ ಜಯಂತಿ ಬುಧವಾರ ಶ್ರದ್ಧೆ, ಭಕ್ತಿಯಿಂದ ಆಚರಿಸಲಾಯಿತು.

ಗ್ರಾಮದ ವೀರಮಹಾಂತೇಶ್ವರ ಮಠದಲ್ಲಿ ಬೆಳಿಗ್ಗೆ 6 ಗಂಟೆಯಿಂದಲೇ ವಿಶೇಷ, ರುದ್ರಾಭಿಷೇಕ ಸೇರಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು.

ನಂತರ ಸಾಯಂಕಾಲ 5 ಗಂಟೆ ಸುಮಾರಿಗೆ ಗ್ರಾಮದ ಪ್ರಮುಖ ಬೀದಿ, ರಸ್ತೆಗಳಲ್ಲಿ ಭಾಜಾ ಭಜಂತ್ರಿಯೊಂದಿಗೆ ಜಗದ್ಗುರು ರೇಣುಕಾಚಾರ್ಯ ಭಾವಚಿತ್ರದ ಮೆರವಣಿಗೆ ವೈಭವದಿಂದ ನೆರವೇರಿತು.

ಈ ಸಂದರ್ಭದಲ್ಲಿ ವೀರಮಾಹಂತೇಶ್ವರ ಮಠದ ನೀಲಕಂಠ ಸ್ವಾಮೀಜಿ, ರೇವಣಸಿದಯ್ಯ ಶಾಸ್ತ್ರಿ, ಕಲ್ಯಾಣರಾವ ಉಂಬರಗೆ, ಸುಭಾಷ ಜವಾದೆ, ಆನಂದ ರಟಕಲೆ, ಶಿವಪ್ಪ ಅಜ್ಜ, ವಿಶ್ವನಾಥ ಚೀಲಶೆಟ್ಟಿ, ರೇವಣಪ್ಪ ಉಂಬರಗೆ, ಸಂಜುಕುಮಾರ ರಟಕಲೆ, ಓಂಕಾರ ಬಿರಾದಾರ್, ಸಂಗಮೇಶ ಖಂಡಾಳೆ, ರಮೇಶ ಕುರಖೇಳಗೆ, ನಾಗರಾಜ್ ಶಿಕೆನಪೂರೆ, ವೀರಶೆಟ್ಟಿ ಜಾಡರ್, ಉಮೇಶ್ ರಟಕಲೆ, ಅನಿಲ ಹೊನ್ನಾಳೆ ಸೇರಿದಂತೆ ಗ್ರಾಮದ ಗಣ್ಯರು, ಯುವಕರು ಹಾಜರಿದ್ದರು.

## ಸತತ ಪರಿಶ್ರಮವೇ, ಗೆಲುವಿನ ಹಾದಿ: ರಾಜಕುಮಾರ ಜೋಳದಾಪಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.13:ಯಾವುದೇ ಹುದ್ದೆ ಮುಖ್ಯವಲ್ಲ ಸೇವಾ ಮಾಡುವಂತಹ ಮನಸ್ಸು ಮುಖ್ಯ, ಅಂತಹ ಸೇವೆ ಮಾಡುವಂತಹ ಮನಸ್ಸುವುಳವರಿಗೆ ಹುದ್ದೆಗಳು ತಾನಾಗಿಯೇ ಹುಡುಕಿಕೊಂಡು ಬರುತ್ತವೆ ಎಂದು ಕರ್ನಾಟಕ ರಾಜ್ಯ ಸರಕಾರಿ ಪ್ರೌಢ ಶಾಲಾ ಮುಖ್ಯಗುರುಗಳ ಸಂಘದ ಅಧ್ಯಕ್ಷರಾದ ರಾಜಕುಮಾರ ಜೋಳದಾಪಕೆ ರವರು ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘ (ರಿ) ಬೆಂಗಳೂರು. ಶಾಖೆ ಭಾಲ್ಕಿಯ ಕಾರ್ಯದರ್ಶಿಯಾಗಿ ಆಯ್ಕೆಯಾಗಿರುವ ಸರಕಾರಿ ಪ್ರೌಢಶಾಲೆ ಖಟಕಚಿಂಚೋಳಿ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ದೇವಿದಾಸ ಮೇತ್ರೆರವರಿಗೆ ಸನ್ಮಾನ ಸಮಾರಂಭದಲ್ಲಿ ಸನ್ಮಾನಿಸಿ, ಪ್ರಸ್ತುತ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರ ಹಲವಾರು ಸಣ್ಣಪುಟ್ಟ ಸಮಸ್ಯೆಗಳಿದು ಮೇಲಾಧಿಕಾರಿಗಳ ಜೋತೆ ಹಾಗೂ ರಾಜ್ಯಕೀಯ ವ್ಯಕ್ತಿಗಳ ಜೋತೆ ಉತ್ತಮ ಸಮನ್ವಯತೆಯನ್ನು ಸಾಧಿಸಿ ಅವುಗಳನ್ನು ಬಗೆಹರಿಸಲು ಪ್ರಯತ್ನಿಸಬೇಕು, ಸಣ್ಣ ವಯಸ್ಸಿನಲ್ಲೆ ಇಂತಹ ದೊಡ್ಡ ಹುದ್ದೆ ಲಭಿಸಿದ್ದು, ಅವರ ಸತತ ಪರಿಶ್ರಮಕ್ಕೆ ಉತ್ತಮ ಸಾಕ್ಷಿಯಾಗಿದೆ, ಮೂರ್ತಿ ಚಿಕ್ಕದಾದರು ಕೀರ್ತಿ ದೊಡ್ಡದು ಎಂದುವುದಕೇ ಇವರೆ ಉದಾಹರಣೆಯಾಗಿದ್ದಾರೆ. ಎಂದು ನುಡಿದರು.

ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷರಾದ ಹಣಮಂತ ಕಾರಾಮುಂಗೆ ಹಾಗೂ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರಾಧ ಬಾಲಾಜಿ ಕಾಂಬ್ಳೆ ಮಾತನಾಡಿ ಕಾರ್ಯಕ್ರಮದಲ್ಲಿ ಖಟಕಚಿಂಚೋಳಿ ವಲಯ ಸಂಪನ್ಮೂಲ ವ್ಯಕ್ತಿಗಳಾದ ಚನ್ನಬಸಪ್ಪ ಹಾಗೂ ಸುಭಾಷ ಮುಲಗೆ ಹಾಗೂ ಮುಖ್ಯಗುರುಗಳಾದ ದತ್ತಾತ್ರಯ, ಸಿಬ್ಬಂಧಿ ವರ್ಗದವರಾದ ಚಾಂದಪಾಶಾ, ಅವಿನಾಶ ರಾಠೋಡ, ಸಂಗಮೇಶ್ವರ ಬಿರಾದಾರ, ಮಧುಮತಿ ಪಾಟಿಲ, ಜಯಲಕ್ಷ್ಮಿ ?? ಕರಕಾಳೆ, ಮಹಮದ ಮೋಯಿಜ್, ಮುಂತಾದವರು ಉಪಸ್ಥಿತರಿದ್ದರು.

ನಿರೂಪಣೆ ಕುಪೇಂದ್ರ ಜಗಶೇಟ್ಟೆ, ಹಾಗೂ ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಯನ್ನು ಶಿವಕುಮಾರ ಮಂಗಲಗೆ, ವಂದನಾರ್ಪಣೆಯನ್ನು ಅನಿಲ ರೆಡ್ಡಿ ನೇರವೆರಿಸಿದರು.

## ಶಿಕ್ಷಕ ತಿಲಕ ವಿರುದ್ಧ ಕ್ರಮಕ್ಕೆ ಎಸ್.ಡಿ.ಎಂ.ಸಿ.ದೂರು ಹಿನ್ನಲೆ ಗಡಿ ಸೋಮನಾಳ ಶಾಲೆಗೆ ಬಿಇಓ ಸಾವಳಗಿ ಭೇಟಿ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ತಾಲೂಕಿನಗಡಿ ಸೋಮನಾಳಗ್ರಾಮದಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಎ.ಜಿ.ತಿಲಕ ಎಂಬವರು ಶಾಲಾ ಮಕ್ಕಳೊಂದಿಗೆ ಅಸಭ್ಯ ವರ್ತನೆ ಹಾಗೂ ಶಿಕ್ಷಕರೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದು ಕೂಡಲೇ ಇವರ ಮೇಲೆ ಕಠಿಣ ಕ್ರಮ ವಹಿಸಬೇಕೆಂದು ಆಗ್ರಹಿಸಿ ಶಾಲೆಯ ಎಸ್.ಡಿ. ಎಂ.ಸಿ. ಸದಸ್ಯರು, ಮುಖ್ಯಗುರುಗಳು ಹಾಗೂ ಶಿಕ್ಷಕರು ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಬಿಇಓ ಬಿ.ಎಸ್.ಸಾವಳಗಿ ಅವರು ಗುರುವಾರ ಶಾಲೆಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಅವರು ಶಾಲೆಯ ಎಸ್ ಡಿ ಎಮ್ ಸಿ ಅಧ್ಯಕ್ಷರು, ಸದಸ್ಯರು, ಮುಖ್ಯ ಗುರುಗಳು ಶಿಕ್ಷಕರು ಹಾಗೂ ಗ್ರಾಮಸ್ಥರೊಂದಿಗೆ ಸಭೆ ನಡೆಸಿ ಶಿಕ್ಷಕ ಎ.ಜಿ.ತಿಲಕ ಅವರ ಮೇಲೆ ಇಲಾಖೆ ಕ್ರಮವಹಿಸಲುಮಾಡಿದಸಿಪಾರಸ್ಸಿನ ಕುರಿತು ಮಾಹಿತಿ ನೀಡಿದರು. ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಅವರು ಶಿಕ್ಷಕ ಎ. ಜಿ.ತಿಲಕ ಅವರು ಕಳೆದ ಕೆಲವು ವರ್ಷಗಳಿಂದ ಈ ರೀತಿಯ ದುರ್ವರ್ತನೆ ತೆ-ೂರುತ್ತಿದ್ದು ಈಗಾಗಲೇ ಒಂದು ಬಾರಿ ಅಮಾನತುಗೊಂಡು ನಾಲ್ಕು ಬಾರಿ ಬೇರೆ ಬೇರೆ ಕಡೆ ವರ್ಗಾವಣೆಗೊಂಡಿದ್ದಾರೆ ಆದರೂ ಸಹ ಅವರ ವರ್ತನೆಯಲ್ಲಿ ಯಾವುದೇ ಬದಲಾವಣೆ ಬರದೇ ಸದರಿ ಶಾಲೆಯಲ್ಲಿಯ ಮಕ್ಕಳೊಂದಿಗೆ ಇತ್ತೀಚಿಗೆ ಅಸಭ್ಯವಾಗಿ ವರ್ತಿಸಿದ್ದು ಹಾಗೂ ಇಲ್ಲಿಯ ಮುಖ್ಯ ಗುರುಗಳು ಶಿಕ್ಷಕರೊಂದಿಗೆ ಅನುಚಿತವಾಗಿ ವರ್ತಿಸಿದ್ದ ಹಿನ್ನೆಲೆಯಲ್ಲಿ ಈ ಕುರಿತು ಪತ್ರಿಕೆ ಹಾಗೂ ದೃಶ್ಯ ಮಾಧ್ಯಮಗಳಲ್ಲಿ ವರದಿ ಪ್ರಕಟವಾಗಿದ್ದು ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮ 2021ರ ನಿಯಮ 1,2 ಮತ್ತು 3 ನ್ನು ಮತ್ತು 33(ಎ) ಗಳನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಸಾಬೀತಾದ ಕಾರಣ ಸದರಿ ಶಿಕ್ಷಕನ ಮೇಲೆ ಶಿಸ್ತು ಕ್ರಮಕ್ಕೆ ನಾನು ಮಾನ್ಯ ಉಪನಿರ್ದೇಶಕರು(ಆಡಳಿತ) ಶಾಲಾ ಶಿಕ್ಷಣ ಇಲಾಖೆ ವಿಜಯಪುರ ಇವರಿಗೆ ಶಿಫಾರಸ್ಸು ಮಾಡಿದ್ದೇನೆ ಸದರಿ ಮೇಲಾಧಿಕಾರಿಗಳು ಆದಷ್ಟು ಬೇಗ ಈ ಶಿಕ್ಷಕನ ಮೇಲೆ ಕ್ರಮವಹಿಸುತ್ತಾರೆ ಎಂದ ಅವರು ಪಾಲಕರು ಯಾವ ಕಾರಣ-ಕ್ಕೂ ವಿಚಲಿತರಾಗಬಾರದು ಮಕ್ಕಳ ರಕ್ಷಣೆ ಇಲಾಖೆಯ ಹೊಣೆಯಾಗಿದೆ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಗುರುಗಳು ಹಾಗೂ ಶಿಕ್ಷಕರು ಯಥಾ ಪ್ರಕಾರ ತಮ್ಮ ಸೇವೆಯನ್ನು ಮುಂದುವರಿಸಬೇಕು ಯಾವುದೇ ರೀತಿಯ ಊಹಾಪೂವುಗಳಿಗೆ ಕಿವಿಗೊಡಬಾರದು ಎಂದರು. ಈ ಸಮಯದಲ್ಲಿ ಇಸಿಓ ಎಸ್. ಎಸ್. ಹಿರೇಮಠ, ಸಿಆರ್ ಪಿ ಎಸ್.ಎಂ. ಪಾಲ್ಕಿ, ಮುಖ್ಯ ಗುರುಗಳಾದ ಟಿ.ಎಸ್.ಲಮಾಣಿ, ಎಸ್ ಡಿ ಎಮ್ ಸಿ ಅಧ್ಯಕ್ಷ ಬೀರಪ್ಪ ಪೂಜಾರಿ, ಗ್ರಾಮದ ಗಣ್ಯರಾದ ಸುರೇಶ ಕಂಗಳ, ಸಂಗನಗೌಡಪಾಟೀಲ, ಮಹಿಬೂಬ ಅವಟಿ, ಚಂದ್ರಶೇಖರ ಧುಳೆಸರ, ಪರಶುರಾಮ ವಡಗೇರಿ, ಸುರೇಶ ಒಡವಡಗಿ, ಸಿದ್ದಣ್ಣ ಹರವಾಳ, ದೇವೇಂದ್ರ ಧೂಳೆಸರ, ಸಾಹೇಬಗೌಡ ನಾವದಗಿ, ಪ್ರವೀಣ ಬಿರಾದಾರ ಸಿದ್ದಣ್ಣ ಡೋಣೂರ ಇದ್ದರು.

## ಅಣಬಿ ಗ್ರಾಮ ಪಂಚಾಯತ : ವಿವಿಧ ಕಾಮಗಾರಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 13, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಸಾಮಾಗ್ರಿಗಳನ್ನು ಪೂರೈಕೆ ಮಾಡಲು ಇ-ಟೆಂಡರ್ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಅಣಬಿ ಗ್ರಾಮ ಪಂಚಾಯತಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಅವರು ತಿಳಿಸಿದ್ದಾರೆ.

ಶಹಾಪೂರ ತಾಲ್ಲೂಕಿನ ಅಣಬಿ ಗ್ರಾಮ ಪಂಚಾಯತಿನ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸರ್ಕಾರಿ ಪ್ರೌಢಶಾಲೆಗೆ ಕಾಂಪೌಂಡ್ ವಾಲ್ ನಿರ್ಮಾಣ, ಇ- ಟೆಂಡರ್ ಕರೆಯಲಾಗಿದೆ. ಕಾಮಗಾರಿಗಳು ಅಣಬಿ ಸರ್ಕಾರಿ ಪ್ರೌಢಶಾಲೆಗೆ ಕಾಂಪೌಂಡ್ ವಾಲ್ ನಿರ್ಮಾಣ 6,58,476,24 ರೂ.ಗಳ ಇದೆ. ಟೆಂಡರ್ ಪ್ರೋಸೆಸಿಂಗ್ 500 ರೂ.ಗಳ ಫೀ ಇದ್ದು, ಠೇವಣಿ ಮೊತ್ತ 16461 ರೂ.ಗಳ ಇದೆ. ಆನ್‌ಲೈನ್‌ನಲ್ಲಿ 2025ರ ಮಾರ್ಚ್ 20ರ ಒಳಗೆ ಅರ್ಜಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೈಕೋರ್ಟ ನಿರ್ದೇಶನದ ಮೇರೆಗೆ, ಗುರುನಾಥ ವಡ್ಡೆಯವರಿಗೆ ಪೊಲೀಸ್ ಸುರಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ : ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ ಕಲಬುರ್ಗಿ ಪೀಠದ ಆದೇಶದಲ್ಲಿನ ನಿರ್ದೇಶನದ ಮೇರೆಗೆ ತಮಗೆ ಪೊಲೀಸ್ ಸುರಕ್ಷೆ ನೀಡಲಾಗಿದೆ ಎಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ತಿಳಿಸಿದರು.




ಡಾ॥ಚನ್ನಬಸವ ಪಟ್ಟದೇವರು ವಾಚನಾಲಯ ಕಮಲನಗರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪೊಲೀಸ್ ಸುರಕ್ಷೆ ಕೋರಿ ದಿನಾಂಕ : 16-04-2022 ರಂದು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ ಕಲಬುರ್ಗಿ ಪೀಠದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. (ರಿಟ್ ಪಿಟೇಷನ್ ಸಂಖ್ಯೆ: 201242 /2022) ಸದರಿ ರಿಟ್ ಪಿಟೇಷನ್ ವಿಚಾರಣೆ ನಡೆದು ಹೈಕೋರ್ಟ ಕಲಬುರ್ಗಿ ಪೀಠದಿಂದ ದಿನಾಂಕ : 03-10-2023 ರಂದು ಆದೇಶ ಬಂದಿರುತ್ತದೆ.

ಸದರಿ ಆದೇಶದಲ್ಲಿ ಗುರುನಾಥ ವಡ್ಡೆಯವರು ಪೊಲೀಸ್ ಸುರ-ಕ್ಷೆಗಾಗಿ ಸಲ್ಲಿಸಿದ ಮನವಿಯನ್ನು ಪರಿಗಣಿಸುವಂತೆ ಪ್ರತಿವಾದಿಗಳಿಗೆ ನಿರ್ದೇಶನವಾಗಿರುತ್ತದೆ.

ಹೈಕೋರ್ಟ ನಿರ್ದೇಶನದ ನಂತರವೂ ಪೊಲೀಸ್ ಸುರ-ಕ್ಷೆ ಸಿಗದಿದ್ದಾಗ ಗುರುನಾಥ ವಡ್ಡೆಯವರು ದಿನಾಂಕ : 20-01-2024 ರಂದು ಹೈಕೋರ್ಟ ಕಲಬುರ್ಗಿ ಪೀಠದಲ್ಲಿ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿರುತ್ತಾರೆ. (ಸಿಸಿಸಿ ಸಂಖ್ಯೆ : 200018/2024) ಸದರಿ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಿಂದ ದಿನಾಂಕ : 24-02-2025 ರಂದು ಗುರುನಾಥ ವಡ್ಡೆಯವರಿಗೆ ಪೊಲೀಸ್ ಸುರಕ್ಷೆ ನೀಡಿದ ಬಗ್ಗೆ ಲಿಖಿತ ಮಾಹಿತಿ ನೀಡಿದರು.

ಸದರಿ ಪೊಲೀಸ್ ಇಲಾಖೆ ಮಾಹಿತಿಯಲ್ಲಿ ಗುರುನಾಥ ವಡ್ಡೆಯವರು ಹೋರಾಟ ಮಾಡುವ ಸಮಯದಲ್ಲಿ ಅಥವಾ ಅವರಿಗೆ ಪೊಲೀಸ್ ರಕ್ಷಣೆ ಅವಶ್ಯಕತೆ ಇದೆ ಅಂತ ವಡ್ಡೆಯವರು ಮಾಹಿತಿ ನೀಡಿದ್ದಲ್ಲಿ ಸೂಕ್ತವಾದ ಪೊಲೀಸ್ ರಕ್ಷಣೆ ನೀಡಲಾಗುವುದು ಎಂದು ತಿಳಿಸಿರುತ್ತಾರೆ.

ಖಾಯಂ ವಿಳಾಸವಾದ ಭವಾನಿ ಬೀಜಲಗಾಂವ ಗ್ರಾಮದ ನಿವಾಸ ಹಾಗೂ ಔರಾದ ಪಟ್ಟಣದಲ್ಲಿನ ಸದ್ಯ ವಾಸಿಸುತ್ತಿರುವ ಸಂತೋಷ ಕಾಲೋನಿಯ ಮನೆಗಳಿಗೆ ಇ-ಬೀಟ್ ಪಾಯಿಂಟ ಅಳವಡಿಸಲಾಗಿದ್ದು, ಬೀಟ್ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಹಗಲು ಮತ್ತು ರಾತ್ರಿ ಗಸ್ತು ಕರ್ತವ್ಯವನ್ನು ನಿರ್ವಹಿಸಿ ಗುರುನಾಥ ವಡ್ಡೆಯವರ ರಕ್ಷಣೆ ಮಾಡಲಾಗುತ್ತಿದೆ ಎಂದು ತಿಳಿಸಿರುತ್ತಾರೆ. ಈ ಬಗ್ಗೆ ದಿನಾಂಕ : 24-02-2025 ರಂದು ಹೈಕೋರ್ಟ ಕಲಬುರ್ಗಿ ಪೀಠದಿಂದ ಆದೇಶವಾಗಿರುತ್ತದೆ.

ಸದರಿ ಪ್ರಕರಣದಲ್ಲಿ ಪ್ರತಿವಾದಿಯಾಗಿ ಗೃಹ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರ ಬೆಂಗಳೂರು, ಗೃಹ ಕಾರ್ಯದರ್ಶಿಗಳು ಭಾರತ ಸರ್ಕಾರ ನವದೆಹಲಿ, ಕರ್ನಾಟಕ ಪೋಲಿಸ ಮಹಾನಿರ್ದೇಶಕರು ಬೆಂಗಳೂರು, ಪೋಲಿಸ ಮಹಾನಿರೀಕ್ಷಕರು ಕಲಬುರ್ಗಿ, ಜಿಲ್ಲಾಧಿಕಾರಿಗಳು ಬೀದರ, ಪೋಲಿಸ ಅಧಿಕ್ಷಕರು ಬೀದರ, ಪೋಲಿಸ ವೃತ್ತ ನಿರೀಕ್ಷಕರು ಔರಾದ(ಬಾ), ಪೋಲಿಸ ಉಪ ನಿರೀಕ್ಷಕರು ಔರಾದ(ಬಾ), ಮುಖ್ಯಕಾರ್ಯದರ್ಶಿಗಳು ಕರ್ನಾಟಕಸರ್ಕಾರವಿಧಾನಸೌಧಾ ಬೆಂಗಳೂರು ಇವರಿದ್ದರು.

ಈ ಸಂಧರ್ಭದಲ್ಲಿ ಗೌರವಾನಿತ್ವ ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯ ಕಲಬುರ್ಗಿ ಪೀಠಕ್ಕೆ ಸಮಾಜ ಸೇವಕ ಗುರುನಾಥವಡ್ಡೆಯವರು ಅಭಿನಂದನೆಗಳು ಸಲ್ಲಿಸಿದರು. ಸದರಿ ಪ್ರಕರಣದಲ್ಲಿ ಅರ್ಜಿದಾರರಾದ ಗುರುನಾಥವಡ್ಡೆಯವರಪರವಾಗಿ ನ್ಯಾಯವಾದಿ ಜೈಯರಾಜ ಕೆ ಬುಕ್ಕಾ ರವರು ವಾದ ಮಂಡಿಸಿದರು.

## ಜಾಗತಿಕಸಂವಹನದಲ್ಲಿಉಪಗ್ರಹ ವ್ಯವಸ್ಥೆ – ಕಾರ್ಯಗಾರ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆಂತರಿಕ ಗುಣಮಟ್ಟ ಭರವಸಾ ಕೋಶ ಹಾಗೂ ಭೌತಶಾಸ್ತ್ರ ವಿಭಾಗದ ಸಹಯೋಗದಲ್ಲಿ ಗುರುವಾರ ಜಾಗತಿಕ ಸಂವಹನದಲ್ಲಿ ಉಪಗ್ರಹ ವ್ಯವಸ್ಥೆಯ ಭೌತಶಾಸ್ತ್ರದ ತತ್ವಗಳು ಕುರಿತು ವಿದ್ಯಾರ್ಥಿಗಳಿಗೆ ಕಾರ್ಯಾಗಾರ ನಡೆಯಿತು.

ಗದಗಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ಅಧ್ಯಾಪಕ ಡಾ.ರವಿ.ಜೆ.ಡಿ. ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಉಪಯುಕ್ತ ಮಾಹಿತಿ ನೀಡಿದರು. ಐಕ್ಯುಎಸಿ ಸಂಯೋಜಕರು ಹಾಗೂ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಕಾರ್ಯಕ್ರಮದ ರೂಪುರೇಷೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಾಗಾರ ಸಮಾರಂಭದ ಅಧ್ಯಕ್ಷತೆಯನ್ನು ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ವೈ.ಬಿ.ಅಂಗಡಿ ವಹಿಸಿದ್ದರು. ಭೌತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಸಿದ್ಧಲಿಂಗೇಶ ಹಮ್ಮಿಗಿ ಕಾರ್ಯಕ್ರಮ ಸಂಯೋಜಿಸಿ, ಅತಿಥಿಗಳನ್ನು ಪರಿಚಯಿಸಿದರು. ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ರಶ್ಮಿ. ಜಿ, ಮಾತನಾಡಿದರು. ಬೋಧಕರಾದ ರವೀಂದ್ರ ಬಗಾಡೆ, ಪ್ರಭಾಕರ ಸಾಲಿಮಠ, ಬಸಮ್ಮ ಮೇಟಿ, ಗಿರಿಜಾ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಮೈಕ್ರೋ ಫೈನಾನ್ಸ್ ಸಂಸ್ಥೆ ಅಥವಾ ಸಾಲ ಮೀಡಿಕೆ ಏಜೆನ್ಸಿ, ಫೈನಾನ್ಸ್ ಸಂಸ್ಥೆ, ಲೇವಾದೇವಿಗಾರರ ನೊಂದಣಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 13-ಯಾದಗಿರಿ ಜಿಲ್ಲೆಯ ಮೈಕ್ರೋ ಫೈನಾನ್ಸ್ ಸಂಸ್ಥೆ ಅಥವಾ ಸಾಲ ಮೀಡಿಕೆ ಏಜೆನ್ಸಿ, ಫೈನಾನ್ಸ್ ಸಂಸ್ಥೆ, ಲೇವಾದೇವಿಗಾರರ ನೊಂದಣಿಗೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪನಿಬಂಧಕರು ಪವನಕುಮಾರ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ, ಫೈನಾನ್ಸ್ ಸಂಸ್ಥೆ, ಲೇವಾದೇವಿದಾರರು, ತಮ್ಮ ಕಾರ್ಯನಿರ್ವಹಿಸುತ್ತಿರುವ, ಕಾರ್ಯನಿರ್ವಹಿಸಲು ಉದ್ದೇಶಿಸಿರುವ ಗ್ರಾಮಗಳು, ಪಟ್ಟಣಗಳು, ವಿಧಿಸಿರುವ, ವಿಧಿಸಲು ಉದ್ದೇಶಿಸಿರುವ ಬಡ್ಡಿಯ ದರ, ಯುಕ್ತ ಜಾಗರುಕ ನಿರ್ವಾಹಣಾ ವ್ಯವಸ್ಥೆ ಮತ್ತು ವಸೂಲಾತಿಯನ್ನು ಜಾರಿಗೊಳಿಸುವ ವ್ಯವಸ್ಥೆ, ಹಾಗೂ ಸಾಲ ನೀಡಿಕೆ ಅಥವಾ ನೀಡಲಾದ ಹಣದ ವಸೂಲಾತಿ ಚಟುವಟುಕೆಗಳನ್ನು ನಿರ್ವಹಿಸಲು ಅಧಿಕೃತಗೊಳಿಸಲಾದ ವ್ಯಕ್ತಿಗಳ ಪಟ್ಟಿ ಹಾಗೂ ಸಾಲಗಾರನ ಹೆಸರು ಮತ್ತು ವಿಳಾಸ, ಸಾಲಗಾರನಿಗೆ ನೀಡಲಾದ ಒಟ್ಟು ಅಸಲು ಮೊತ್ತ ಸಾಲಗಾರನಿಂದ ಈಗಾಗಲೇ ವಸೂಲು ಮಾಡಲಾದ ಮೊತ್ತ, ಸಾಲಗಾರನಿಂದ ಇನ್ನು ವಸೂಲು ಮಾಡಬೇಕಾದ ಬಾಕಿ ಮೊತ್ತದ ವಿವರದೊಂದಿಗೆ ಲಿಖಿತ ಮುಚ್ಚಳಿಕೆಯನ್ನು ಅದರಲ್ಲಿ ನಿರ್ದಿಷ್ಟಪಡಿಸಿ ಜಿಲ್ಲೆಯ ಸಹಕರ ಸಂಘಗಳ ಉಪ ನಿಬಂಧಕರ ಅವರ ಮುಖಾಂತರ ಜಿಲ್ಲೆಯ ಮಾನ್ಯ ಜಿಲ್ಲಾಧಿಕಾರಿ ಅವರ ಮುಂದೆ ನೊಂದಣಿಗಾಗಿ ಅರ್ಜಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 13-ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಬಳಿಚಕ್ರ ಗ್ರಾಮ ಪಂಚಾಯತನಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿಯಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಆಸಕ್ತಿಯುಳ್ಳ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್ ಅವರು ತಿಳಿಸಿದ್ದಾರೆ.

ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಸಲು ಬಳಿಚಕ್ರ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅರ್ಹ ವಿಕಲಚೇತನರಿಂದ ಅರ್ಜಿ ಆಹ್ವಾನಿಸಿದೆ. ಅರ್ಜಿ ಪತ್ರದೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು ಎಸ್.ಎಸ್. ಎಲ್.ಸಿ ಅಂಕಪಟ್ಟಿ ಲಗತ್ತಿಸಬೇಕು, ಶಾಲಾ ವರ್ಗಾವಣೆ ಪ್ರಮಾಣ ಪತ್ರ, ವಿಕಲಚೇತನ ಗುರುತಿನ ಪ್ರಮಾಣಪತ್ರ, ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 2 ಭಾವಚಿತ್ರ ಲಗತ್ತಿಸಬೇಕು, 2025ರ ಮಾರ್ಚ್ 20 ರಂದು ಸಂಜೆ 5.30 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂ-ಖ್ಯೆ ಬಿ1, ಬಿ2 ನೆಲಮಹಡಿ ಜಿಲ್ಲಾಡಳಿತ ಭವನ ಯಾದಗಿರಿ ಆಸಕ್ತರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ ಅನುಷ್ಠಾನ ಕಡ್ಡಾಯ : ಶೇಖರಗೌಡ ರಾಮತಾಳ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಪರಿಷ್ಕರಣೆ-2023ನ್ನು ಪ್ರತಿಯೊಂದು ಶೈಕ್ಷಣಿಕ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ ರಾಮತ್ನಾಳ್ ಹೇಳಿದರು.

ಅವರು ಗುರುವಾರ ಕೊಪ್ಪಳ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ, 'ಕಡ್ಡಾಯ ಮತ್ತು ಉಚಿತ ಶಿಕ್ಷಣ ಹಕ್ಕು ಕಾಯ್ದೆ-2009" ಅನುಷ್ಠಾನ ಕುರಿತು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಹಾಗೂ ನುರಿತ ಶಿಕ್ಷಕರ ನೇಮಕವಾದಲ್ಲಿ ಮಾತ್ರ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆಯ ಆಶಯ ಈಡೇರಲಿದೆ. ತನ್ಮೂಲಕ ಸರ್ಕಾರಿ ಶಾಲೆಗಳ ಸಬಲೀಕರಣ ಸಾಧ್ಯವಾಗಲಿದೆ. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009ರ ಸೆಕ್ಷನ್ 31ರಡಿಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಈ ಕಾಯ್ದೆಯ ಮೇಲ್ವಿಚಾರಣೆಯ ಅಧಿಕಾರ ಮತ್ತು ಜವಾಬ್ದಾರಿಯನ್ನು ಹೊಂದಿದೆ. ಈ ಆರ್ಥಿಕ ಸಾಲಿನಲ್ಲಿ ಆಯೋಗವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯು ಈ ಕಾಯ್ದೆ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಿದೆ. ಈ ಸಭೆಗಳಲ್ಲಿ ಕಂಡುಬಂದ ಅಂಶಗಳ ಬಗ್ಗೆ ಅಧ್ಯಯನ ಮಾಡಿ, ಕಾಯ್ದೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅವಶ್ಯವಿರುವ ಅಗತ್ಯ ಸಲಹೆಗಳನ್ನು ಆಯೋಗವು ಸರಕಾರಕ್ಕೆ ನೀಡಲು ಉದ್ದೇಶಿಸಿದೆ ಎಂದರು.

ಖಾಸಗಿ ಶಾಲೆಗಳು ತಮ್ಮ ಶಾಲೆಯ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಒಂಭತ್ತನೇಯ ತರಗತಿಯ ನಂತರ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ 10ನೇ ತರಗತಿಗೆ ದಾಖಲಿಸಿಕೊಳ್ಳದೇ ವರ್ಗಾವಣೆ ಪ್ರಮಾಣ ಪತ್ರವನ್ನು ನೀಡುತ್ತಿರುವ ಪ್ರಕರಣಗಳು ಕಂಡುಬರುತ್ತಿದೆ. ಕೆಲವು ವಿದ್ಯಾರ್ಥಿಗಳಿಗೆ ವಿವಿಧ ಕಾರಣಗಳಿಂದ ವರ್ಗಾವಣೆ ಪತ್ರ ನೀಡದೇ ಸತಾಯಿಸುತ್ತಿರುವ ಬಗ್ಗೆಯೂ ಸಾಕಷ್ಟು ದೂರುಗಳು ಆಯೋಗಕ್ಕೆ ಬಂದಿವೆ. ಆದ್ದ-ರಿಂದ ಅನದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರಕೊಠಡಿಯಲ್ಲಿ, ಆರ್.ಟಿ.ಐ ಸೆಲ್‌ನ ಸಂಪೂರ್ಣ ಮಾಹಿತಿಯುಳ್ಳ ಫಲಕಗಳನ್ನು ಪಾಲಕರಿಗೆ ಮತ್ತು ಮಕ್ಕಳಿಗೆ ಕಾಣುವಂತೆ ಪ್ರದರ್ಶಿಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಪರಿಷ್ಕರಣೆ-2023ರ ಅಡಿ ಶೈಕ್ಷಣಿಕ ಸಂಸ್ಥೆಗಳಲ್ಲಿ "ಮಕ್ಕಳ ರಕ್ಷಣಾ ಸಮಿತಿ" 'ಪೋಷಕರ ಸಮಿತಿಗಳನ್ನು' ರಚಿಸಿ ಸಭೆಗಳನ್ನು ನಿಯಮಿತವಾಗಿ ಆಯೋಜಿಸಬೇಕು. ಮಕ್ಕಳಿಗೆ ಲಭ್ಯವಾಗುವ ಸ್ಥಳಗಳಲ್ಲಿ 'ಸಲಹಾ ಪೆಟ್ಟಿಗೆ'ಯನ್ನು ಅಳವಡಿಸಬೇಕು. ಮಕ್ಕಳು ತುರ್ತು ಸಂದರ್ಭದಲ್ಲಿ ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆಗಳನ್ನು, ಮಕ್ಕಳ ಸಹಾಯವಾಣಿ-1098/112ನ್ನು ನಿಗದಿತ ನಮೂನೆಯಲ್ಲಿ ಬರೆಯಿಸಬೇಕು. ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ 'ಪೊಲೀಸ್ ಪರಿಶೀಲನಾ' ವರದಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಂದ 'ಬದ್ಧತಾ ಪತ್ರ'ವನ್ನು ಹಾಗೂ 'ಮಕ್ಕಳಿಂದ ಬದ್ಧತಾ ಪತ್ರವನ್ನು' ಪಡೆದುಕೊಳ್ಳಬೇಕು. ಶಾಲಾ ವಾಹನಗಳು ನಿಗದಿತ ಬಣ್ಣ ಹೊಂದಿರಬೇಕು. ಈ ಶಾಲಾ ವಾಹನಗಳಲ್ಲಿ ಅಗ್ನಿ ನಂದಕ, ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಜಿ.ಪಿ.ಆರ್.ಎಸ್ ವ್ಯವಸ್ಥೆ, ಸೀಟ್ ಬೆಲ್ಟಳನ್ನು ಹೊಂದಿರಬೇಕು. ನಿಗದಿಪಡಿಸಿದ ಪ್ರಮಾಣದಷ್ಟೇ ಮಕ್ಕಳನ್ನು ಕರೆತರುವುದು. ಶಾಲಾ ವಾಹನಗಳಲ್ಲಿ ಕಡ್ಡಾಯವಾಗಿ ಕನಿಷ್ಠ ಒಬ್ಬ ಮಹಿಳಾ ಸಿಬ್ಬಂದಿ ಅಥವಾ ಪರಿಚಾರಕರು ಇರಬೇಕು. ಮಕ್ಕಳ ರಕ್ಷಣೆಗೆ ಆಯೋಗವು ಬದ್ಧವಾಗಿದ್ದು, ಯಾವುದೇ ಚಿಕ್ಕ ಲೋಪವನ್ನು ಆಯೋಗವು ಸಹಿಸುವುದಿಲ್ಲ ಎಂದು ಸೂಚನೆ ನೀಡಿದರು.

ಭಾರತ ಸಂವಿಧಾನವು ಮಕ್ಕಳಿಗೆ ಶಿಕ್ಷಣವನ್ನು ಮೂಲಭೂತ ಹಕ್ಕು ಎಂದು ನೀಡಿದೆ. ಆದ್ದ-ರಿಂದ 'ಯಾವುದೇ ಮಗುವು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕಾಗಿರುವುದು ಸರಕಾರದ ಆದ್ಯ ಕರ್ತವ್ಯವಾಗಿದೆ'. ಶಾಲೆಯಿಂದ ಹೊರಗುಳಿದ ಮಕ್ಕಳು ಇದ್ದಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ರಚನೆಯಾಗಿರುವ 'ಶಿಕ್ಷಣ ಕಾರ್ಯಪಡೆ' 'ಮಕ್ಕಳ ರಕ್ಷಣಾ ಸಮಿತಿ'ಗಳಿಂದ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಕರೆತರಬೇಕು. ಅದಕ್ಕಾಗಿ ಎರಡು ಸಮಿತಿಗಳನ್ನು ಸಕ್ರಿಯವಾಗಿ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು. ಜಿಲ್ಲೆಯಲ್ಲಿ ಅನಧಿಕೃತ ಕೋಚಿಂಗ್ ಸೆಂಟರ್ ಹಾವಳಿಯು ಅತ್ಯಧಿಕವಾಗಿದೆ. ಕೆಲವು ಕೋಚಿಂಗ್ ಸೆಂಟರ್‌ಗಳನ್ನು ಭೇಟಿ ನೀಡಿದ್ದು, ಅಲ್ಲಿನ ಮಕ್ಕಳಿಗೆ ನೀಡಿರುವ ಸೌಲಭ್ಯಗಳನ್ನು ತೀರಾ ನಿಕೃಷ್ಟವಾಗಿವೆ. ಸ್ವಚ್ಛವಾದ ಪರಿಸರವಿಲ್ಲ, ಮಲಗುವ ಕೋಣೆಗಳು ಇಲ್ಲ, ಯಾವುದೇ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡಿರುವುದಿಲ್ಲ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಕೊಂಚಿಂಗ್ ಸೆಂಟರ್, ಅನಧಿಕೃತ ವಸತಿ ಶಾಲೆಗಳನ್ನು ಭೇಟಿ ನೀಡಿ, ಪರಿಶೀಲಿಸಿ, ಲೋಪವಿರುವ ಸಂಸ್ಥೆಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಂಡು ವರದಿಯನ್ನು ಮಕ್ಕಳ ರಕ್ಷಣಾ ಆಯೋಗಕ್ಕೆ ನೀಡಬೇಕು. ತಪ್ಪಿದಲ್ಲಿ ಆಯೋಗವು ಸೂ-ಮೊಟೋ ಪ್ರಕರಣದಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಳ್ಳುತ್ತದೆಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರ್ ಗೌಡ ಜಿ ರಾಮತ್ನಾಳ್ ಅವರು ಎಚ್ಚರಿಕೆ ನೀಡಿದರು.

ಈ ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಶ್ರೀಶೈಲ ಬಿರಾದಾರ ಸೇರಿದಂತೆ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಲಯ ಸಂಪನ್ಮೂಲ ಸಂಯೋಜ-ಕರು, ಶಿಕ್ಷಣ ಸಂಯೋಜಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಶಿಕ್ಷಣ ಪಡೆಯುವುದು ಪ್ರತಿಯೊಬ್ಬ ಮಗುವಿನ ಹಕ್ಕು; ನ್ಯಾ.ರಫೀಕ್ ಅಹ್ಮದ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.13 – ಮಕ್ಕಳು ಪ್ರತಿನಿತ್ಯ ಶಾಲೆಗೆ ಬಂದು ಜ್ಞಾನಾರ್ಜನೆ ಪಡೆಯಬೇಕು. ಶಿಕ್ಷಣ ಪಡೆಯುವುದು ಪ್ರತಿಯೊಬ್ಬ ಮಗುವಿನ ಹಕ್ಕಾಗಿದೆ ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತಾಲೂಕು ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ರಫೀಕ್ ಅಹ್ಮದ್ ಅವರು ಹೇಳಿದರು.

ಮಾ.12ರ ಬುಧವಾರದಂದು ಜಿಲ್ಲೆಯ ದೇವದುರ್ಗ ಪಟ್ಟಣದ ಗೌತಮ ಓಣಿಯ ಸರಕಾರಿ ಹಿರಿಯ ಪ್ರಾಥಮಿಕ (ಬಾಪೂಜಿ) ಶಾಲೆಯ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ, ಕಾರ್ಮಿಕ ಇಲಾಖೆ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಠ ವರ್ಗಗಳ ಕಲ್ಯಾಣ ಇಲಾಖೆ ದೇವದುರ್ಗ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆ, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಉಪಯೋಜನೆಯಡಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮವಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗುತ್ತದೆ. ಕಡ್ಡಾಯವಾಗಿ ಶಿಕ್ಷಣ ಪಡೆಯುವದು ಪ್ರತಿಯೊಬ್ಬ ಮಗುವಿನ ಹಕ್ಕಾಗಿರುತ್ತದೆ. ಯಾವುದೇ ಕಾರಣಕ್ಕೂ ಮಕ್ಕಳನ್ನು ಶಾಲೆ ಬಿಡಿಸಿ ಕೆಲಸಕ್ಕೆ ಕಳುಹಿಸುವುದು ಹಾಗೂ ಕೆಲಸಕ್ಕೆ ನೇಮಿಸಿಕೊಳ್ಳದಂತೆ ಪಾಲಕರಿಗೆ ಮತ್ತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕೆಂದರು.


ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥರೆಡ್ಡಿ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986 ಮತ್ತು ತಿದ್ದುಪಡಿ ಕಾಯ್ದೆ-2016ರಡಿ ಪ್ರಕರಣ ದಾಖಲಿಸಲಾಗುವುದೆಂದು ತಿಳಿಸಿ, ದುಡಿಯುವ ಮಕ್ಕಳು ಎಲ್ಲಿಯಾದರು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ ಸಂ-ಖ್ಯೆ 1098/112ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ದೇವದುರ್ಗ ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ, ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕರಾದ ಡಿ.ರಾಜಕುಮಾರ, ತಾಲೂಕು ನ್ಯಾಯವಾದಿಗಳ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ರಾಘವೇಂದ್ರ ಕೋಲ್ಕಾರ್, ಶಿಕ್ಷಣ ಸಂಯೋಜಕರಾದ ಮಹಾದೇವಪ್ಪ.ಕೆ, ಪ್ರತಿಭಾ ಸಾಸ್ವಿಗೇರಾ, ಪೆನಾಲ್ ವಕೀಲರು, ಮಹಾದೇವ, ಸಿ.ಆರ್.ಪಿಗಳಾದ ತಿಮ್ಮಪ್ಪ ಬಲ್ಲಿದವ, ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಹುಸೇನ್ ನಾಯ್ಕ ಸೇರಿದಂತೆ ಇತರರು ಇದ್ದರು.

# ಮಾ. 18 ರಂದು ಶಹಪುರ ಗ್ರಾಮದಲ್ಲಿ ದರಗಜ್ಜನ ಉರುಸ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜಿಲ್ಲೆಯ ಬೇವಿನಹಳ್ಳಿ ಗ್ರಾಮ ಪಂಚಾಯಿತಿಯ ಶಹಪುರ ಗ್ರಾಮದಲ್ಲಿ ಕೋಮು ಸೌಹಾರ್ದತೆಯ ಪ್ರತೀಕವಾದ ಶ್ರೀ ದರಗಜ್ಜನ ಉರುಸು ಇದೇ ಮಾ.18ರಿಂದ ಜರುಗಲಿದೆ.

ಶತಮಾನಗಳ ಇತಿಹಾಸ ಹೊಂದಿರುವ ದರಗದ ತಾತನಿಗೆ ಪ್ರತಿವರ್ಷದಂತೆ ಈ ಬಾರಿಯೂ ಇದೇ ಮಾ.18 ರಂದು ಸಂಜೆ 8 ಗಂಟೆಗೆ ಗಂಧ ಹೊರಡುವ ಕಾರ್ಯಕ್ರಮ ಜರುಗಲಿದೆ. ಮಾ.19 ರಂದು ಬುಧವಾರ ಉರುಸು ಆಚರಿಸಲಾಗುತ್ತದೆ. ಮೊದಲ ದಿನ ಗಂಧ ಹೊರಟ ಬಳಿಕ ರಾತ್ರಿ 10–30 ಗಂಟೆಯಿಂದ 'ಸಿಡಿದೆದ್ದ ಸಹೋದರರು' ಅರ್ಥಾತ್ 'ರಕ್ತ ಕಣ್ಣೀರು' ಎನ್ನುವ ಸುಂದರ ಸಾಮಾಜಿಕ ನಾಟಕ ಪ್ರದರ್ಶನವಾಗಲಿದೆ. ಉರುಸ್ ದಿನದಂದು ಸುತ್ತಮುತ್ತಲ ಹಲವಾರು ಗ್ರಾಮಗಳಿಂದ ಆಗಮಿಸುವ ಕಲಾವಿದರು ರಾತ್ರಿಯಿಡೀ ಖವ್ವಾಲಿ ಪದಗಳನ್ನು ಹಾಡಲಿದ್ದಾರೆ. ಪ್ರಾತಃಕಾಲದ ವೇಳೆ ನೀರಿನಲ್ಲಿ ದೀಪ ಉರಿಯುವ ಪವಾಡ ನಡೆಯಲಿದೆ. ಅಂದು ಮಧ್ಯಾಹ್ನ ಉರುಸ್ ಗೆ ಆಗಮಿಸುವ



ಸಕಲ ಸದ್ಭಕ್ತರಿಗೆ ಶಹಪುರ ಗ್ರಾಮಸ್ಥರಿಂದ ಅನ್ನದಾಸೋಹ ಕಾರ್ಯಕ್ರಮ ನೆರವೇರಲಿದೆ.

ದರಗಜ್ಜನ ಐತಿಹ್ಯ:

ಬ್ರಿಟೀಷರ ಕಾಲದಲ್ಲಿ ಗ್ರಾಮದಲ್ಲಿದ್ದರೆನ್ನಲಾದ ಸಂತರೊಬ್ಬರು ಸಿಲ್ವರ್ ತಾತನ ಹೆಸರಿನಲ್ಲಿ ಜನರಿಗೆ ಆಯುರ್ವೇದ, ಆಧ್ಯಾತ್ಮ, ಸೌಹಾರ್ದತೆ ಮತ್ತು ಪಾರಮಾರ್ಥದೊಂದಿಗೆ ಎಲ್ಲರ ಗೌರವಕ್ಕೆ ಪಾತ್ರರಾಗಿದ್ದರು. ಮನುಷ್ಯಸಹಜವಾದ ಗುಣಗಳನ್ನು ಹೊಂದಿದ್ದರೂ ಜನರಲ್ಲಿ ಭಕ್ತಿ ಮತ್ತು ಮಮತೆಗಳನ್ನು ಮೂಡಿಸುತ್ತಿದ್ದರು. ಸುದೀರ್ಘ ಜೀವನ ನಡೆಸಿದ್ದ ಅವರ ದೇಹ ತ್ಯಾಗವಾದಾಗ ಗ್ರಾಮಸ್ಥರು ಭಕ್ತಿಯಿಂದ ಅವರನ್ನು ಗ್ರಾಮದ ಈಶಾನ್ಯ ಮೂಲೆಯಲ್ಲಿ ಸಮಾಧಿ ಮಾಡಿದ್ದರು. ಅವರು ಇಹಲೋಕ ತ್ಯಜಿಸಿದ ದಿನದಂದೇ ಉರುಸು ಆಚರಿಸಿಕೊಂಡು ಬರಲಾಗುತ್ತಿದೆ.

ಗ್ರಾಮದಲ್ಲಿ ಈ ಹಿಂದೆ ಹುಸೇನ್ ಸಾಬ್ ಎನ್ನುವ ವೃದ್ಧರೊಬ್ಬರು 1980–90ರ ದಶಕದವರೆಗೂ ಇದೇ ಹಾದಿಯಲ್ಲಿ ಸಾಗಿ ಗ್ರಾಮದಲ್ಲಿ ಧಾರ್ಮಿಕ ಭಾವನೆಗಳನ್ನು ಮೂಡಿಸುತ್ತಿದ್ದರು. ಅವರ ಬಳಿಕ ಕಾಶೀಂ ಸಾಬ್ ಅವರು ದರಗಾದ ಆಚರಣೆಗಳನ್ನು ನಡೆಸಿಕೊಂಡು ಬರುತ್ತಿದ್ದರು. ಅವರ ನಿಧನದ ಬಳಿಕ ಅವರ ಪತ್ನಿ ಹಾಗೂ ಪುತ್ರರಾದ ಅಕಬರ ಅಲಿ ಅವರು ಉರುಸ್ ಧಾರ್ಮಿಕ ಆಚರಣೆಗಳನ್ನು ಅನುಸರಿಸಿಕೊಂಡು ಬರುತ್ತಿದ್ದಾರೆ.

ಗ್ರಾಮದಲ್ಲಿ ದರಗದ ಅಜ್ಜನ ಉರುಸ್ ಆಚರಣೆ ವೇಳೆ ಕ್ರೀಡೆ, ಕಲೆ, ಸಂಸ್ಕೃತಿ ಮತ್ತು ಪರಂಪರೆಗಳು ಸಂಭ್ರಮದಿಂದ ಜರುಗುತ್ತಿದ್ದು ಸಾವಿರಾರು ಸದ್ಭಕ್ತರು ಪಾಲ್ಗೊಳ್ಳುತ್ತಾರೆ. ಎಂದಿನಂತೆ ಈ ಬಾರಿಯೂ ಆಗಮಿಸಿ ಸದ್ಭಕ್ತರು ಅಜ್ಜನ ಕೃಪೆಗೆ ಪಾತ್ರರಾಗುವಂತೆ ಗ್ರಾಮದ ಯುವ ಧುರೀಣ–ರಾದ ಮಲ್ಲಿಕಾರ್ಜುನ ಕುರಿ, ನಿಂಗಪ್ಪ ನಾಗಲಾಪುರ, ವೀರಣ್ಣ ಕೋಮಲಾಪುರ, ನಿಂಗಜ್ಜ ಚೌಧರಿ ಮತ್ತು ಮಂಜುನಾಥ ರಾಟಿ ಇನ್ನಿತರರು ಕೋರಿದ್ದಾರೆ.

# ಮಹಿಳೆಯರು ಎಲ್ಲಾ ರಂಗಗಳಲ್ಲಿ ಅಭಿವೃದ್ಧಿ ಹೊಂದಬೇಕು: ಪಲ್ಲವಿ.ಜಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.13 ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ, ಔದ್ಯೋಗಿಕವಾಗಿ ಅವಕಾಶಗಳನ್ನು ಸೃಷ್ಟಿಸಿಕೊಂಡು ಮಹಿಳೆಯರು ಅಭಿವೃದ್ಧಿ ಹೊಂದಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಜೀವ ವಿಜ್ಞಾನ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಮಹಿಳೆಯರನ್ನು ಪೂಜನೀಯ ಸ್ಥಾನದಲ್ಲಿರಿಸಿದ್ದರೂ, ಅವರನ್ನು ಹತ್ತಿಕ್ಕುವುದು ಅನಾದಿ ಕಾಲದಿಂದಲೂ ನಡೆಯುತ್ತಿದೆ. ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಪುರುಷ ಪ್ರಧಾನ ದೇಶದಲ್ಲಿ ಮಹಿಳೆಯರು ಸರ್ಕಾರದ ಯೋಜನೆಗಳನ್ನು ಬಳಸಿಕೊಂಡು ಅಭಿವೃದ್ಧಿ ಹೊಂದಬೇಕು ಎಂದು ತಿಳಿಸಿದರು.

ಶಿಕ್ಷಣ ವಂಚಿತ ಪೋಷಕರ ಮಕ್ಕಳ ಶಿಕ್ಷಣಕ್ಕಾಗಿ ಶೇ.10 ಮೀಸಲಾತಿ ಸರ್ಕಾರ ಕಲ್ಪಿಸಿದೆ. ಇದರ ಸದುಪಯೋಗವಾಗಬೇಕು. ಮಹಿಳೆಯರು ಪ್ರಶ್ನಿಸುವ ಮನೋಭಾವ ಬೆಳಸಿಕೊಂಡಲ್ಲಿ ವೈಚಾರಿಕವಾಗಿ ಮುಂದೆ ಬರುತ್ತಾರೆ ಎಂದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್.ರುದ್ರೇಶ್ ಅವರು ಮಾತನಾಡಿ, ಸಮಾಜದಲ್ಲಿ ಮಹಿಳೆಯರು ನಾಲ್ಕು ಗೋಡೆಗೆ ಸೀಮಿತವಾಗದೇ ಸಮಾಜಮುಖಿಯಾಗಿ ಬೆಳೆಯಬೇಕು. ಸಾವಿತ್ರಿಬಾಯಿ ಫುಲೆ, ಕಿತ್ತೂರು ರಾಣಿ ಚನ್ನಮ್ಮ, ಒನಕೆ ಓಬವ್ವ, ಮದರ್ ಥೆರೇಸಾ, ಅಕ್ಕಮಹಾದೇವಿಯವರ ಚಿಂತನೆಗಳು ಇಂದಿನ ಮಹಿಳೆಯರಿಗೆ ಅದರ್ಶವಾಗಬೇಕು ಎಂದು ಅಭಿಪ್ರಾಯಪಟ್ಟರು.

ಸಮಾಜದ ವಿಜ್ಞಾನ ನಿಕಾಯದ ಡೀನರಾದ ಗೌರಿ ಮಾಣಿಕ್ ಮಾನಸ ಅವರು ಮಾತನಾಡಿ, ಮಹಿಳೆಯರಿಗೆ ಆತ್ಮವಿಶ್ವಾಸ ತುಂಬುವ ಕೆಲಸ ಸಮಾಜದಿಂದ ಆಗಬೇಕಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಮುನಿರಾಜು ಅವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಕ್ರಾಂತಿಗಾಗಿ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಮಹಿಳಾ ದಿನಾಚರಣೆ–ಯ ಪ್ರಯುಕ್ತ ಇತ್ತೀಚೆಗೆ ಆಯೋಜಿಸಿದ್ದ ವಿವಿಧ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಪದಕ, ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ನಂತರದಲ್ಲಿ ಜನಪದ ಸಂಗೀತ, ಹಾಸ್ಯ ಕಾರ್ಯಕ್ರಮ ಜರುಗಿದವು. ಡಾ.ಹೆಚ್.ತಿಪ್ಪೇಸ್ವಾಮಿ ನಿರೂಪಿಸಿದರು.

ಈ ಸಂದರ್ಭದಲ್ಲಿ ಮೌಲ್ಯಮಾಪನ ಕುಲಸಚಿವರಾದ ಡಾ.ಎನ್.ಎಂ.ಸಾಲಿ, ಡಾ.ಅಂಶುಮಾಲಿ, ಡಾ.ಗೋಪಾಲ್.ಎನ್ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷರಾದ ಪಲ್ಲವಿ.ಜಿ ಸೂಚನೆ

# ನಿವೇಶನ ರಹಿತರಿಗೆ ನಿವೇಶನ ಸೌಲಭ್ಯ ಕಲ್ಪಿಸಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.13–ಜಿಲ್ಲೆಯಲ್ಲಿ ವಿವಿಧ ತಾಲ್ಲೂಕುಗಳಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದ ನಿವೇಶನ ರಹಿತರಿಗೆ ನಿವೇಶನ, ವಸತಿ ರಹಿತರಿಗೆ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಜಾರಿಯಾದ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನೆ ಹಾಗೂ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಲೆಮಾರಿ ಸಮುದಾಯದವರು ಹೊಟ್ಟೆಪಾಡಿಗಾಗಿ ಅಲೆದಾಟ ನಡೆಸಿ ತಮ್ಮ ಜೀವನ ಸಾಗಿಸುತ್ತಾರೆ. ಮುಖ್ಯವಾಗಿ ಅವರಿಗೆ ನೆಲೆ ಇರುವುದಿಲ್ಲ. ಹಾಗಾಗಿ ಅವರಿಗೆ ಸೂರು ಕಲ್ಪಿಸುವುದು ಅಧಿಕಾರಿಗಳು ಆದ್ಯತೆಯಾಗಿ ಪರಿಗಣಿಸಬೇಕು ಎಂದು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯದ ನಿವೇಶನ ರಹಿತರಿಗೆ ನಿವೇಶನ ದೊರಕಿಸಿಕೊಡಲು ಜಾಗ ಇಲ್ಲದಿದ್ದಲ್ಲಿ ಜಿಲ್ಲಾಧಿಕಾರಿಯವರಿಂದ ಸೂಕ್ತ ಜಾಗ ಗುರುತಿಸಿ ನಿವೇಶನ ಹಂಚಿಕೆ ಮಾಡುವ ಕುರಿತು 2016 ರಲ್ಲಿ ಸರ್ಕಾರದ ಆದೇಶವಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿರುವ ವಿವಿಧ ಅಲೆಮಾರಿ ಸಮುದಾಯದವರ ಜಾತಿ ವಿವರಗಳನ್ನು ಸಮಾಜ ಕಲ್ಯಾಣ ಇಲಾಖೆ, ಆಯಾ ತಾಲ್ಲೂಕು ತಹಶೀಲ್ದಾರರು ಮತ್ತು ಇತರೆ ಇಲಾಖೆಗಳ ಜಂಟಿ ಸಹಯೋಗದಲ್ಲಿ ತಾಲ್ಲೂಕುವಾರು ಜಂಟಿ ಸರ್ವೆ ಕಾರ್ಯ ನಡೆಸಬೇಕು ಎಂದು ತಿಳಿಸಿದರು.

ಅಧಿಕಾರಿಗಳು ಮತ್ತು ನಾಮ ನಿರ್ದೇಶಿತ ಸದಸ್ಯರ ಮಧ್ಯ ಸಮನ್ವಯತೆ ಇರಬೇಕು. ಈ ಸಮುದಾಯಗಳಿಗೆ ಸರ್ಕಾರದ ಯೋಜನೆಗಳಡಿ ಸೌಲಭ್ಯಗಳು ದೊರಕಿಸಬೇಕು ಎಂಬ ಉದ್ದೇಶದೊಂದಿಗೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅನುಷ್ಠಾನ ಸಮಿತಿ ಇದ್ದು, ಪ್ರತಿ ತ್ರೈಮಾಸಿಕ ಅವಧಿಯಲ್ಲಿ ಸಭೆ ನಡೆಸಿ ಯೋಜನೆಗಳ ಲಾಭ ದೊರಕಿಸಲು ಮತ್ತು ಅರ್ಹ ಫಲಾನುಭವಿಗಳ ಆಯ್ಕೆಗೆ ನೆರವಾಗುವಂತೆ ಅವರು ಸಲಹೆ ನೀಡಿದರು.

ಸ್ವಯಂ ಉದ್ಯೋಗ ನೇರಸಾಲ ಯೋಜನೆ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಗಳಡಿ ಇರುವ ಗುರಿಗಳನ್ನು ನಿಗದಿತ ಅವಧಿಯೊಳಗೆ ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದರು.

*ಜಾಗೃತಿ ಕಾರ್ಯಕ್ರಮ ಆಯೋಜಿಸಿ:*

ಪರಿಶಿಷ್ಟಜಾತಿ, ಪರಿಶಿಷ್ಟಪಂಗಡ ಅಲೆಮಾರಿ ಜನಾಂಗದ ಮಕ್ಕಳು ಮುಖ್ಯವಾಹಿನಿಗೆ ಬರಬೇಕು. ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು. ಶಿಕ್ಷಣದಿಂದಲೇ ಅಭಿವೃದ್ಧಿ ಸಾಧ್ಯ. ಹಾಗಾಗಿ ಅವರಿರುವ ಜಾಗಗಳಲ್ಲಿ ಶಿಕ್ಷಣ ಕುರಿತು ಅರಿವು ಮೂಡಿಸುವ ಕೆಲವಾಗಬೇಕು ಎಂದು ಹೇಳಿದರು.

ಅಲೆಮಾರಿ ಸಮುದಾಯದವರಿಗೆ ಭೂಮಿ, ನೆಲೆ, ಸೂರು ಮುಖ್ಯವಾಗಿ ಶಿಕ್ಷಣದಿಂದ ವಂಚಿತರಾಗಿ ಮೌಢ್ಯತೆಯಿಂದ ಜೀವನ ಸಾಗಿಸುತ್ತಿದ್ದಾರೆ. ಅವರಿಗೆ ಶಿಕ್ಷಣದ ಅರಿವು ಮೂಡಿಸುವುದರ ಮೂಲಕ ಅವರನ್ನು ಮುಖ್ಯವಾಹಿನಿಗೆ ತರಲು ಅಧಿಕಾರಿಗಳು ಕಾಳಜಿ ವಹಿಸಬೇಕು. ಬಾಲ್ಯವಿವಾಹ ಪದ್ಧತಿಯಿಂದಾಗುವ ದುಷ್ಪರಿಣಾಮ ಕುರಿತು ತಿಳಿಸಬೇಕು. ಅಲೆಮಾರಿ ಸಮುದಾಯದವರಿಗಾಗಿಯೇ ಇರುವ ಸರ್ಕಾರಿ ಸೌಲಭ್ಯಗಳ ಕುರಿತು ತಿಳಿಸುವ ಕೆಲಸ ಮಾಡಬೇಕು ಎಂದರು.

*ಅಹವಾಲು ಸ್ವೀಕಾರ:*

ಬಳಿಕ ಸಭೆಯಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯದ ಸಂಘ ಸಂಸ್ಥೆಗಳ ಮತ್ತು ಅಲೆಮಾರಿ ಸಮುದಾಯದ ಸಾಮಾನ್ಯ ಜನರಿಂದ ಕುಂದುಕೊರತೆಗಳ ಬಗ್ಗೆ ಅಹವಾಲು ಸ್ವೀಕಾರ ಮಾಡಿದರು.

ಮೂಲ ಜನಾಂಗದವರಿಗೆ ವಸತಿ ರಹಿತರಿಗೆ ವಸತಿ ಸೌಲಭ್ಯ, ನಿವೇಶನ ರಹಿತರಿಗೆ ನಿವೇಶನ ಸೌಲಭ್ಯ, ಸಮುದಾಯ ಭವನ, ಸ್ಮಶಾನಕ್ಕೆ ದಾರಿ ಕಲ್ಪಿಸುವ ಕುರಿತು, ಭೂಮಿ ಹಂಚಿಕೆ ಸೇರಿದಂತೆ ಹಲವಾರು ಸಮಸ್ಯೆಗಳ ಬಗ್ಗೆ ಅಹವಾಲು ಸಲ್ಲಿಕೆಯಾದವು. ಇದೇ ಸಂದರ್ಭದಲ್ಲಿ ಸೂಕ್ತಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಬಿ.ಎಸ್.ಆನಂದ್ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ ಸೇರಿದಂತೆ ಜಿಲ್ಲಾ ಅನುಷ್ಠಾನ ಸಮಿತಿಯ ಸದಸ್ಯರು, ವಿವಿಧ ಅಲೆಮಾರಿ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಪ್ರಸ್ತುತ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರ ಪಾತ್ರ ಬಹುಮುಖ್ಯ : ಅಮ್ಜದ್ ಪಟೇಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರಸ್ತುತ ದಿನಮಾನಗಳಲ್ಲಿ ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದಿದ ಕೆಲಸ ಕಾರ್ಯಗಳಲ್ಲಿ ಮಹಿಳೆಯರ ಪಾತ್ರ ಬಹುಮುಖ್ಯವಾಗಿದೆ ಎಂದು ಕೊಪ್ಪಳ ನಗರಸಭೆಯ ಅಧ್ಯಕ್ಷರಾದ ಅಮ್ಜದ್ ಪಟೇಲ್ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಅಜೀಂ ಪ್ರೇಮಜೀ ಫೌಂಡೇಷನ್, ಭಾಗ್ಯನಗರದ ವಾಸವಿ ಕ್ಲಬ್ ಹಾಗೂ ಪಾನಘಂಟಿ ಫೌಂಡೇಷನ್ ಇವರುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದಲ್ಲಿ ಪ್ರಪ್ರಥಮವಾಗಿ ಮಹಿಳೆಯರ ಶಿಕ್ಷಣಕ್ಕಾಗಿ ಹೋರಾಡಿದ ಮಹಿಳೆ ಸಾವಿತ್ರಿ ಬಾಪುಲೆ ಅವರಾಗಿದ್ದು, ಮಹಿಳೆಯರು ತಮ್ಮ ಜೀವನದಲ್ಲಿ ಸಾವಿತ್ರಿಬಾಪುಲೆ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಸಮಾಜದ ಪರಿವರ್ತನೆ, ಅಭಿವೃದ್ಧಿಗೆ ಶ್ರಮಿಸಬೇಕು. ಮಹಿಳೆಯರು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ರಾಜಕೀಯವಾಗಿ ಅಭಿವೃದ್ಧಿ ಹೊಂದಿದರೆ ಮಾತ್ರ ಈ ದೇಶ ಅಭಿವೃದ್ಧಿ ಸಾಧ್ಯವಾಗುತ್ತದೆ. ನಮ್ಮ ರಾಜ್ಯ ಸರಕಾರವು ಮಹಿಳೆಯರ ಅಭಿವೃದ್ಧಿಗಾಗಿ ಪ್ರಮುಖ ಯೋಜನೆಯಾದ ಗೃಹಲಕ್ಷ್ಮಿ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಯು ಮಹಿಳೆಯರಿಗೆ ಆರ್ಥಿಕವಾಗಿ ಸಧೃಡರಾಗಲು ಪೂರಕವಾಗಿದೆ. ಇದರೊಂದಿಗೆ ಅನುಷ್ಠಾನಗೊಳಿಸಿದ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯವನ್ನು ಕಲ್ಪಿಸುವ ಶಕ್ತಿ ಯೋಜನೆಯು ಎಲ್ಲಾ ವರ್ಗದ ಮಹಿಳೆಯರಿಗೆ ದಿನನಿತ್ಯದ ಓಡಾಟದ ಜೊತೆಗೆ ಐತಿಹಾಸಿಕ ಮತ್ತು ಪುಣ್ಯಸ್ಥಳಗಳ ಭೇಟಿಗೂ ತುಂಬಾ ಅನುಕೂಲವಾಗಿದೆ. ಇದಲ್ಲದೇ ಮಹಿಳೆಯರ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಮಾತನಾಡಿ, ಪ್ರಪಂಚದಲ್ಲಿ ಮಹಿಳೆಯರು ಕೆಲಸ ಕಾರ್ಯಗಳಲ್ಲಿ ವಹಿಸುವ ಶ್ರಮ ಹೆಚ್ಚಿದೆ. ಮನೆಯಲ್ಲಿನ ಕೆಲಸ ಕಾರ್ಯಗಳಿಂದ ಮಕ್ಕಳ ಶಿಕ್ಷಣ, ಮನೆಯ ಜವಬ್ದಾರಿ ಮಹಿಳೆಯರ ಮೇಲಿದೆ. ನಮ್ಮ ದೇಶದಲ್ಲಿನ ಪ್ರತಿ ಅಂಗನವಾಡಿಗಳಲ್ಲಿ 3 ರಿಂದ 6 ವರ್ಷದ ಮಕ್ಕಳ ಲಾಲನೆ–ಪಾಲನೆ, ಮಕ್ಕಳ ಶಿಕ್ಷಣ, ಚಿಕ್ಕ ಮಕ್ಕಳು ದೈಹಿಕವಾಗಿ ಸದೃಢರಾಗಿ ಬೆಳೆಯಲು ಅಂಗನವಾಡಿ ಕಾರ್ಯಕತೆ–ಯರ ಹೆಚ್ಚಿನ ಜವಾಬ್ದಾರಿ ಇರುತ್ತದೆ. ಮಕ್ಕಳ ಮುಂದಿನ ಉಜ್ವಲ ಭವಿಷ್ಯಕ್ಕಾಗಿ ಕಾರ್ಯ ನಿರ್ವಹಿಸುವಲ್ಲಿ ಮಹಿಳೆಯರ ಪಾತ್ರ ಬಹುಮುಖ್ಯವಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳೆಯರಿಗೆ ಮೀಸಲಿರುವ ಹೆರಿಗೆ ರಜೆಯಲ್ಲಿ ಮೊದಲು ಇದ್ದ ಕಡಿಮೆ ರಜೆ ಅವಧಿಯನ್ನು ವಿಸ್ತರಿಸಿ ಮಹಿಳೆಯರಿಗೆ ಅನುಕೂಲ ಕಲ್ಪಿಸಿದೆ. ಮಹಿಳೆಯರಲ್ಲಿ ಸಮಯ ಪ್ರಜ್ಞೆ ಹೆಚ್ಚಾಗಿರುತ್ತದೆ. ಇಂತಹ ಸಮಯ ಪ್ರಜ್ಞೆಯನ್ನು ನಾವೆಲ್ಲರೂ ಬೆಳಿಸಿಕೊಳ್ಳಬೇಕು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್ ದರಗದ ಅವರು ಮಾತನಾಡಿ, ಶರಣರ ವಚನಗಳಲ್ಲಿ ಹೆಣ್ಣುಮಕ್ಕಳ ಶ್ರಮ ಮತ್ತು ಕೆಲಸ ಕಾರ್ಯಗಳ ಕುರಿತು ವರ್ಣಿಸಲಾಗಿದೆ. ಮಹಿಳೆಯರು ಆರ್ಥಿಕವಾಗಿ ಮುಂದುವರೆಯಲು ಉದ್ಯೋಗದ ಅವಶ್ಯಕತೆ ಮುಖ್ಯವಾಗಿದೆ. ಶೈಕ್ಷಣಿಕ, ಆರ್ಥಿಕ, ರಾಜಕೀಯವಾಗಿ ಸಮಾಜದ ಪರಿವರ್ತನೆಗೆ ಮಹಿಳೆಯರ ಪಾತ್ರ ಪ್ರಮುಖವಾಗಿದೆ. ಸಂವಿಧಾನದಲ್ಲಿನ ಇರುವಂತಹ ಹೆಣ್ಣುಮಕ್ಕಳು ಮತ್ತು ಮಹಿಳೆಯರಿಗೆ ಇರುವ ಕಾನೂನು ಸುವ್ಯವಸ್ಥೆ, ಮಹಿಳೆಯರ ಸುರಕ್ಷತೆ, ಮಹಿಳೆಯರಿಗೆ ತೊಂದರೆ ಅನ್ಯಾಯ, ಕಿರುಕುಳವಾದಾಗ ಯಾವ ರೀತಿಯ ಕಾನೂನು ಕ್ರಮಗಳನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಕೊಳ್ಳಬೇಕು ಎಂಬುವುದುರ ಬಗ್ಗೆ ಮಹಿಳೆಯರು ತಿಳಿದುಕೊಳ್ಳಬೇಕು. ಸಮಾಜದಲ್ಲಿ ಎಲ್ಲರೂ ಸರಿಸಮಾನರಾಗಿದ್ದು, ಯಾವುದೇ ಭೇದ ಭಾವವಿಲ್ಲದೆ ಸಹಬಾಳ್ವೆ ರೀತಿಯಲ್ಲಿ ಎಲ್ಲರೂ ಬದುಕಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಮಾತನಾಡಿ, ಮಹಿಳೆಯರ ಶಕ್ತಿ ಆಗಾಧವಿದೆ. ರಾಜ್ಯ ಸರ್ಕಾರವು ಪ್ರಸುತ್ತ ವರ್ಷದ ಹಣಕಾಸು ಆಯವ್ಯಯದಲ್ಲಿ ಮಹಿಳೆಯರ ಅಭಿವೃದ್ಧಿಗೆ ಒತ್ತು ನೀಡಿ ಮಹಿಳೆಯರ ಸ್ವಸಹಾಯ ಸಂಘಗಳಿಂದ ಸಾಲ ಪಡೆದು ವಿವಿಧ ಉದ್ಯಮಗಳಲ್ಲಿ ತೊಡಗಿ ಆರ್ಥಿಕವಾಗಿ ಸಧೃಡರಾಗಲು ಸಹಾಯಕವಾಗಿದೆ. ಮಕ್ಕಳ ಲಾಲನೆ ಪಾಲನೆಯಲ್ಲಿ ಕೊಪ್ಪಳ ಜಿಲ್ಲೆಯ ಅಂಗನವಾಡಿ ಶಾಲೆಗಳು ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಥಮ ಸ್ಥಾನದಲ್ಲಿದ್ದು, ನಮ್ಮ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ. ಬಾಲ್ಯವಿವಾಹವನ್ನು ತಡೆಗಟ್ಟಲು ಪ್ರಥಮ ಹಂತದಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅಂಗನವಾಡಿ ಸಹಾಯಕಿಯರು ಪ್ರಮುಖ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

*ಪ್ರಶಸ್ತಿ ಪ್ರಧಾನ ಸಮಾರಂಭ:* ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ಯ ವಿವಿಧ ಕೇತ್ರಗಳಲ್ಲಿ ಸಾಧನಗೈದ ಮಕ್ಕಳಿಗೆ ಹಾಗೂ ಮಹಿಳಾ ಮತ್ತು ಮಕ್ಕಳ ಇಲಾಖೆಯಡಿಯಲ್ಲಿ ಅತ್ಯುತ್ತಮ ಕೆಲಸ ಕಾರ್ಯ ನಿರ್ವಹಿಸಿದ ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಅಂಗನವಾಡಿ ಸಹಾಯಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

*ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ರಂಗೋಲಿ ಸ್ಪರ್ಧೆ:* ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ ಮಹಿಳೆಯರಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ರಂಗೋಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.


ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಉಪನಿರ್ದೇಶಕ ಪರುಶುರಾಮ ಶೆಟ್ಟೆಪ್ಪನವರ್, ಜಿಲ್ಲಾ ನಿರೂಪಣಾಧಿಕಾರಿ ಗಂಗಪ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತೇಶ ಪೂಜಾರ್, ಯುನಿಸೆಫ್ ಜಿಲ್ಲಾ ಮಕ್ಕಳ ರಕ್ಷಣಾ ಯೋಜನೆಯ ಹರೀಶ ಜೋಗಿ, ಮಹಿಳಾ ಮತ್ತು ಮಕ್ಕಳ ಇಲಾಖೆಯ ಯೋಜನಾಧಿಕಾರಿ ಅನ್ನಪೂರ್ಣ ಸೇರಿದಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಇಲಾಖೆಯ ಸಿಬ್ಬಂದಿಗಳು, ಮಹಿಳೆಯರು ಮಕ್ಕಳು ಉಪಸ್ಥಿತರಿದ್ದರು.

## ಹೋಳಿ ಹಬ್ಬ :ಮಾ. 15ರ ವರೆಗೆ ಮದ್ಯ ಮಾರಾಟ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಹೋಳಿ ಹಬ್ಬದ ಪ್ರಯುಕ್ತಕಾನೂನು ಸುವ್ಯವಸ್ಥೆ ಮತ್ತು ಶಾಂತಿ ಕಾಪಾಡಲು ಜಿಲ್ಲೆಯಾದ್ಯಂತ ಮದ್ಯ ಮಾರಾಟವನ್ನು ನಿಷೇಧಿಸಿ ಜಿಲ್ಲಾಧಿಕಾರಿ ನಲಿಲ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ.

ಮಾರ್ಚ್ 13 ರಿಂದ 15ರ ವರೆಗೆ ಕೊಪ್ಪಳ ಜಿಲ್ಲೆಯಾದ್ಯಂತ ಕಾಮದಹನ ಮತ್ತು ಹೋಳಿ ಹಬ್ಬದ ಸಮಯದಲ್ಲಿ ಶಾಂತತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಜಿಲ್ಲೆಯ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಗಳಿಗೊಳಪಟ್ಟಂತೆ ಮದ್ಯ ಮಾರಾಟವನ್ನು ನಿಷೇಧಿಸಬೇಕೆಂದು ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರ ಕೋರಿಕೆ ಮೇರೆಗೆ ಕರ್ನಾಟಕ ಅಬಕಾರಿ ಕಾಯ್ದೆ-1965 ರ ಕಲಂ 21 ರನ್ವಯ ಜಿಲ್ಲೆಯ ಕೊಪ್ಪಳ ನಗರ, ಮುನಿರಾಬಾದ್, ಆಳವಂಡಿ, ಕೊಪ್ಪಳ ಗ್ರಾಮೀಣ, ಕುಕನೂರು, ಗಂಗಾವತಿ ಗ್ರಾಮೀಣ, ತಾವರೆಗೇರಾ, ಹನುಮಸಾಗರ ಪೋಲಿಸ್ ಠಾಣಾ ವ್ಯಾಪ್ತಿಯಲ್ಲಿ ಮಾ.13ರ ಸಂಜೆ 5 ಗಂಟೆಯಿಂದ ಮಾ.14ರ ಮಧ್ಯರಾತ್ರಿಯವರೆಗೆ ಹಾಗೂ ಯಲಬುರ್ಗಾ, ಬೇವೂರು, ಗಂಗಾವತಿ ನಗರ, ಕಾರಟಗಿ,



ಕನಕಗಿರಿ ಮತ್ತು ಕುಷ್ಟಗಿ ಪೋಲಿಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಸಂಜೆ 5 ಗಂಟೆಯಿಂದ ಮಾ.15ರ ಮಧ್ಯರಾತ್ರಿಯವರೆಗೆಮದ್ಯಮಾರಾಟವನ್ನು ನಿಷೇಧಿಸಲಾಗಿದೆ.

ಈ ವಿಷಯವಾಗಿ ಅಬಕಾರಿ ಉಪ ಆಯುಕ್ತರ ನೇತೃತ್ವದಲ್ಲಿ ತನಿಖಾ ತಂಡವನ್ನು ರಚಿಸಿ, ಅದರಲ್ಲಿ ಆರಕ್ಷಕರ ವೃತ್ತ ನಿರೀಕ್ಷಕರು ಹಾಗೂ ಅಬಕಾರಿ ವೃತ್ತ ನಿರೀಕ್ಷಕರು ಕಾರ್ಯನಿರ್ವಹಿಸಲು ಆದೇಶಿಸಿದೆ. ಈ ಆದೇಶವನ್ನು ಅನುಷ್ಠಾನಗೊಳಿಸುವಲ್ಲಿ ನಿರ್ಲಕ್ಷತನ ತೋರಿದವರ ವಿರುದ್ಧ ಕಾನೂನು ರೀತಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಈ ಆದೇಶದಲ್ಲಿ ತಿಳಿಸಿದ್ದಾರೆ.

## ಬನಹಟ್ಟಿಯಲ್ಲಿ ರೇಣುಕಾಚಾರ್ಯ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.13-ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಬನಹಟ್ಟಿನಗರದ ಬೇಡಜಂಗಮ ಪತ್ತಿನ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ಜಗದ್ಗುರು ರೇಣುಕಾಚಾರ್ಯರ ಜಯಂತಿ ಆಚರಿಸಲಾಯಿತು.

ರೇಣುಕಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಮಾತನಾಡಿದ, ಸಂಘದ ಕಾರ್ಯದರ್ಶಿ ಸಂಗಯ್ಯ ಮಠಪತಿ, ರೇಣುಕಾಚಾರ್ಯರು ವೀರಶೈವ ಧರ್ಮಕ್ಕೆ ನೀಡಿದ ಬೋಧನಾ ಸಂಕೇತಗಳು ಬಹು ಮಹತ್ವವಾಗಿವೆ. ಅವುಗಳನ್ನು ಅಳವಡಿಕೊಂಡು ಧರ್ಮದ ತತ್ವ ಸಿದ್ಧಾಂತಗಳ ಮಾರ್ಗದಲ್ಲಿ ನಡೆಯಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಿದೆ ಎಂದು ಹೇಳಿದರು.

ಶ್ರೀಮತಿ ದಾನಮ್ಮ ಕಾಡದೇವರ, ಶೃತಿಮುತ್ತಿನಕಂತಿಮಠ, ಮಾಹಾಂತೇಶ ಬಂಗಿ, ಮುತ್ತು ಅಮ್ಮಣಗಿಮಠ ಸೇರಿದಂತೆ ಅನೇಕರು ಹಾಜರಿದ್ದರು.

## ನದಾಫ-ಪಿಂಜಾರ ನಿಗಮಕ್ಕೆ ಅನುದಾನ ಬಿಡುಗಡೆಗೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.13-ನದಾಫ-ಪಿಂಜಾರ ಅಭಿವೃದ್ಧಿ ನಿಗಮಕ್ಕೆ 2025-26ನೇ ಸಾಲಿನ ಬಜೆಟ್‌ನಲ್ಲಿ ಅನುದಾನ ಒದಗಿಸದೇ ಇರುವುದಕ್ಕೆ ಜಿಲ್ಲಾಧ್ಯಕ್ಷ ಎಸ್.ಎ.ಹೊಸಮನಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಎಸ್.ಎಚ್.ಮುದಕವಿ, ಗದಗ ವಿಭಾಗೀಯ ಉಪಾಧ್ಯಕ್ಷ ಪಿ.ಇಮಾಮಸಾಬ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದಲ್ಲಿ ನದಾಫ-ಪಿಂಜಾರ ಸಮುದಾಯದ ಸುಮಾರು 25 ಲಕ್ಷ ಜನರಿದ್ದು ಅರೆ ಅಲೆಮಾರಿಗಳಾಗಿದ್ದು, ಆರ್ಥಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ ಹಾಗೂ ಸಾಮಾಜಿಕವಾಗಿ ಅತ್ಯಂತ ಹಿಂದುಳಿದ ಸಮಾಜವಾಗಿರುತ್ತದೆ. ವೃತ್ತಿ ಆಧಾರದ ಮೇಲೆ ವರ್ಗ 1 ರಲ್ಲಿ ನೀಡಿದ್ದಾರೆ. ನಮ್ಮ ಜನಾಂಗದವರು ಪ್ರವರ್ಗ-1 ರಲ್ಲಿ ಇತರೆ 117 ಜಾತಿಯವರೊಂದಿಗೆ ಸೇರ್ಪಡೆ ಮಾಡಿ ಶೇ.4ರ ಒಟ್ಟು ಮೀಸಲಾತಿಯಲ್ಲಿ ಸರ್ಕಾರಿ ಹುದ್ದೆಗೆ ಆಯ್ಕೆಯಾಗುವುದು ಕಷ್ಟಸಾಧ್ಯವಾಗಿದೆ. ನದಾಫ ಪಿಂಜಾರ ಜನಾಂಗದವರು ಇದುವರೆಗೆ ಲೋಕಸೇವಾ ಆಯೋಗದ ನೇರ ನೇಮಕಾತಿಯಲ್ಲಿ ಕೆಎಎಸ್ ಹುದ್ದೆಗೆ ಆಯ್ಕೆಯಾಗಿರುವುದಿಲ್ಲ. ಕೇಂದ್ರದ ಆಯ್‌ಎಎಸ್, ಐಪಿಎಸ್‌ಗೂ ಸಹ ಆಯ್ಕೆ ಆಗಿರುವುದಿಲ್ಲ.

2023ರಲ್ಲಿ ಸರ್ಕಾರ ಹಿಂದುಳಿದ ವರ್ಗಗಳ ಪ್ರವರ್ಗ 1ರ ನದಾಫ-ಪಿಂಜಾರ ಹಾಗೂ ಇತರ 13 ಜಾತಿಗಳ ಅಭಿವೃದ್ಧಿ ನಿಗಮ ಸ್ಥಾಪಿಸಿ ಆದೇಶ ಮಾಡಲಾಗಿದ್ದು, ಕಳೆದ ಎರಡು ವರ್ಷಗಳಿಂದ ಸಂಬಂಧಿಸಿದ ಸಚಿವರಿಗೆ ಅನೇಕ ಸಲ ಮನವಿ ಸಲ್ಲಿಸಲಾಗಿತ್ತು. ಮುಖ್ಯಮಂತ್ರಿ ಸಿದ್ಧರಾಮಯ್ಯರವರನ್ನು ಭೇಟಿ ಮಾಡಿ ಅನುದಾನ ಬಿಡುಗಡೆಗೆ ಒತ್ತಾಯಿಸಿ ಮನವಿ ಸಲ್ಲಿಸಲಾಗಿತ್ತು.

ಆದರೆ 2025-26 ನೇ ಸಾಲಿನ ಬಜೆಟ್‌ನಲ್ಲಿ ನಿಗಮಕ್ಕೆ ಅನುದಾನ ಬಿಡುಗಡೆ ಮಾಡದೇ ನಿರ್ಲಕ್ಷ್ಯ ವಹಿಸಿದ್ದಾರೆ. ಇದು ಅತ್ಯಂತ ಶೋಚನೀಯ ಸಂಗತಿ. ರಾಜ್ಯದ ಎಲ್ಲಾ ಜನತೆಗೆ ಸಮಪಾಲು ಸಮಬಾಳು ಎಂದು ವಾಕ್ಯ ಘೋಷಣೆ ಮಾಡಿದ ಸರ್ಕಾರ ಅಲ್ಪಸಂಖ್ಯಾತರಲ್ಲಿ ಅತ್ಯಂತ ಹಿಂದುಳಿದ ನಮ್ಮ ನದಾಫ್-ಪಿಂಜಾರ ಸಮುದಾಯದವರಿಗೆ ನ್ಯಾಯ ದೊರಕಿಸುವಲ್ಲಿ ವೈಫಲ್ಯತೆ ಕಾಣುತ್ತಿದೆ. ಕಾರಣ ಶೀಘ್ರದಲ್ಲಿ ನದಾಫ-ಪಿಂಜಾರ ಅಭಿವೃದ್ಧಿ ನಿಗಮಕ್ಕೆ ಅನುದಾನ ಘೋಷಣೆ ಮಾಡಿ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಎಸ್.ಎ.ಹೊಸಮನಿ, ಎಸ್.ಎಚ್.ಮುದಕವಿ, ಪಿ.ಇಮಾಮಸಾಬ ಆಗ್ರಹಿಸಿದ್ದಾರೆ.

## ಭಾಲ್ಕಿ : ವಿಶ್ವ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ : ಪೋಕೋ ಕಾಯ್ದೆ, ವರದಕ್ಷಿಣೆ ನಿಷೇಧ ಕಾಯ್ದೆ, ಬಾಲ್ಯ ವಿವಾಹ ನಿಯಂತ್ರಣ ಕಾಯ್ದೆ, ಪಿತ್ರಾರ್ಜಿತ ಆಸ್ತಿಯಲ್ಲಿನ ಹಕ್ಕು, ಕೌಟಂಬಿಕ ದೌರ್ಜನ್ಯ ತಡೆ ಕಾಯ್ದೆ ಸೇರಿದಂತೆ ಮಹಿಳೆಯರಿಗೆ ನೀಡಲಾಗಿರುವ ಕಾನೂನುಗಳ ಬಗ್ಗೆ ಸವಿಸ್ತಾರವಾಗಿ ವಕೀಲೆ ಆರತಿ ತಿವಾರಿ ಮಾತನಡಿದರು.

ಪಟ್ಟಣದ ತಾಲ್ಲೂಕ ಪಂಚಾಯತ ಸಭಾಂಗಣದಲ್ಲಿ ಆಕ್ಸಸ್ ಲೈವ್ಲೀಹುಡ್ಸ್ ಹಾಗೂ ಡಿಜಿಟಲ್ ಸಖಿ ಯೋಜನೆಯಡಿ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ತಾಲ್ಲೂಕ ಪಂಚಾಯತ ಇಓ ಸೂರ್ಯಕಾಂತ್ ಬಿರಾದಾರ ಮಾತನಾಡಿ ಅತ್ಯಾಚಾರ, ಹೆಣ್ಣು ಭ್ರೂಣಹತ್ಯೆ ಹಾಗೂ ಬಾಲ್ಯ ವಿವಾಹಗಳಿಂದಾಗಿ ಮಹಿಳೆಯರು ನಲುಗಿಹೋಗುತ್ತಿದ್ದಾರೆ. ಇವುಗಳ ಕಡಿವಾಣಕ್ಕೆ ಮುಂದಾಗುವ ಮೂಲಕ ಮಹಿಳಾ ರಕ್ಷಣೆ ಮಾಡಬೇಕಿದೆ ಎಂದರು.

ಸಿಡಿಪಿಓ ಶ್ರೀನಿವಾಸ ಬಾಳುವಾಲೆ ಮಾತನಾಡಿ ಕುಟುಂಬವನ್ನು ಸಮರ್ಥವಾಗಿ ನಿಭಾಯಿಸುವ ಹೆಣ್ಣು ಈ ಸಮಾಜಕ್ಕೂ ಒಂದು ಕಣ್ಣು. ಮನೆ ಕೆಲಸದಿಂದ ಹಿಡಿದು ವಿಮಾನ ಓಡಿಸುವವರೆಗೂ ಮಹಿಳೆ ಮುನ್ನೆಡೆದಿದ್ದಾಳೆ. ಮಹಿಳೆಯರು ತಮ್ಮ ಆರೋಗ್ಯ ಹಾಗೂ ವೈಯಕ್ತಿಕ ಸ್ವಚ್ಚತೆ ಬಗ್ಗೆ ಹೆಚ್ಚುಗಮನಹರಿಸಬೇಕು' ಎಂದು ಹೇಳಿದರು. ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಮಹಾಲಿಂಗ ಸ್ವಾಮೀಜಿ ಮಾತನಾಡಿ 'ದೇಶದಲ್ಲಿ ಮಹಿಳೆಯರು ದೊಡ್ಡಮಟ್ಟದ ಸಾಧನೆ ಮಾಡಿದ್ದಾರೆ. ಹೆಣ್ಣುಮಕ್ಕಳು ಧೈರ್ಯ ಹಾಗೂ ಛಲದಿಂದ ಸಮಸ್ಯೆಗಳನ್ನು ಎದುರಿಸಬೇಕಿದೆ' ಎಂದರು. ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಮಲ್ಲಿಕಾರ್ಜುನ್, ಡಿಜಿಟಲ್ ಸಖಿ ಯೋಜನಾ ವ್ಯವಸ್ಥಾಪಕ ಮಹೊಮ್ಮದ ಶಿರಾಜ, ರೇವಣಸಿದ್ಧ ಜಾಡರ, ಗುರುಪ್ರಸಾದ ಮೆಂಟೇ, ಶ್ರೀಧರ ಚಿನ್ಮಯ, ಪಲ್ಲವಿ ಪಾಂಚಕರ, ಕನ್ಯಾಕುಮಾರಿ , ರೇವಣಾಂಬಿಕಾ

ಸೇರಿ ಡಿಜಿಟಲ್ ಸಖಿಯರು ಭಾಗವಹಿಸಿದ್ದರು.

## ಕೊಪ್ಪಳ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರಾಗಿ ಲಿಂಗಾರೆಡ್ಡಿ ಆಲೂರ್ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಲಿಂಗಾ-ರೆಡ್ಡಿ ಆಲೂರು ಅವರಿಗೆ ಅಭಿನಂದನೆಗಳು.

ಪ್ರಾಧ್ಯಾಪಕರಾಗಿ, ಸಾಹಿತಿಯಾಗಿ, ಕೃಷಿ ಮತ್ತು ಸಾಹಿತ್ಯದ ಪತ್ರಿ-ಕೆಯ ಸಂಪಾದಕರಾಗಿ, ವಿವಿಧ ವೇದಿಕೆಗಳಲ್ಲಿ ಅಚ್ಚುಕಟ್ಟು ನಿರ್ವಹಣೆ ಮಾಡುವಲ್ಲಿ ಖ್ಯಾತಿ ಹೊಂದಿರುವ ಲಿಂಗಾರೆಡ್ಡಿ ಆಲೂರು ಅವರು ಗಂಗಾವತಿ ತಾಲೂಕಿನ ಮಲ್ಲಾಪುರ ಗ್ರಾಮದವರಾಗಿದ್ದು ಕೆಸರಟ್ಟಿ ಜಿಜಿಡಿಇ ಶಿಕ್ಷಣ ಟ್ರಸ್ಟ್ ನ ಶೈಕ್ಷಣಿಕ ವಿಭಾಗದ ಆಡಳಿತಾಧಿಕಾರಿಯಾಗಿ ಕಳೆದ ಹತ್ತು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ದೂರದರ್ಶನ ಮತ್ತು ಆಕಾಶವಾಣಿಯಲ್ಲಿ ಕೃಷಿ, ಶಿಕ್ಷಣ, ಸಾಹಿತ್ಯಕ್ಕೆ ಸಂಬಂಧಿಸಿದ ಹಲವು ಕಾರ್ಯಕ್ರಮಗಳನ್ನು ನಿರ್ವಹಿಸಿರುವ ಅನುಭವ ಹೊಂದಿರುವ ಲಿಂಗಾರೆಡ್ಡಿ



ಆಲೂರು ಅವರು ಉತ್ತಮ ವಾಗ್ಮಿಯಾಗಿ ಗಂಗಾವತಿಯಲ್ಲಿ ನಡೆಯುವ ಪ್ರತಿಯೊಂದು ಸಾಹಿತ್ಯ ಸಾಂಸ್ಕೃತಿಕ ಮತ್ತಿತರ ಸಂಘ ಸಂಸ್ಥೆಗಳ ಕಾರ್ಯಕ್ರಮದಲ್ಲಿ ನಿರೂಪಕರಾಗಿ ಜನಮಾನಸದಲ್ಲಿ ಗುರುತಿಸಿಕೊಂಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿಗೆ ಟೊಂಕಕಟ್ಟಿ ನಿಂತು ಕನ್ನಡ ಸೇವೆಯನ್ನು ಸಲ್ಲಿಸಿರುವ ತಮ್ಮ ಅಧ್ಯಕ್ಷತೆಯಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಯಶಸ್ವಿಯಾಗಿ ಜರುಗಲೆಂದು ಅವರ ಅಭಿಮಾನಿ ಬಳಗ ಶುಭ ಹಾರೈಸಿದ್ದಾರೆ.

## ಸಾಮಾಜಿಕ ಸೇವೆಯ ಮೂಲಕ ಸಮಾಜದಲ್ಲಿ ಸಮಾನತೆ ಜಗದ್ಗುರು ರೇಣುಕಾಚಾರ್ಯರ ಸಾರಿದರು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮಾ.13-ಅಂದಿನ ಕಾಲದಲ್ಲಿ ಸಾಮಾಜಿಕ ಸೇವೆಯ ಮೂಲಕ ಸಮಾಜದಲ್ಲಿ ಸಮಾನತೆ ಮತ್ತು ಭ್ರಾತೃತ್ವ ಸೋದರತ್ವ ಭಾವದಿಂದ ಪ್ರತಿಯೊಬ್ಬರು ಸಮಾಜದಲ್ಲಿ ಬದುಕಬೇಕೆಂದು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಯಲಪ್ಪ ನಾಯ್ಕೋಡಿ ಹೇಳಿದರು.

ಬುಧುವಾರದಂದು ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಜಯಂತಿ ಬಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯರು ಅವರು ಮಾನವೀಯ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಅವರ ವಿಚಾರಧಾರೆಗಳನ್ನು ನಮ್ಮಲ್ಲಿ ಮೈಗೂಡಿಸಿಕೊಳ್ಳಬೇಕೆಂದರು ಅವರ ಆದರ್ಶ ತತ್ವಗಳನ್ನು ನಮ್ಮ ಜೀವನದಲ್ಲಿ ರೂಪಿಸಿಕೊಳ್ಳಬೇಕು ಎಂದರು. ವ್ಹಿ.ಕೆ. ಸಲಗರ ಪೂಜ್ಯ ಶ್ರೀ ದ್ವಿತೀಯ ಸಾಂಬಶಿವಯೋಗಿ ಶಿವಾಚಾರ್ಯರು ಸಾನಿಧ್ಯ ವಹಿಸಿ ಮಾತನಾಡಿ, ಮನುಕುಲದ ಉದ್ದಾರಕ್ಕಾಗಿ ಶ್ರಮಿಸಿದ ಮಹಾನ ವ್ಯಕ್ತಿ ವೀರಶೈವ ಮಹಾಮಠದ ಸಂಸ್ಥಾಪಕ. ತಮ್ಮ ಸಾಮಾಜಿಕ ಸೇವೆಗಳ ಮೂಲಕ ಮನುಕುಲವನ್ನು ಉದ್ದಾರ ಮಾಡಿದವರು. ಎಂದು ಹೇಳಿದರು.

ಮಾನವೀಯ ಮೌಲ್ಯಗಳಿಲ್ಲದ ಸಂದರ್ಭದಲ್ಲಿ ಎಲ್ಲಾ ಜಾತಿಯವರನ್ನು ಒಗ್ಗೂಡಿಸುವ ಮೂಲಕ ಸಮಾಜದಲ್ಲಿ ಸರ್ವರು ಸಮಾನರು ಎಂದ ಸಂದೇಶವನ್ನು ಸಾರಿದವರು ಶ್ರೀ. ಜಗದ್ಗುರು ರೇಣುಕಾಚಾರ್ಯರು

ಸಮಾಜದಲ್ಲಿನ ಪ್ರತಿಯೊಬ್ಬ ವ್ಯಕ್ತಿಯನ್ನು ಜಾಗೃತರನ್ನಾಗಿ ಮಾಡಲು ಸಿದ್ದಾಂತ ಶಿಖಾಮಣಿಯನ್ನು ಬೋಧಿಸುವ ಮೂಲಕ ಹಣೆಗೆ ವಿಭೂತಿ, ಕೊರಳಲ್ಲಿ ಲಿಂಗ ಮತ್ತು ರುದ್ರಾಕ್ಷಿಯನ್ನು ಧರಿಸಿಬೇಕೆಂಬ ಶ್ರೇಷ್ಠ ಸಂಸ್ಕೃತಿಯನ್ನು ನೀಡಿದವರು. ಸನಾತನ ಧರ್ಮವನ್ನು ಪರಿಪಾಲನೆಯನ್ನು ಮಾಡುವವರನು ವೀರಶೈವರು ಎನ್ನುತ್ತಾರೆ. ರೇಣಕಾಚಾರ್ಯರು ಶ್ರೀಲಂಕಗೆ ಹೋಗಿ 3 ಕೋಟಿ ಲಿಂಗವನ್ನು ಸ್ಥಾಪಿಸಿದರು. ಹೆಣ್ಣು ಮಕ್ಕಳಿಗೆ ನ್ಯಾಯವನ್ನು ಒದಗಿಸುವ ಮುಖಾಂತರ ಸಮಾಜದಲ್ಲಿ ಸರ್ವರು ಸಮಾನರು ಎಂಬ ಸಂದೇಶವನ್ನು ನೀಡಿದವರು. ಮಾನವ ಕುಲದ ಉದ್ದಾರಕ ಸರ್ವರಿಗೂ ಒಳಿತನ್ನು ಬಯಸಿದ ಮಹಾನ್ ವ್ಯಕಿ ಶ್ರೀ. ಜಗದ್ಗುರು ರೇಣುಕಾಚಾರ್ಯರಿರಿಗೆ ಸಲ್ಲುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಇಂಡಿಯನ್ ಎಕ್ಸಪ್ರೆಸ್ ವರದಿಗಾರರಾದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ರಾಮಕೃಷ್ಣ ಬಡಶೇಷಿ, ವಿಜಯವಾಣಿ ಉಪಸಂಪಾದಕ, ಜಯತೀರ್ಥ ಪಾಟೀಲ, ವಿಜಯ ಕರ್ನಾಟಕ ವರದಿಗಾರರಾದ ಬ್ರಹ್ಮನಂದ ಸೇರಿದಂತೆ ಎಲ್ಲಾ ಪತ್ರಕರ್ತರು ಹಾಗೂ ವಿದ್ಯುನ್ಮಾನಗಳು ಛಾಯಾಗ್ರಾಹಕರಿಗೆ ಮತ್ತು ವರದಿಗಾರರಿಗೆ ಸನ್ಮಾನಿಸಲಾಯಿತು.

ವೇದಿಕೆ ಮೇಲೆ ಶ್ರೀನಿವಾಸ ಸರಡಗಿ ಶ್ರೀ ಗುರು ಚಿಕ್ಕ ವಿರೇಶ್ವರ ಸಂಸ್ಥಾನ ಹಿರೇಮಠದ ರೇವಣಸಿದ್ದ ಶಿವಾಚಾರ್ಯರು, ಆಳಂದ ಶ್ರೀ ಸಿದ್ದಲಿಂಗ ಶಿವಚಾರ್ಯರು ಕಪನೂರ ಮಲ್ಲಿಕಾರ್ಜುನ ಮುತ್ಯ ಟೆಂಗಳಿ, ಗುಲಬರ್ಗಾ ತಹಶೀಲ್ದಾರ ಗಂಗಾಧರ ಪಾಟೀಲ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಸಹಾಯಕ ನಿರ್ದೇಶಕ ಶಿವಶರಣಪ್ಪ ದನ್ನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ಕಲಬುರಗಿ ಜಿಲ್ಲಾ ಘಟಕ ಸಮಿತಿ ಜಯಂತ್ಯೋತ್ಸವ ಅಧ್ಯಕ್ಷ ರುದ್ರಮುನಿ, ಮಠಪತಿ ಕೊಂಚೂರ ವೀರಶೈವ ಸಮಾಜ ಮುಖಂಡ ವಿಜಯಕುಮಾರ ಸಾಲಿಮಠ, ಜ್ಯೋತಿ ಮರಗೋಳ, ಶರಣಮ್ಮ ಹಿರೇಮಠ. ಸಿದ್ಧಲಿಂಗಯ್ಯ, ವೀರಣ ಬೇಲೂರು ಶಾಂತಕುಮಾರ ಬಿರದಾರ ನಾಗಲಿಂಗಯ್ಯ ಸ್ವಾಮಿ ಕಾರ್ಯಕ್ರಮ ನಿರೂಪಿಸಿದರು.

ಮೆರವಣಿಗೆಯು ಚೌಕ್ ಪೋಲಿಸ್ ಠಾಣೆಯಿಂದ ಹೊರಟು ವೀರಶೈವ ಕಲ್ಯಾಣ ಮಂಟಪದಲ್ಲಿ ಮುಕ್ತಾಯಗೊಂಡಿತ್ತು.

## ಶ್ರೀ ರೇಣುಕಾಚಾರ್ಯರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು: ಶರಣಬಸಪ್ಪಗೌಡ ಕೋಟೆಪ್ಪಗೋಳ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಮಾ:13-ಆದಿ ಜಗದ್ಗುರು ರೇಣುಕಾಚಾರ್ಯರ ತತ್ವಗಳು ವಿಶ್ವಕ್ಕೆ ಮಾದರಿಯಾಗಿದ್ದು, ಇವುಗಳನ್ನು ಅಳವಿಡಿಸಿಕೊಂಡು ಮುಂದೆ ಸಾಗುವ ಉದ್ದೇಶದಿಂದ ಸರ್ಕಾರ ಜಯಂತಿ ಆಚರಣೆ ಮಾಡುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಶರಣಬಸಪ್ಪಗೌಡ ಕೊಟೆಪ್ಪಗೋಳ ಅಭಿಪ್ರಾಯಪಟ್ಟರು.



ನಗರದ ಕನ್ನಡ ಸಾಹಿತ್ಯ ಪರಿಷತ್ ಸಭಾಭವನದಲ್ಲಿ ಜಿಲ್ಲಾಡಳಿತ ವತಿಯಿಂದ ಆಯೋಜಿಸಿದ್ದ ಜಗದ್ಗುರು ರೇಣುಕಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ರೇಣುಕಾಚಾರ್ಯರ ಭಾವಚಿತ್ರಕ್ಕೆ ಪೂಜೆ ಮಾಡಿ, ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸರ್ಕಾರದಿಂದ ಸುಮಾರು 60ಕ್ಕೂ ಹೆಚ್ಚು ಮಹಾಪುರುಷರ ಧರ್ಮ ಸಂಸ್ಥಾಪಕರ ಜಯಂತಿ ಆಚರಿಸಲಾಗುತ್ತಿದೆ ಎಲ್ಲ ಮಹಾಪುರುಷರ ಜಯಂತಿ ಆಚರಣೆ ಉದ್ದೇಶ ಅವರ ಸಂದೇಶಗಳನ್ನು ಅರಿತು ಅಳವಡಿಸಿಕೊಂಡು ಮುಂದೆ ಸಾಗಬೇಕು ಎಂಬುದೇ ಆಗಿದೆ ಎಂದು ತಿಳಿಹೇಳಿದರು. ಸಮಾಜದ ಅಂಕುಡೊಂಕುಗಳನ್ನು ತಿದ್ದಿದ ಮಹಾಪುರುಷರು ಸಮಾಜಕ್ಕೆ ದಾರಿದೀಪಗಳಾಗಿದ್ದಾರೆ ಆ ಬೆಳಕಿನಲ್ಲಿ ಆಚರಣೆ ಮಾಡುವುದ ಮುಲಕ ಉನ್ನತಿ ಹೊಂದಲು ಮುಂದಾಗಬೇಕೆಂದು ತಿಳಿಸಿದರು. ಜಗದ್ಗುರು ರೇಣುಕಾಚಾರ್ಯರ ಕುರಿತು ವಿಶೇಷ ಉಪನ್ಯಾಸ ನೀಡಿದ ಸರ್ಕಾರಿ ಪದವಿ ಮಹಾವಿದ್ಯಾಲಯ ಪ್ರಭಾರಿ ಪ್ರಾಚಾರ್ಯರಾದ ಡಾ. ಸುಭಾಶ್ಚಂದ್ರ ಕೌಲಗಿ ಮಾತನಾಡಿ, ರೇಣುಕಾಚಾರ್ಯರು ಜಗದ ಆದಿ ಜಗದ್ಗುರುಗಳಾಗಿದ್ದಾರೆ. ಇವರು ಬೋಧಿಸಿದ ತತ್ವಗಳು ವಿಶ್ವಕ್ಕೆ ಮಾದರಿಯಾಗಿವೆ. ಅಗಸ್ತ ಮಹಾಮುನಿಗೆ ಧರ್ಮಬೋಧನೆ ಧರ್ಮೋಪದೇಶ ಮಾಡಿದರು. ರಾವಣನ ಸಹೋದರ ವಿಭೀಷಣನ ಇಚ್ಛೆಯಂತೆ ಮೂರುಕೋಟಿ ಲಿಂಗಗಳನ್ನು ಸ್ಥಾಪನೆ ಮಾಡಿ ಧರ್ಮ ಪ್ರವರ್ಧಮಾನಗೊಳಿಸಿದರು ಎಂದು ಹೇಳಿದರು. ರೇಣುಕಾದಿಪಂಚಾಚಾರ್ಯರು ಯುಗಯುಗಗಳಿಂದಲೂ ಅವತರಿಸಿ ಬಂದಿದ್ದು ಪ್ರತಿಯುಗದಲ್ಲಿಯೂ ಧರ್ಮ ಮಾರ್ಗದರ್ಶನ ನೀಡಿದ್ದಾರೆ ಇವರ ಪೈಕಿ ಮೊದಲಿಗರೇ ರೇಣುಕಾಚಾರ್ಯರು ಎಂದು ಅವರು ಹೇಳಿದರು. ಈಗಿನ ರೇಣುಕಾಚಾರ್ಯರ ಪರಂಪರೆಯಲ್ಲಿ ಈ ಯುಗದಲ್ಲಿ ಇಂದಿನ ರಂಭಾಪುರಿ ಪೀಠದ ಜದ್ಗುರುಗಳು 121ನೇಯವರಾಗಿದ್ದು, ಈ ಪರಂಪರೆ ಅನುಚಾನವಾಗಿ ನಡೆದುಕೊಂಡು ಬಂದಿದೆ ಎಂದು ನುಡಿದರು. ರೇಣುಕಾಚಾರ್ಯರ ಸಂದೇಶಗಳನ್ನು ಅರಿತು ಪಾಲಿಸಬೇಕೆಂದು ಅವರು ಸಲಹೆ ನೀಡಿದರು.

ವೇದಿಕೆ ಮೇಲೆ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಚೆನ್ನಪ್ಪಗೌಡ ಮೋಸಂಬಿ, ವೀರಶೈವ ನೌಕರರ ಸಂಘದ ರಾಯಪ್ಪಗೌಡ ಹುಡೆದ ಜಿಲ್ಲಾಧ್ಯಕ್ಷರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಉತ್ತರಾದೇವಿ ಮಠಪತಿ ಇದ್ದರು.

## ಜಿಲ್ಲಾಧಿಕಾರಿಗಳಿಂದ ಹಳ್ಳಿಗಳಿಗೆ ಭೇಟಿ,ಕುಡಿಯುವ ನೀರು ಪೂರೈಕೆ ಪರಿಸ್ಥಿತಿ ಅವಲೋಕನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.13- ಬೇಸಿಗೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಬಿ.ಫೌ-ಜಿಯಾ ತರನ್ನುಮ್ ಅವರು ಬುಧವಾರ ಕಲಬುರಗಿ ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಪೂರೈಕೆ ಸ್ಥಿತಿಗತಿ ಕುರಿತಿ ಅವಲೋಕಿಸಿದರು.

ತಾಲೂಕಿನ ಭೀಮಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಜಾಫರಾಬಾದ ಗ್ರಾಮಕ್ಕೆ ತೆರಳಿದ ಡಿ.ಸಿ. ಅವರು, ಗ್ರಾಮದಲ್ಲಿನ ಆಶ್ರಯ ಕಾಲೋನಿ, ಪಂಡಿತ್ ದೀನ ದಯಾಳ ನಗರ, ಎಸ್.ಎಂ.ಕೃಷ್ಣ ಕಾಲೋನಿಗಳ ಮನೆ-ಮನೆಗಳಿಗೆ ಭೇಟಿ ನೀಡಿ ನೀರು ಪೂರೈಕೆ ಕುರಿತು ಸಾರ್ವಜನಿಕರಿಂದ ವಿಚಾರಿಸಿದರು. ನೀರು ಪೂರೈಕೆಯಲ್ಲಿ ವ್ಯತ್ಯವಾಗುತ್ತಿದೆ ಎಂದು ಸಾರ್ವಜನಿಕರು ದೂರಿದ್ದ-ರಿಂದ ಪ್ರತಿ ವಾರ ನೀರು ಪೂರೈಕೆ ಮಾಡಬೇಕೆಂದು ಎಲ್. & ಟಿ ಅಧಿಕಾರಿಗಳಿಗೆ ಸೂಚಿಸಿದಲ್ಲದೆ ನೀರು ಮಿತವಾಗಿ ಬಳಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಇನ್ನು ಜಾಫರಾಬಾದ ಗ್ರಾಮದಲ್ಲಿ ಜಲ್ ಜೀವನ ಮಿಷನ್ ಯೋಜನೆಯಡಿ ಮನೆ-ಮನೆಗೆ ನಲ್ಲಿ ಸಂಪರ್ಕ ಕಲ್ಪಿಸಲು ಈಗಾಗಲೆ ಡಿ.ಪಿ.ಆರ್. ಸಿದ್ದಪಡಿಸಿರುವ ಕಾರಣ ಯೋಜನೆ ಕೂಡಲೆ ಅನುಷ್ಠಾನ ಮಾಡಲಾಗುವುದು ಎಂದು ಗ್ರಾಮಸ್ಥರಿಗೆ ಡಿ.ಸಿ. ಇದೇ ಸಂದರ್ಭದಲ್ಲಿ ಅಭಯ ನೀಡಿದರು.

ನಂತರ ಸಾವಳಗಿ, ಹುಣಸಿಹಡಗಿಲ್ ಹಾಗೂ ಮಾಚನಾಳ ತಾಂಡಾ ಗ್ರಾಮಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಖಾಸಗಿ ಬೋರವೆಲ್, ಬಾವಿಗಳನ್ನು ಬಾಡಿಗೆ ಪಡೆದು ಗ್ರಾಮಸ್ಥರಿಗೆ ಕುಡಿಯುವ ನೀರು ಪೂರೈಸಬೇಕು. 15ನೇ ಹಣಕಾಸು ಮತ್ತು ಸ್ಥಳೀಯ ಸಂನ್ಮೂಲಗಳ ಅನುದಾನ ಬಳಸಿಕೊಂಡು ಇದನ್ನು ಪ್ರಥಮಾದ್ಯತೆ ಮೇಲೆ ಮಾಡುವಂತೆ ಪಿ.ಡಿ.ಓ ಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಮಾಚನಾಳ್ ತಾಂಡಾದಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ಮನೆಗಳಿಗೆ ಕಲ್ಪಿಸಿರುವ ಸಲ್ಲಿ ಸಂಪರ್ಕಗಳನ್ನು ವೀಕ್ಷಿಸಿದರು.

ಗರೂರು (ಬಿ) ಗ್ರಾಮದಲ್ಲಿನ ಬೋರವೆಲ್‌ಗಳ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶ ಇರುವ ಕಾರಣ, ಈ ನೀರು ಯಾವುದೇ ಕಾರಣಕ್ಕು ಕುಡಿಯಲು ಸರಬರಾಜು ಮಾಡಬಾರದು. ಗ್ರಾಮದಲ್ಲಿನ ತೋಟದಲ್ಲಿನ ಬಾವಿಯನ್ನು ಬಾಡಿಗೆ ಪಡೆದು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ನೀರು ಸರಬರಾಜು ಮಾಡಬೇಕೆಂದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯಾ, ತಾಲೂಕ ಪಂಚಾಯತ್ ಇ.ಓ ಮೊಹಮ್ಮದ್ ಸೈಯದ್ ಪಟೇಲ್, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ಎ.ಇ.ಇ. ಜಗದೇವ ಜೀವಣಗಿ ಸೇರಿದಂತೆ ಗ್ರಾಮಗಳ ಪಿ.ಡಿ.ಓ ಮತ್ತು ಗ್ರಾಮ ಆಡಳಿತಾಧಿಕಾರಿಗಳು ಇದ್ದರು.

## ಕುಡಿಯುವ ನೀರಿನ ಜಲಮೂಲವಾದ ಭೀಮಾ ನದಿಯಲ್ಲಿ ಹೋಳಿಹಬ್ಬವಾದ ನಂತರ ಬಣ್ಣವನ್ನು ನದಿಯಲ್ಲಿ ತೊಳೆದುಕೊಳ್ಳಬಾರದು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 13, ಯಾದಗಿರಿ ನಗರದಲ್ಲಿ ಈಗಾಗಲೇ ಬೇಸಿಗೆ ಪ್ರಾರಂಭವಾಗಿರುವುದರಿಂದ ಕುಡಿಯುವ ನೀರಿನ ಜಲಮೂಲಗಳನ್ನು ಸಂರಕ್ಷಿಸುವುದು ಹಾಗೂ ಉಳಿಸುವುದು ಅತ್ಯಂತ ಅವಶ್ಯಕವಾಗಿರುತ್ತದೆ ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ತಿಳಿಸಿದ್ದಾರೆ.

2025ರ ಮಾರ್ಚ್ 14ರ ಶುಕ್ರವಾರ ರಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರ ಸೂಚನೆಯ ಅನ್ವಯ ಹೋಲಿ ಹಬ್ಬವನ್ನು ಯಾದಗಿರಿ ನಗರದಲ್ಲಿ ಆಚರಣೆ ಮಾಡುತ್ತಿರುವುದರಿಂದ ಯಾದಗಿರಿ ನಗರಕ್ಕೆ ನೀರು ಸರಬರಾಜು ಮಾಡುವ ಕುಡಿಯುವ ನೀರಿನ ಜಲಮೂಲವಾದ ಭೀಮಾ ನದಿಯಲ್ಲಿ ಹೋಳಿಹಬ್ಬವಾದ ನಂತರ ಬಣ್ಣವನ್ನು ನದಿಯಲ್ಲಿ ತೊಳೆದುಕೊಳ್ಳಬಾರದು ಹಾಗೂ ಆ ದಿನ ನಗರದಲ್ಲಿ ಬಣ್ಣವನ್ನು ಆಡುವುದರಿಂದ ನೀರು ಸರಬರಾಜಿನ ಸಮಯದಲ್ಲಿ ವ್ಯತ್ಯಯ ಉಂಟಾಗಬಹುದು ಮತ್ತು ನೀರನ್ನು ಪೋಲಾಗದಂತೆ ನೋಡಿಕೊಳ್ಳಬೇಕು ನಗರ ಸಭೆಗೆ ಸಹಕರಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೂಪರ್ ಸ್ಪೆಷಾಲಿಟಿ ವೈದ್ಯರ ನಿವೃತ್ತಿ ವಯಸ್ಸು ಹೆಚ್ಚಳಕ್ಕೆ ಚಿಂತನೆ: ಡಾ. ಶರಣ್ ಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮಾರ್ಚ್ 13: ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಸೂಪರ್-ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ವೈದ್ಯರ ನಿವೃತ್ತಿ ವಯಸ್ಸನ್ನು ಹೆಚ್ಚಿಸುವ ಬಗ್ಗೆ ಚಿಂತನೆ ನಡೆದಿದೆ.

ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ಪತ್ರಿಕಾ ಪ್ರಕಟಣೆಯಲ್ಲಿ ಈ ಮಾಹಿತಿ ನೀಡಿದ್ದಾರೆ.

ಜಯದೇವ ಹೃದಯ ರಕ್ತನಾಳ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ವೈದ್ಯರೊಂದಿಗೆ ಗುರುವಾರ ನಡೆದ ಸಂವಾದದ ವೇಳೆ ಸಚಿವರು ಈ ವಿಷಯ ತಿಳಿಸಿದ್ದಾರೆ.

ಸಂವಾದದ ವೇಳೆ ಜಯದೇವದ ಹಿರಿಯ ವೈದ್ಯರು ಕೆಲವು ವಿಷಯ ಪ್ರಸ್ತಾಪಿಸಿದರು. ವೈದ್ಯಕೀಯ ಶಿಕ್ಷಣ ಮತ್ತು ತರಬೇತಿ ಪಡೆದ ನಂತರ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ವೈದ್ಯರಾಗಿ ಕಾರ್ಯ ನಿರ್ವಹಿಸಲು ಅತಿ ಹೆಚ್ಚು ವರ್ಷಗಳನ್ನು



ವ್ಯಯಿಸಿರಲಾಗಿರುತ್ತದೆ. 60 ನೇ ವಯಸ್ಸಿನಲ್ಲಿ ನಿವೃತ್ತರಾಗುವ ಮೊದಲು ನಮಗೆ 20–25 ವರ್ಷಗಳ ಕಾಲ ಮಾತ್ರ ಸೇವೆ ಸಲ್ಲಿಸಲು ಅವಕಾಶ ಲಭ್ಯವಾಗಿರುತ್ತದೆ ಎಂದು ವೈದ್ಯರು ಗಮನ ಸೆಳೆದರು.

ಆಗ ಸಚಿವರು ಮಾತನಾಡಿ, ಸೂಪರ್-ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಅನುಭವಿ ವೈದ್ಯರನ್ನು ಉಳಿಸಿಕೊಳ್ಳಲು ನಿವೃತ್ತಿ ವಯಸ್ಸನ್ನು ವಿಸ್ತರಿಸಲು ಸರ್ಕಾರ ಉತ್ಸುಕವಾಗಿದೆ ಎಂದು ವೈದ್ಯಕೀಯ ವೃತ್ತಿಪರರಿಗೆ ಭರವಸೆ ನೀಡಿದರು.

"ಉತ್ತಮ ಆರೋಗ್ಯ ಸೇವೆಗಳನ್ನು ಖಚಿತಪಡಿಸಿಕೊಳ್ಳಲು ಮತ್ತು ನಮ್ಮ ಅನುಭವಿ ವೈದ್ಯರ ಸೇವೆಯನ್ನು ಸದುಪಯೋಗಪಡಿಸಿಕೊಳ್ಳಲು, ನಾನು ಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಈ ವಿಷಯವನ್ನು ಚರ್ಚಿಸುತ್ತೇನೆ ಮತ್ತು ಸೂಪರ್-ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿನ ವೈದ್ಯರ ನಿವೃತ್ತಿ ವಯಸ್ಸನ್ನು ಹೆಚ್ಚಿಸಲು ಪ್ರಸ್ತಾಪಿಸುತ್ತೇನೆ" ಎಂದು ಡಾ. ಪಾಟೀಲ್ ಸಭೆಯಲ್ಲಿ ಹೇಳಿದ್ದಾರೆ.

ವಿಮೆ ಸೇವೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಕೆಲಸ ಮಾಡುವ ವೈದ್ಯರಿಗೆ ಗಮನಾರ್ಹ ಸೌಲಭ್ಯಗಳನ್ನು ಸಚಿವರು ಇದೇ ಸಂದರ್ಭದಲ್ಲಿ ಘೋಷಿಸಿದ್ದಾರೆ.

ಪ್ರಸ್ತುತ, ಈ ವೈದ್ಯರು ಯಾವುದೇ ಸರ್ಕಾರಿ ವಿಮಾ ಯೋಜನೆಯಡಿಯಲ್ಲಿ ಒಳಗೊಳ್ಳುವುದಿಲ್ಲ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಡಿಯಲ್ಲಿ ಈಗಾಗಲೇ ಲಭ್ಯವಿರುವ ಜೀವನ ಸಂಜೀವಿನಿ ಎಂಬ ಯೋಜನೆಯನ್ನು ಜಾರಿಗೆ ತರಲು ಯೋಜಿಸುತ್ತಿದೆ ಎಂದು ತಿಳಿಸಿದ್ದಾರೆ.

ವೈದ್ಯಕೀಯ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲು, ಜಯದೇವ ಆಸ್ಪತ್ರೆಗೆ ರೋಬೋಟಿಕ್ ಶಸ್ತ್ರಚಿಕಿತ್ಸಾ ಸೌಲಭ್ಯಗಳನ್ನು ಪರಿಚಯಿಸಲು ಸರ್ಕಾರ ಹೆಚ್ಚುವರಿ ಹಣವನ್ನು ಮಂಜೂರು ಮಾಡುತ್ತಿದೆ ಎಂದು ಸಚಿವರು ಘೋಷಿಸಿದ್ದಾರೆ.

"ವೈದ್ಯಕೀಯ ಕ್ಷೇತ್ರದಲ್ಲಿ ನಾವೀನ್ಯತೆ ಮತ್ತು ಮುಂಚೂಣಿ ತಂತ್ರಜ್ಞಾನ ತರಲು, ಜಯದೇವ ಸಂಸ್ಥೆಯಲ್ಲಿ ಆಧುನಿಕ ಸಾಧನಗಳನ್ನು ಅಳವಡಿಸಲು ಮತ್ತು ಮೂಲಸೌಕರ್ಯ ಅಭಿವೃದ್ಧಿಪಡಿಸಲು ನಾವು ಬದ್ಧರಾಗಿದ್ದೇವೆ ಎಂದು ಡಾ. ಶರಣ್ ಪ್ರಕಾಶ್ ಪಾಟೀಲ್ ಸ್ಪಷ್ಟಪಡಿಸಿದ್ದಾರೆ. ಇತರ ಪ್ರಮುಖ ಘೋಷಣೆಗಳು

*ಮಕ್ಕಳ ಹೃದಯ ಶಸ್ತ್ರಚಿಕಿತ್ಸಾ ವಿಭಾಗಕ್ಕೆ ಐದು ಹೆಚ್ಚುವರಿ ಆಪರೇಷನ್ ಥಿಯೇಟರ್ ಮಂಜೂರು.

*ಆಸ್ಪತ್ರೆಯಲ್ಲಿ ಮೀಸಲಾದ ಸಂಶೋಧನಾ ವಿಭಾಗದ ಸ್ಥಾಪನೆ.

*ವೈದ್ಯರಿಗೆ ಡಿಜಿಟಲೀಕೃತ ವೈದ್ಯಕೀಯ ದಾಖಲೆಗಳಿಗಾಗಿ ಇ-ಆಸ್ಪತ್ರೆ ಮತ್ತು ಕೇಂದ್ರೀಯ ಮೇಲ್ವಿಚಾರಣಾ ವ್ಯವಸ್ಥೆ

*ಒಪ್ಪಂದ ಮತ್ತು ಹೊರಗುತ್ತಿಗೆ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಗೆ ಸಂಬಳ ಹೆಚ್ಚಳ

# ಮಾನವನಿಗೆ ಧರ್ಮದ ಬೆಳಕು ಅಗತ್ಯ: ಹಾವಗಿಲಿಂಗೇಶ್ವರ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 13 : ಹನ್ನೊಂದು ದಿನಗಳ ಜಗದ್ಗುರು ರೇಣುಕಾಚಾರ್ಯರ ಜಯಂತಿ ಯುಗಮಾನೋತ್ಸವ ಹಾಗೂ ಹಾವಗಿ ಸ್ವಾಮಿ ಜಾತ್ರಾ ಮಹೋತ್ಸವ ಭಾಲ್ಕಿ ತಾಲ್ಲೂಕಿನ ಶಿವಣಿ ಗ್ರಾಮದಲ್ಲಿ ಬುಧವಾರ ಸಂಭ್ರಮದ ಮಧ್ಯೆ ತೆರೆ ಕಂಡಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಅಲಂಕೃತ ರಥದಲ್ಲಿ ರೇಣುಕಾಚಾರ್ಯರ ಭಾವಚಿತ್ರದ ಅದ್ದೂರಿ ಮೆರವಣಿಗೆ ನಡೆಯಿತು. ಡೊಳ್ಳು ಕುಣಿತ, ಪುರವಂತರ ಕುಣಿತ, ಭಜನೆ, ಕೋಲಾಟ, ಕುಂಭ ಕಳಶ ಹೊತ್ತ ಮಹಿಳೆಯರು ಮೆರವಣಿಗೆ ಮೆರುಗು ಹೆಚ್ಚಿಸಿದರು.

ರೇಣುಕಾಚಾರ್ಯರಿಗೆ ಜಯವಾಗಲಿ, ಹಾವಗಿ ಸ್ವಾಮಿ ಅವರಿಗೆ ಜಯವಾಗಲಿ ಎಂಬ ಘೋಷಣೆಗಳು ಮೊಳಗಿದವು. ಮಠದ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮೆರವಣಿಗೆಯ ನೇತೃತ್ವ ವಹಿಸಿದ್ದರು. ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಇದಕ್ಕೂ ಮುನ್ನ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಶಿವಣಿ–ಹಲಬರ್ಗಾ–ಹೈದರಾಬಾದ್ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು, ಮಾನವನಿಗೆ ಧರ್ಮದ ಬೆಳಕು ಅಗತ್ಯವಾಗಿದೆ ಎಂದು ಹೇಳಿದರು.

ಧರ್ಮವನ್ನು ಪಾಲಿಸುವವರು, ಧರ್ಮದ ಮಾರ್ಗದಲ್ಲಿ ಸಾಗುವವರನ್ನು ಧರ್ಮವೇ ರಕ್ಷಿಸುತ್ತದೆ. ಧರ್ಮದ ಮಾರ್ಗದಲ್ಲಿ ನಡೆಯದಿದ್ದರೆ ಮುಕ್ತಿ ಸಿಗದು ಎಂದು ಹೇಳಿದರು.

ಕೊಲನಪಾಕದ ವೀರಸೋಮೇಶ್ವರ ಉದ್ಭವ ಲಿಂಗದಲ್ಲಿ ಅವತರಿಸಿದ ರೇಣುಕಾಚಾರ್ಯರು ಎಲ್ಲೆಡೆ ಧರ್ಮ ಪ್ರಚಾರ ಮಾಡಿದ್ದರು. ರಂಭಾಪುರಿ ಪೀಠ ಸ್ಥಾಪಿಸಿದ್ದರು. ಜನರಿಗೆ ಲಿಂಗ, ವಿಭೂತಿ, ರುದ್ರಾಕ್ಷಿ ಕೊಟ್ಟಿದ್ದರು. ಆಧ್ಯಾತ್ಮದ ದಾರಿ ತೋರಿದ್ದರು. ಮಾನವ ಕಲ್ಯಾಣದ ಕಾರ್ಯಗಳನ್ನು ಮುಗಿಸಿ ಮತ್ತೆ ಲಿಂಗದಲ್ಲಿ ಐಕ್ಯರಾಗಿದ್ದರು ಎಂದು ತಿಳಿಸಿದರು.

ರೇಣುಕಾಚಾರ್ಯರು ಸಕಲ ಜೀವರಾಶಿಗಳಿಗೆ ಒಳಿತು ಬಯಸಿದ್ದರು. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಶ್ರೇಷ್ಠ ಸಂದೇಶ ನೀಡಿದ್ದರು ಎಂದು ನುಡಿದರು.

ಗ್ರಾಮದ ಗಣ್ಯರು ಉಪಸ್ಥಿತರಿದ್ದರು.

# ಬೋಧಕ-ಬೋಧಕೇತರ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ : ಸಚಿವ ಡಾ.ಎಂ.ಸಿ.ಸುಧಾಕರ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.13: ರಾಜ್ಯದ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಗಳಲ್ಲಿ 2000 ಬೋಧಕ ಮತ್ತು ಬೋಧಕೇತರ ಹುದ್ದೆಗಳ ಭರ್ತಿಗೆ ಶೀಘ್ರದಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ: ಎಂ.ಸಿ.ಸುಧಾಕರ್ ವಿಧಾನಸಭೆಯಲ್ಲಿ ತಿಳಿಸಿದರು. ಇಂದು ವಿಧಾನಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಕೊಪ್ಪಳ ವಿಧಾನಸಭಾ ಕ್ಷೇತ್ರದ ರಾಘವೇಂದ್ರ ಬಸವರಾಜ್ ಹಿಟ್ನಾಳ್ ಕೆ ಅವರ ಪ್ರಶ್ನೆಗೆ ಉತ್ತರಿಸಿದ ಅವರು ರಾಜ್ಯದ ಹಲವು ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಹುದ್ದೆಗಳ ಕೊರತೆ ಇದೆ. ಕಾಲಾಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಒಟ್ಟು 2000 ಹುದ್ದೆಗಳ ಭರ್ತಿಗೆ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ರಾಜ್ಯದಲ್ಲಿ



ಒಟ್ಟು 18 ಹೊಸ ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳು ಮಂಜೂರಾಗಿರುತ್ತವೆ. ಅದರಲ್ಲಿ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಕಟ್ಟಡ ಕಾಮಗಾರಿ ಪೂರ್ಣಗೊಂಡು ಶೈಕ್ಷಣಿಕ ಚಟುವಟಿಕೆ ಪ್ರಾರಂಭಗೊಂಡಿದೆ. ಅರಸೀಕೆರೆ ಮತ್ತು ದೇವದುರ್ಗ ಇಂಜಿನಿಯರಿಂಗ್ ಕಾಲೇಜುಗಳ ಕಟ್ಟಡ ನಿರ್ಮಾಣ ಪ್ರಗತಿಯಲ್ಲಿದೆ. ಹೊಸ ಇಂಜಿನಿಯರಿಂಗ್ ಹಾಗೂ ಪಾಲಿಟೆಕ್ನಿಕ್ ಸರ್ಕಾರಿ ಕಾಲೇಜುಗಳನ್ನು ಸ್ಥಾಪಿಸಲು 11–07–2024ರಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯ ವರದಿಯನುಸಾರ ಮುಂದಿನ ಕ್ರಮ ವಹಿಸಲಾಗುವುದು ಎಂದರು.

ಪ್ರಸ್ತುತ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ತಳಕಲ್ ಗ್ರಾಮದಲ್ಲಿ ಹಾಗೂ ಗಂಗಾವತಿಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ತಳಕಲ್ ನಲ್ಲಿ ವಿಟಿಯು ನೊಂದಿಗೆ ಒಪ್ಪಂದ ಮಾಡಿಕೊಂಡು ದೊಡ್ಡಮಟ್ಟದ ಕೌಶಲ್ಯ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ ಎಂದು ವಿವರಿಸಿದರು.

# ಡಾ.ಬಸವರಾಜ ದಯಾಸಾಗರ ಇವರಿಗೆ "ಸಾಹಿತ್ಯ ಸೌರಭ" ರಾಷ್ಟ್ರ ಪ್ರಶಸ್ತಿ.

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಉಪ ಕಾರಾಗೃಹ ಹುಮನಾಬಾದನಲ್ಲಿ ಸಹಾಯಕ ಜೈಲರ್ ಆಗಿ ಕತ9ವ್ಯ ನಿವ9ಹಿಸುತ್ತಿರುವ ಡಾ.ಬಸವರಾಜ ದಯಾಸಾಗರ ಇವರು 2025ನೇ ಸಾಲಿನ "ಸಾಹಿತ್ಯ ಸೌರಭ" ರಾಷ್ಟ್ರ ಪ್ರಶಸ್ತಿಗೆ ಆಯ್ಕೆ ಆಗಿರುವರು ಎಂದು ಕನಾ9ಟಕ ರಾಜ್ಯ ಬರಹಗಾರರ ಸಂಘ(ರಿ) ಹೂವಿನ ಹಡಗಲಿಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಮಧುನಾಯ್ಕ ಲಂಬಾಣಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿರುವರು. ತಮ್ಮ ಶಾಲಾ ದಿನಗಳಲ್ಲಿಯೇ ಸಾಹಿತ್ಯದ ಹವ್ಯಾಸ ಬೆಳಸಿಕೊಂಡ ಡಾ. ಬಸವರಾಜ ದಯಾಸಾಗರ ಇವರು ನೂರಾರು ಕವಿತೆ, ಹನಿಗವನ, ಬರಹಗಳ ಮೂಲಕ ಹೆಸರು ಮಾಡಿರುವರು. ಇವರ "ಸಾವಿರದಾ ನೋವುಗಳು" ಕೃತಿಗೆ ಗುಲಬಗಾ9 ವಿಶ್ವವಿದ್ಯಾಲಯ ಕಲಬುರಗಿ ಪ್ರಸಾರಂಗವು "ಕನಾ9ಟಕ ರಾಜ್ಯೋತ್ಸವ ಪ್ರಶಸ್ತಿ" ಮತ್ತು ನಗದು ಬಹುಮಾನ ನೀಡಿ ಗೌರವಿಸಿದೆ. ಕುವೆಂಪು ಹೆಸರಿನ "ರಾಜ್ಯ ಅನಿಕೇತನ" ಸೇರಿದಂತೆ "ಸಾಹಿತ್ಯ ಸಿರಿ" "ಕಲಾ ಸೇವಾ ರತ್ನ" "ಸಮಾಜ ಕಾಯ9 ಜನ ಸೇವಾ ರತ್ನ ರಾಜ್ಯ ಪ್ರಶಸ್ತಿ" "ಧರಿ ಸಿರಿ" "ಕನಕ ಸಿರಿ" "ಕಾರಾಗೃಹ ರತ್ನ" "ಕಾವ್ಯ ಚೂಡಾಮಣಿ ರತ್ನ" "ಬೇಂದ್ರೆ ಕಾವ್ಯ ರತ್ನ" "ಸಾಹಿತ್ಯಪ್ರಭಾ" "ರಾಜರತ್ನಂ" "ಕಾವ್ಯ ಕಲಾ ಭೂಷಣ" "ವಿನಯ ಚೂಡಾಮಣಿ ರತ್ನ" "ಧರಿನಾಡಶ್ರೀ" ಹೀಗೆ ಹಲವಾರು ರಾಜ್ಯ ಪ್ರಶಸ್ತಿಗೆ ಭಾಜನರಾಗಿರುವರು.

ಕಾರಾಗೃಹ ಸುಧಾರಣಾ ಸೇವಾ ಇಲಾಖೆ ಕೂಡಾ ಇವರಿಗೆ ಪ್ರೋತ್ಸಾಹ ನೀಡಿದೆ.



ಕನಾ9ಟಕ ಸರಕಾರವು ಕಾರಾಗೃಹ ಮತ್ತು ಸುಧಾರಣಾ ಇಲಾಖೆಯಲ್ಲಿ ಉತ್ತಮ ಸೇವೆ ಸಲ್ಲಿಸಿರುವ ಪ್ರಯುಕ್ತ ಇವರಿಗೆ 2022ನೇ ಸಾಲಿನ "ಮುಖ್ಯ ಮಂತ್ರಿ ಪದಕ" ನೀಡಿರುವರು. ಮಾನ್ಯ ಪೋಲಿಸ್ ಮಹಾ ನಿದೇ9ಶಕರು ಕಾರಾಗೃಹ ಮತ್ತು ಸುಧಾರಣಾ ಸೇವೆ ಬೆಂಗಳೂರುರವರು "BEST PRISON OFFICER OF THE MONTH "May 2022 ಪ್ರಶಸ್ತಿ ನೀಡಿರುವರು. ತಮಿಳುನಾಡಿನ APCA( Academy of prisons & Correctional Administration) VELLORE ನಲ್ಲಿ ತರಬೇತಿ ಅವಧಿಯಲ್ಲಿ ಇವರ ನಡವಳಿಕೆ, ಕಾಯ9ಕ್ಷಮತೆ ಹಾಗೂ ಎಲ್ಲಾ ಚಟುವಟಿಕೆಗಳಲ್ಲಿ ಭಾಗವಹಿಸುವದು ಪರಿಗಣಿಸಿ "SPECIAL APPRECIATION AWARD" ನೀಡಿ ಗೌರವಿಸಿದೆ. ಬೀದರ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಸಸ್ತಾಪೂರದಲ್ಲಿ 2022ನೇ ನವೆಂಬರ್ 9 ಮತ್ತು 10ರಂದು ಜರುಗಿದ 'ಪ್ರಥಮ ಕರನಾಡು ಸಾಹಿತ್ಯ ಸಮ್ಮೇಳನದ ಸವಾ9ಧ್ಯಕ್ಷತೆಯ ಗೌರವ ಲಭಿಸಿದೆ. ವಿಶ್ವ ವಿಖ್ಯಾತ ಮೈಸೂರು ದಸರಾ ಕವಿಗೋಷ್ಠಿ ಮತ್ತು ರಾಜ್ಯ ಮಟ್ಟದ ಹಲವಾರು ಕವಿಗೋಷ್ಠಿಯಲ್ಲಿ ಭಾಗವಹಿಸಿ ಕಾವ್ಯವಾಚನ ಮಾಡಿರುವರು.

ಡಾ.ಬಸವರಾಜ ದಯಾಸಾಗರ ಇವರ ಬರಹಗಳಲ್ಲಿ ಸಾಮಾಜಿಕ ಅಸಮಾನತೆ, ಶೋಷಿತ, ಮಹಿಳಾ ಮತ್ತು ದಲಿತ ಸಂವೇದನೆಯ ಅಭಿವ್ಯಕ್ತಿ ಕಾಣತ್ತೇವೆ. ಇವರ ಸಮಾಜಮುಖಿ ಸಾಹಿತ್ಯ ಕೃಷಿ ಪರಿಗಣಿಸಿ ಡಾ. ಬಸವರಾಜ ದಯಾಸಾಗರ ಇವರಿಗೆ ರಾಷ್ಟ್ರ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಿದ್ದು, ಕನಾ9ಟಕ ರಾಜ್ಯ ಬರಹಗಾರರ ಸಂಘ(ರಿ) ಹೂವಿನ ಹಡಗಲಿ ಇವರು ಆಯೋಜಿಸಿರುವ 'ರಾಷ್ಟ್ರಮಟ್ಟದ ನುಡಿ ವೈಭವ –2025' ರ ಸಮಾರಂಭದಲ್ಲಿ ಶಿವಮೊಗ್ಗದ ಕನಾ9ಟಕ ಸಂಘದಲ್ಲಿ ಇದೇ ಮಾಚ್ 16 ರಂದು ಬೆಳಗ್ಗೆ ರಾಷ್ಟ್ರ ಮಟ್ಟದ "ಸಾಹಿತ್ಯ ಸೌರಭ" ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದೆಂದು ಮಧುನಾಯ್ಕ ಲಂಬಾಣಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿರುವರು.

# ಖಾಲಿ ಇರುವ ವೈದ್ಯರ ಹುದ್ದೆ ಭರ್ತಿಗೆ ಕ್ರಮ : ಸಚಿವ ದಿನೇಶ್ ಗುಂಡೂರಾವ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.13: ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತಜ್ಞರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ ದಂತ ಆರೋಗ್ಯ ಅಧಿಕಾರಿಗಳನ್ನು ನೇಮಕ ಮಾಡಲು ಕ್ರಮ ವಹಿಸಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಇಂದು ವಿಧಾನಸಭಾ ಕಲಾಪದ ಪ್ರಶ್ನೋತ್ತರ ವೇಳೆಯಲ್ಲಿ ಕಾಶಪ್ಪನವರ ವಿಜಯಾನಂದ ಶಿವಶಂಕರಪ್ಪ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಇಲಾಖೆಯಲ್ಲಿ ಖಾಲಿ ಇರುವ 120 ತಜ್ಞ ವೈದ್ಯರು ಹಾಗೂ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳ ಭರ್ತಿಗೆ ಆರ್ಥಿಕ



ಇಲಾಖೆಯು ಸಹಮತಿ ನೀಡಿದ್ದು, ಸದರಿ ಹುದ್ದೆಗಳನ್ನು ನಿಯಮಾನುಸಾರ ನೇರ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಇಲಾಖೆಯಲ್ಲಿ ಕಾಲಕಾಲಕ್ಕೆ ಖಾಲಿಯಾಗುವ ಹುದ್ದೆಗಳನ್ನು ನಿಯಮಾನುಸಾರ ನೇರ ನೇಮಕಾತಿ, ಮುಂಬಡ್ತಿ, ಗುತ್ತಿಗೆ ಆಧಾರದಡಿ, ವರ್ಗಾವಣೆ ಮೂಲಕ ಭರ್ತಿ ಮಾಡುವ ಮೂಲಕ ಆಸ್ಪತ್ರೆಗಳಿಗೆ ಬರುವ ರೋಗಿಗಳಿಗೆ ಉತ್ತಮ ಸೇವೆ ನೀಡಲಾಗುತ್ತಿದೆ ಎಂದು ತಿಳಿಸಿದರು.

2017–18 ಮತ್ತು 2019–20ನೇ ಸಾಲಿನಲ್ಲಿ ರಾಜ್ಯದಲ್ಲಿ 62 ಹೊಸ ತಾಲ್ಲೂಕುಗಳನ್ನು ರಚಿಸಲಾಗಿದ್ದು, ಇದರಲ್ಲಿ ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲ್ಲೂಕು ಸಹ ಒಳಗೊಂಡಿರುತ್ತದೆ. ಹೊಸದಾಗಿ ರಚಿಸಲಾದ 62 ತಾಲ್ಲೂಕುಗಳಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಸೃಜಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದ್ದು ಆರ್ಥಿಕ ಇಲಾಖೆ ಸಹಮತಿ ಸ್ವೀಕೃತವಾದ ಕೂಡಲೇ ಬಾಗಲಕೋಟೆ ಜಿಲ್ಲೆಯ ಇಳಕಲ್ ನಲ್ಲಿ ಹೊಸ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿಗೆ ಹುದ್ದೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

# ಸೋಷಿಯಲ್ ಮೀಡಿಯಾ ಮಾನಿಟರ್‌ಗೆ ಪ್ರತಿ ಠಾಣೆಯಲ್ಲಿ ವಿಶೇಷ ವಿಭಾಗ ಸ್ಥಾಪನೆ: ಪರಮೇಶ್ವರ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಮಾ.13: ಸಾಮಾಜಿಕ ಜಾಲತಾಣಗಳ ದುರುಪಯೋಗ ನಿಲ್ಲಿಸಲು ದೇಶದಲ್ಲಿ ಮೊದಲ ಬಾರಿಗೆ ವಿಶೇಷ ಪೊಲೀಸ್ ವಿಭಾಗವನ್ನೇ ಕರ್ನಾಟಕ ಸರ್ಕಾರ ಮಾಡಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ನವೀನ್ ಪ್ರಶ್ನಿಸಿ, ಸಾಮಾಜಿಕ ಜಾಲತಾಣ ನಿಗಾವಹಿಸಲು ಪೊಲೀಸ್ ಇಲಾಖೆ ಪ್ರತ್ಯೇಕ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಗೆ ಸರ್ಕಾರ ಮತ್ತಷ್ಟು ಶಕ್ತಿಯನ್ನ ಕೊಡಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹರಡಿ ಹೆಚ್ಚು ಗಲಭೆಗಳು ಆಗುತ್ತಿವೆ. ಸಾಮಾಜಿಕ ಜಾಲತಾಣ ನಿಯಂತ್ರಣಕ್ಕಾಗಿ ಗೃಹ ಇಲಾಖೆ ವಿಶೇಷ ಬಜೆಟ್ ನೀಡಬೇಕು. ಸಾಮಾಜಿಕ ಜಾಲತಾಣ ಮಾನಿಟರ್ ಮಾಡಲು ಕ್ರಮವಹಿಸಬೇಕು. ಇದಕ್ಕಾಗಿ ವಿಶೇಷ ಕಾನೂನು ಜಾರಿ ಮಾಡಬೇಕು ಎಂದು ಆಗ್ರಹಿಸಿದರು.

ಪ್ರಶ್ನೆಗೆ ಉತ್ತರಿಸಿದ ಸಚಿವ ಪರಮೇಶ್ವರ್ ಅವರು, ಸೋಷಿಯಲ್ ಮೀಡಿಯಾ ಬಹಳ ಉಪಯೋಗ ಆಗುತ್ತಿದೆ. ಅಷ್ಟೇ ದುರುಪಯೋಗವೂ ಸಹ ಆಗುತ್ತಿದೆ. ಟೆಕ್ನಾಲಜಿ ಇಲ್ಲದೆ ಬದುಕಲು ಸಾಧ್ಯವಿಲ್ಲ ಎನ್ನುವ ಸ್ಥಿತಿಗೆ ನಾವು



ತಲುಪಿದ್ದೇವೆ. ಫೇಸ್‌ಬುಕ್, ಎಕ್ಸ್, ಯೂಟ್ಯೂಬ್‌ಗಳನ್ನು ದುರುಪಯೋಗ ಮಾಡಿಕೊಂಡು ಸುಳ್ಳು ಸುದ್ದಿ ಹಬ್ಬಿಸುವ ಕೆಲಸ ಆಗುತ್ತಿದೆ. ಇದನ್ನ ನಿಯಂತ್ರಣ ಮಾಡಲು ದೇಶದಲ್ಲೇ ಮೊದಲ ಬಾರಿಗೆ ಒಂದು ವಿಭಾಗ ಪ್ರಾರಂಭ ಮಾಡಿದ್ದೇವೆ. ಎಡಿಜಿಪಿ ಸೈಬರ್ ಕ್ರೈಮ್ ವಿಭಾಗ ನೇಮಕ ಮಾಡಲಾಗಿದೆ. ಪ್ರತಿ ಠಾಣೆಯಲ್ಲಿ ಸೋಷಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್ ಮಾಡಿದ್ದೇವೆ. 247 ಪೊಲೀಸರು ಮಾನಿಟರ್ ಮಾಡುತ್ತಾರೆ. ಇಂತಹ ಕೇಸ್ ಕಂಡುಬಂದ ಕೂಡಲೇ ಸುಮೋಟೋ ಕೇಸ್ ಹಾಕುತ್ತಿದ್ದೇವೆ ಎಂದು ಹೇಳಿದರು.

ಫ್ಯಾಕ್ಟ್ ಚೆಕ್ ಮಾಡುವ ???ಪ್ ಮಾಡಿದ್ದೇವೆ. ನಿತ್ಯ ಮಾನಿಟರ್ ಮಾಡುವ ಕೆಲಸ ಮಾಡುತ್ತಿದ್ದೇವೆ. ಸುಳ್ಳು ಸುದ್ದಿ ಬಂದರೆ ಕ್ರಮ ತೆಗೆದುಕೊಳ್ಳುತ್ತಿದ್ದೇವೆ. ಪೊಲೀಸ್ ಠಾಣೆಯಲ್ಲಿ ಡೆಸ್ಕ್ ಮಾಡಿಕೊಂಡಿದ್ದೇವೆ. ಠಾಣೆಯಲ್ಲಿ ಮೀಡಿಯಾಗಾಗಿ ಒಂದು ಡೆಸ್ಕ್, ಲಾ ಆಯಿಂಡ್ ಆರ್ಡರ್‌ಗೆ ಒಂದು ಡೆಸ್ಕ್, ವೈಯಕ್ತಿಕ ಡೆಸ್ಕ್, ಸಂಘಟನೆ ಡೆಸ್ಕ್ ಅನ್ನು ಪೊಲೀಸ್ ಠಾಣೆಯಲ್ಲಿ ಮಾಡಿದ್ದೇವೆ ಎಂದು ನುಡಿದರು.

ಡ್ರಗ್ಸ್ ಹಾವಳಿ, ಆರ್ಥಿಕ ಅಪರಾಧ ಜಾಸ್ತಿ ಆಗುತ್ತಿದೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ಸೈಬರ್ ಕ್ರೈಮ್ ಜಾಸ್ತಿ ಆಗಿದ್ದು, ಈ ವರ್ಷ 22,000 ಕೇಸ್ ದಾಖಲಾಗಿದೆ. ಕೊಲೆ, ರೇಪ್, ಪೋಕ್ಸೋ ಕೇಸ್ ಕಡಿಮೆ ಆಗಿದೆ. ಆದರೆ ಸೈಬರ್ ಕ್ರೈಮ್ ಕೇಸ್‌ಗಳು ಜಾಸ್ತಿ ಆಗುತ್ತಿದೆ. ಹೀಗಾಗಿ ಸರ್ಕಾರ ಇದೆಲ್ಲವನ್ನೂ ಗಂಭೀರವಾಗಿ ಪರಿಗಣಿಸಿ ಕ್ರಮಕ್ಕೆ ಮುಂದಾಗಿದೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.